ಸಂಪುಟ: 04 ಸಂಚಿಕೆ: 170 ಪುಟಗಳು: 08 ಭಾನುವಾರ 01 ಸೆಪ್ಟೆಂಬರ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಜೀವನಾವಧಿ ಅಲ್ಲ, ಪ್ರಾಪಂಚಿಕ ವಿಷಯಗಳೆಲ್ಲ ಕ್ಷಣಿಕ. ಆದರೆ ಯಾರು ಇತರರಿಗಾಗಿ ಬಾಳುತ್ತಾರೋ, ಅವರೇ ನಿಜವಾಗಿ ಬಾಳುತ್ತಾರೆ. ಉಳಿದವರು ಜೀವನ ಮೃತರು.

## ಸಿಎಂ ಬದಲಾವಣೆ ಇಲ್ಲ, ಊಹಾಪೋಹಕ್ಕೆ ಅವಕಾಶವಿಲ್ಲ

• ಉದಯವಾಹಿನಿ, ಬೆಂಗಳೂರು

ಸಿಎಂ ರಾಜೀನಾಮೆ ಕೊಡುವ ಅಗತ್ಯವೇ ಇಲ್ಲ. ಹಾಗಾಗಿ 'ಅಕಸ್ಮಾತ್ ಬದಲಾವಣೆ' ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು. ಸದಾಶಿವನಗರದ ತಮ್ಮ ನಿವಾಸದ ಬಳಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಹಾಗೂ ನಾವು ರಾಜೀನಾಮೆ ಕೊಡುವ ಅಗತ್ಯವಿಲ್ಲ ಎಂದು ಸ್ಪಷ್ಟವಾಗಿ ಹೇಳಿರುವಾಗ 'ಅಕಸ್ಮಾತ್' ಪ್ರಶ್ನೆ ಬರುವುದಿಲ್ಲ. ಹೀಗಾಗಿ ಸಿಎಂ ಬದಲಾವಣೆ, ಮುಂದಿನ ಸಿಎಂ ಚರ್ಚೆಯೇ ಇಲ್ಲ. ಊಹಾಪೋಹಕ್ಕೂ ಅವಕಾಶವಿಲ್ಲ ಎಂದು ಅವರು ತಿಳಿಸಿದರು. ಮುಡಾ ಹಗರಣದಲ್ಲಿ ಸಿಎಂ ವಿರುದ್ಧ ಪ್ರಾಸಿಕ್ಯೂಷನ್ ವಿಚಾರಣೆ ನಡೆಯುತ್ತಿರುವುದರಿಂದ ಅದರ ಬಗ್ಗೆ ರಾಜ್ಯಪಾಲರ ಬಳಿ ಚರ್ಚೆ ಮಾಡುವುದಿಲ್ಲ. ಎಚ್.ಡಿ.ಕುಮಾರಸ್ವಾಮಿ, ಶಶಿಕಲಾ ಜೊಲ್ಲೆ, ಮುರುಗೇಶ ನಿರಾಣಿ, ಜನಾರ್ದನರೆಡ್ಡಿ ಹಗರಣದಲ್ಲಿ ಪ್ರಾಸಿಕ್ಯೂಷನ್ ನೀಡಬೇಕು ಎಂದು ನಮ್ಮ ಬೇಡಿಕೆ ಎಂದರು. ಕೋವಿಡ್ ಸಂದರ್ಭದಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ತನಿಖೆಗೆ ಸಂಬಂಧಿಸಿದಂತೆ ರಚಿಸಲಾಗಿರುವ ತನಿಖಾ ಆಯೋಗದ ಅವಧಿಯನ್ನು ಆರು ತಿಂಗಳು ವಿಸ್ತರಣೆ ಮಾಡಲಾಗಿದೆ ಎಂದು ತಿಳಿಸಿದರು.

## ಸರ್ಕಾರ ಅಸ್ಥಿರಗೊಳಿಸಲು ರಾಜ್ಯಪಾಲರ ಕಚೇರಿ ದುರ್ಬಳಕೆ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ರಾಜ್ಯಪಾಲರ ಕಚೇರಿ ದುರ್ಬಳಕೆ ಮಾಡಿಕೊಳ್ಳಲಾಗಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಕಿಡಿಕಾರಿದೆ. ಬಿಜೆಪಿ-ಜೆಡಿಎಸ್ ಷಡ್ಯಂತ್ರ ಹಾಗೂ ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ರಾಜ್ಯಪಾಲರ ನಡೆ ಖಂಡಿಸಿ ಇಂದು ವಿಧಾನಸೌಧದ ಗಾಂಧಿ ಪ್ರತಿಮೆಯಿಂದ ರಾಜಭವನದವರೆಗೆ ಹಮ್ಮಿಕೊಂಡಿದ್ದ 'ರಾಜಭವನ ಚಲೋ' ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದರು. ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ರಾಜ್ಯಪಾಲರ ಕಚೇರಿಯನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ. ಈ ರೀತಿ ಮಾಡುವುದು ತಪ್ಪು. ಒಂದು ಕಣ್ಣಿಗೆ ಬೆಣ್ಣೆ, ಇನ್ನೊಂದು ಕಣ್ಣಿಗೆ ಸುಣ್ಣ. ಇದು ಯಾವ ರೀತಿಯ ನ್ಯಾಯ. ಕಾನೂನಿನ ವಿರುದ್ಧವಾಗಿ ರಾಜ್ಯಪಾಲರು ಕೆಲಸ ಮಾಡುವುದಲ್ಲ, ಕಾನೂನಿನ ಪರವಾಗಿ ಅವರು ಕೆಲಸ ಮಾಡಬೇಕು. ಅಲ್ಲದೆ ಸಂವಿಧಾನವನ್ನು ರಕ್ಷಣೆ ಮಾಡಬೇಕು. ರಾಜ್ಯಪಾಲರ ಕಚೇರಿ ಸಮಾನತೆಗೆ ಹೆಸರಾಗಿರಬೇಕು. ಹಾಗಾಗಿ ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಉಳಿವಿಗಾಗಿ ನಮ್ಮ ಈ ಹೋರಾಟ ನಿರಂತರ ಎಂದು ಹೇಳಿದರು.

## ಸ್ವಂತ ಬಲದ ಶಕ್ತಿ ಇಲ್ಲದ್ದಕ್ಕೆ ಆಪರೇಷನ್ ಕಮಲ: ಪಾಟೀಲ

• ಉದಯವಾಹಿನಿ, ವಿಜಯಪುರ

ರಾಜ್ಯದಲ್ಲಿ ಈ ಹಿಂದೆ ಎರಡು ಬಾರಿ ಹಿಂಬಾಗಿಲಿನಿಂದ ಅಧಿಕಾರಕ್ಕೆ ಬಂದಿರುವ ಬಿಜೆಪಿ ಪಕ್ಷಕ್ಕೆ ಸ್ವಂತ ಬಲದ ಮೇಲೆ ಅಧಿಕಾರಕ್ಕೆ ಬರುವ ಶಕ್ತಿ ಇಲ್ಲ. ಹೀಗಾಗಿ ಆಪರೇಷನ್ ಕಮಲ ಎಂಬುದು ಹೊಸತೇನಲ್ಲ, ಈಗಲೂ ಅಂತಹ ಪ್ರಯತ್ನ ನಡೆಸಿದ್ದಾರೆ ಎಂದು ಜವಳಿ, ಸಕ್ಕರೆ ಖಾತೆ ಸಚಿವ ಶಿವಾನಂದ ಪಾಟೀಲ ಕಿಡಿಕಾರಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಮೂಡಾ ಹಗರಣದ ಆರೋಪ ಹೊರಿಸಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲನ ನಡೆ ಸಮರ್ಥನೀಯವಲ್ಲ. ಎರಡು ಬಾರಿ ಹಿಂಬಾಗಿಲಿನಿಂದ ಅಧಿಕಾರ ಹಿಡಿದಿರುವ ಬಿಜೆಪಿ, ಮತ್ತದೇ ಪ್ರಯತ್ನ ನಡೆಸಿದೆ ಆಕ್ಷೇಪ ವ್ಯಕ್ತಪಡಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ನಡೆ ಖಂಡಿಸಿ ಇಂದು ರಾಜಭವನ ಚಲೋ ಹೋರಾಟದಲ್ಲಿ ನಾನೂ ಹಾಜರಾಗಬೇಕಿತ್ತು. ಆದರೆ ಆರ್‌ಬಿಐ ನಿಯಮದ ಪ್ರಕಾರ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಸರ್ವ ಸದಸ್ಯರ ಸಾಮಾನ್ಯ ಸಭೆ ನಡೆಯುತ್ತಿರುವ ಕಾರಣ ಅನುಮತಿ ಪಡೆದು ವಿಜಯಪುರಕ್ಕೆ ಬಂದಿದ್ದೇನೆ ಎಂದರು.

## ಹಲಾಲ್ ಉತ್ಪನ್ನಗಳ ವಿರುದ್ಧ ಸಿಡಿದೆದ್ದ ಪ್ರಮೋದ್ ಮುತಾಲಿಕ್

• ಉದಯವಾಹಿನಿ, ಬೆಂಗಳೂರು

ಗಣೇಶ ಹಬ್ಬಕ್ಕೆ ಬೇಕಿರುವ ವಸ್ತುಗಳನ್ನು ಖರೀದಿಸುವಾಗ ಹಲಾಲ್ ವಿಚಾರ ಗಮನದಲ್ಲಿಡಿ, ಗೋವು ಭಕ್ಷಕರಿಂದ ಗಣೇಶ ಮೂರ್ತಿ ಹಾಗೂ ಇತರೆ ವಸ್ತುಗಳನ್ನು ಖರೀದಿಸಬೇಡಿ ಎಂದು ಶ್ರೀರಾಮ ಸೇನೆ ಮುಖ್ಯಸ್ಥ ಪ್ರಮೋದ್ ಮುತಾಲಿಕ್ ಆಗ್ರಹಿಸಿದ್ದಾರೆ. ಈ ಬಗ್ಗೆ ಮಾತನಾಡಿದ ಅವರು, ಇತ್ತೀಚೆಗೆ ಎಲ್ಲಾ ವಸ್ತುಗಳಲ್ಲಿ ಹಲಾಲ್ ಬೆರೆಕೆಯಾಗಿದೆ. ಹೀಗಾಗಿ ನಾವು ಗೋ ಭಕ್ಷಕರಿಂದ ಯಾವುದೇ ವಸ್ತು ಖರೀದಿ ಮಾಡಬೇಡಿ, ಅಪವಿತ್ರವಾದ ವಸ್ತುವನ್ನು ಖರೀದಿಸಿದರೆ ಅಪಚಾರವಾಗುತ್ತದೆ ಎಂದು ಹೇಳಿದರು.. ಗಣೇಶನನ್ನು ಕೂರಿಸಲು ಅದರದೇ ಆದ ಆಚಾರ ವಿಚಾರಗಳಿವೆ, ಪಿಓಪಿ ಗಣೇಶ ಶಾಸ್ತ್ರಕ್ಕೆ ಯೋಗ್ಯವಾದುದ್ದಲ್ಲ. ನೀವು ಯಾವುದೇ ವಸ್ತುವನ್ನು ಖರೀಸಿದರೂ ಪವಿತ್ರವಾದುದ್ದನ್ನೇ ಖರೀದಿಸಿ, ದಯವಿಟ್ಟು ಹಲಾಲ್ ವಸ್ತುಗಳನ್ನು ಖರೀದಿಸಬೇಡಿ ಎಂದು ಮುತಾಲಿಕ್ ಮನವಿ ಮಾಡಿದ್ದಾರೆ.

## ರೇಣುಕಾಸ್ವಾಮಿ ಕೊಲೆ ಪ್ರಕರಣ: ಪವಿತ್ರಾ ಗೌಡ ಜಾಮೀನು ಅರ್ಜಿ ವಜಾ!



**ಅರ್ಜಿಯ ತಿರಸ್ಕೃತಗೊಳಿಸಿ ಆದೇಶ**

• ಉದಯವಾಹಿನಿ, ಬೆಂಗಳೂರು

ಚಿತ್ರದುರ್ಗದ ರೇಣುಕಾ ಸ್ವಾಮಿ ಕೊಲೆ ಪ್ರಕರಣದ ಎ1 ಆರೋಪಿಯಾಗಿರುವ ನಟ ದರ್ಶನ್ ಆಪ್ತೆ ಪವಿತ್ರಾ ಗೌಡ ಹಾಗೂ ಎ7 ಆರೋಪಿ ಅನ್ನುಕುಮಾರ್ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಕೋರ್ಟ್ ವಜಾಗೊಳಿಸಿದೆ.

ಪವಿತ್ರಾ ಗೌಡ ಪರ ಹಿರಿಯ ವಕೀಲ ಟಾಮಿ ಸೆಬಾಸ್ಟಿಯನ್ ಜಾಮೀನು ಅರ್ಜಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ಬೆಂಗಳೂರಿನ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯದಲ್ಲಿ ಅರ್ಜಿಯ ವಿಚಾರಣೆ ನಡೆದಿದ್ದು, ವಿಚಾರಣೆ ಆಲಿಸಿದ ನ್ಯಾಯಾಧೀಶರು ಜಾಮೀನು ಅರ್ಜಿಯ ತಿರಸ್ಕೃತಗೊಳಿಸಿ ಆದೇಶ ಮಾಡಿದ್ದಾರೆ. ಈ ಮೂಲಕ ಜಾಮೀನು ಸಿಗಬಹುದು ಎಂಬ ಆಸೆಯಲ್ಲಿದ್ದ ಪವಿತ್ರಾ ಗೌಡಗೆ ನಿರಾಸೆಯಾಗಿದೆ. ನ್ಯಾಯಾಂಗ ಬಂಧನ ಸೆಪ್ಟೆಂಬರ್ 9ವರೆಗೂ ವಿಸ್ತರಣೆ: ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿಗಳಾದ ದರ್ಶನ್ ಹಾಗೂ ಪವಿತ್ರಾಗೌಡ ಸೇರಿದಂತೆ 17 ಆರೋಪಿಗಳ ನ್ಯಾಯಾಂಗ ಬಂಧನ ಅವಧಿಯನ್ನು ಕೋರ್ಟ್ ಸೆಪ್ಟೆಂಬರ್ 9ವರೆಗೂ ವಿಸ್ತರಿಸಿತು. ಆರೋಪಿಗಳ ನ್ಯಾಯಾಂಗ ಬಂಧನ ಅವಧಿ ಮಂಗಳವಾರಕ್ಕೆ ಅಂತ್ಯಗೊಂಡ ಹಿನ್ನೆಲೆಯಲ್ಲಿ ಅವರೆಲ್ಲರನ್ನೂ ವಿಡಿಯೊ ಕಾನ್ಫರೆನ್ಸ್ ಮೂಲಕ ನ್ಯಾಯಾಧೀಶರ ಎದುರು ಹಾಜರುಪಡಿಸಲಾಗಿತ್ತು.


**ರಾಜ್ಯಪಾಲರು ತನಿಖೆಗೆ ಒಪ್ಪಿಗೆ ಸೂಚಿಸಿ ಆದೇಶ ಹೊರಡಿಸಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಹೈಕೋರ್ಟ್‌ನಲ್ಲಿ ಇನ್ನೆರಡು ದಿನಗಳ ಕಾಲ ತಾತ್ಕಾಲಿಕ ರಿಲೀಫ್ ಸಿಕ್ಕಿದೆ.**

# ಮುಡಾ ವಿಚಾರಣೆ ಮುಂದೂಡಿಕೆ

**ಸಿದ್ದು ಸದ್ಯಕ್ಕೆ ಬಚಾವ್**



### ಸಿಎಂ ವಿರುದ್ಧದ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರಿಂದ ವಿವೇಚನೆ ಬಳಸಿ ಅನುಮತಿ



• ಉದಯವಾಹಿನಿ, ಬೆಂಗಳೂರು

ರಾಜ್ಯಪಾಲರ ಆದೇಶ ವಜಾಗೊಳಿಸಬೇಕು ಎಂದು ಸಿಎಂ ಸಲ್ಲಿಸಿದ್ದ ಅರ್ಜಿ ವಿಚಾರಣೆ ಸೋಮವಾರ ಸೆಪ್ಟೆಂಬರ್ 2ಕ್ಕೆ ಹೈಕೋರ್ಟ್ ಮುಂದೂಡಿದೆ. ಸೋಮವಾರ ಮಧ್ಯಾಹ್ನ 2:30ಕ್ಕೆ ಮುಂದಿನ ವಿಚಾರಣೆ ನಿಗದಿಪಡಿಸಲಾಗಿದೆ. ಆ ಮೂಲಕ ಹಿಂದಿನ ಮಧ್ಯಂತರ ಆದೇಶವನ್ನು ಹೈಕೋರ್ಟ್ ಮುಂದುವರಿಸಿದೆ. ದೂರುದಾರ ಟಿ.ಜೆ.ಅಬ್ರಹಾಂ ಪರ ಹಿರಿಯ ವಕೀಲ ರಂಗನಾಥ್ ರೆಡ್ಡಿ ವಾದ ಮುಗಿಸುತ್ತಿದ್ದಂತೆ ಮತ್ತಷ್ಟು ವಕೀಲರಿಂದ ವಾದ ಮಂಡನೆಗೆ ಮನವಿ ಮಾಡಲಾಯಿತು. ಇದಕ್ಕೆ ಇಡೀ ದಿನ ವಾದ ಮಂಡನೆಗೆ ಅವಕಾಶ ಕೊಟ್ಟಿದ್ದೀನಿ ಎಂದು ಗರಂ ಆದರು. ದೂರುದಾರ ಟಿ.ಜೆ.ಅಬ್ರಹಾಂ ಪರ ಹಿರಿಯ ವಕೀಲ ರಂಗನಾಥ್ ರೆಡ್ಡಿ ವಾದ ಮುಗಿಸುತ್ತಿದ್ದಂತೆ ಮತ್ತಷ್ಟು ವಕೀಲರಿಂದ ವಾದ ಮಂಡನೆಗೆ ಮನವಿ ಮಾಡಲಾಯಿತು. ಇದಕ್ಕೆ ಇಡೀ ದಿನ ವಾದ ಮಂಡನೆಗೆ ಅವಕಾಶ ಕೊಟ್ಟಿದ್ದೀನಿ ಎಂದು ಗರಂ ಆದರು. ಈ ವೇಳೆ ಎ.ಜಿ ಶಶಿಕಿರಣ್ ಶೆಟ್ಟಿ ಅವರಿಂದ ವಾದಕ್ಕೆ ಮನವಿ ಮಾಡಲಾಯಿತು. ಇದಕ್ಕೆ ಜಡ್ಜ್ ದಿನ ಬೇಕಿದ್ರೆ 3:30ಕ್ಕೆ ವಿಚಾರಣೆಗೆ ತೆಗೆದುಕೊಳ್ತೀನಿ, ಅದಕ್ಕೂ ಮೊದಲು ಸಾಧ್ಯವಿಲ್ಲ ಎಂದರು. ಈ ವೇಳೆ ಪ್ರತಿವಾದಿಗಳ ವಾದಕ್ಕೆ ಉತ್ತರ ಕೊಡಲು ಸಿಎಂ ಪರ ವಕೀಲರಾದ ಅಭಿಷೇಕ್ ಮನು ಸಿಂಘ್ವಿ ಸಮಯಾವಕಾಶ ನೀಡುವಂತೆ ಕೋರಿದರು. ನಂತರ ಕೋರ್ಟ್, ಸೋಮವಾರಕ್ಕೆ (ಸೆ.2) ವಿಚಾರಣೆ ಮುಂದೂಡಿತು.

**ಸಿಎಂ ವಿರುದ್ಧ ಆರೋಪ ಇದ್ದಾಗ ಸ್ವತಂತ್ರವಾಗಿ ನಿರ್ಧರಿಸಬಹುದು:** ಆದಾಗ್ಯೂ ಪ್ರಭುಲಿಂಗ್ ವಾದ ಮುಂದುವರಿಸಿದರು. ಮುಖ್ಯಮಂತ್ರಿಗಳ ಪಾತ್ರ, ಕ್ಯಾಬಿನೆಟ್ ನಿರ್ಣಯದ ಬಗ್ಗೆ ವಾದ ಮಂಡಿಸುತ್ತೇನೆ ಎಂದರು. ಕೆಲಸ ಸಂದರ್ಭಗಳಲ್ಲಿ ಕ್ಯಾಬಿನೆಟ್ ರಾಜ್ಯಪಾಲರಿಗೆ ಸಲಹೆ ನೀಡುವ ಅರ್ಹತೆ ಕಳೆದುಕೊಳ್ಳುತ್ತದೆ ಎಂದು ಆರ್. ಎಸ್ ನಾಯಕ್ ಪ್ರಕರಣ ಉಲ್ಲೇಖಿಸಿದರು. ತಮಗಿರುವ ಆಸಕ್ತಿಯ ಕಾರಣಕ್ಕೆ ಸಂಪುಟದ ಸಚಿವರು ಪ್ರಕರಣದಲ್ಲಿ ಪಕ್ಷಪಾತಿಗಳಾಗುವ ಕಾರಣದಿಂದಾಗಿ ರಾಜ್ಯಪಾಲರಿಗೆ ಸಲಹೆ ನೀಡುವ ಅಧಿಕಾರದಿಂದ ವಂಚಿತರಾಗುತ್ತಾರೆ ಎನ್ನುವ ಪೂರ್ವ ತೀರ್ಪೊಂದನ್ನು ಉಲ್ಲೇಖಿಸಿದರು. ರಾಜ್ಯಪಾಲರು ಕ್ಯಾಬಿನೆಟ್ ಸಲಹೆ ಪರಿಗಣಿಸುವ ವಿಚಾರವೇ ಇಲ್ಲ. ಸಿಎಂ ವಿರುದ್ಧ ಆರೋಪ ಇದ್ದಾಗ ರಾಜ್ಯಪಾಲರು ಸ್ವತಂತ್ರವಾಗಿ ನಿರ್ಧಾರ ಮಾಡಬಹುದು ಎಂದು ಸುಪ್ರೀಂ ಕೋರ್ಟ್‌ನ ಎರಡು ತೀರ್ಪುಗಳಿವೆ ಎಂದು ಕೋರ್ಟ್ ಗಮನಕ್ಕೆ ತಂದರು. ಸಿಎಂ ಪ್ರಾಸಿಕ್ಯೂಷನ್ ವಿಚಾರದಲ್ಲಿ ಕ್ಯಾಬಿನೆಟ್ ನಿರ್ಧಾರ ಸಮಂಜಸವಲ್ಲ. ಇದರಿಂದ ಮೇಲ್ನೋಟಕ್ಕೆ ಪಕ್ಷಪಾತದ ಭಾವನೆ ಬರಲಿದೆ ಅಂತ ಸುಪ್ರೀಂ ಕೋರ್ಟ್‌ನ ಎ.ಕೆ.ಕ್ರೈಪಾಕ್ ಕೇಸ್ ಉಲ್ಲೇಖಿಸಿ ವಾದಮಂಡನೆ ಮಾಡಿದರು. ಸಂವಿಧಾನದ ವಿಧಿ 163 ಅಡಿಯಲ್ಲಿ ಸಿಎಂ ಕೂಡಾ ಕ್ಯಾಬಿನೆಟ್‌ನ ಭಾಗ. ಹೀಗಾಗಿ ಸಿಎಂ ಹೊರತಾದ ಕ್ಯಾಬಿನೆಟ್ ಇರಲು ಸಾಧ್ಯವಿಲ್ಲ. ಆದ್ದರಿಂದ ಕ್ಯಾಬಿನೆಟ್ ನಿರ್ಣಯವನ್ನು ರಾಜ್ಯಪಾಲರು ಪರಿಗಣಿಸಬೇಕಿಲ್ಲ ಎಂದು ವಾದಿಸಿದರು. ಮೇಲ್ನೋಟಕ್ಕೆ ಇದರಲ್ಲಿ ಅಕ್ರಮ ನಡೆದಿದೆ ಅಂತ, ಆದೇಶ ಪ್ರತಿಯಲ್ಲಿ ಉಲ್ಲೇಖ ಮಾಡಿದ್ದಾರೆ. ಸರ್ಕಾರಕ್ಕೆ ತನಿಖೆಯ ಅವಶ್ಯಕತೆ ಇದೆ ಅನಿಸಿದೆ. ಹೀಗಾಗಿ ನ್ಯಾಯಾಂಗ ತನಿಖೆಗೆ ಆದೇಶವನ್ನು ನೀಡಿದ್ದಾರೆ. ನಿವೃತ್ತ ನ್ಯಾಯಾಧೀಶ ದೇಸಾಯಿ ಅವರ ನೇತೃತ್ವದಲ್ಲಿ ತನಿಖೆ ನಡೆಯುತ್ತಾ ಇದೆ ಎಂದರು. ಇದೇ ವೇಳೆ ಮುಡಾ ಅಕ್ರಮ ತನಿಖೆಗಾಗಿ ನೇಮಿಸಲಾಗಿರುವ ಏಕಸದಸ್ಯ ಆಯೋಗ ಮತ್ತು ತನಿಖಾ ತಂಡದ ಕಾರ್ಯವ್ಯಾಪ್ತಿಯಲ್ಲಿ ನಿಯಮ 6,7,8ರ ಬಗ್ಗೆ ಆಕ್ಷೇಪಣೆಗಳ ಬಗ್ಗೆ ನಾವದಗಿ ನ್ಯಾಯಾಲಯದ ಗಮನ ಸೆಳೆದರು. ಮೇಲ್ನೋಟಕ್ಕೆ ಅಕ್ರಮವನ್ನು ಪರಿಗಣಿಸಲಾಗಿದೆ ಎನ್ನುವ ಅಂಶ ಸರ್ಕಾರದ ಆದೇಶಗಳಲ್ಲಿ ಇರುವ ಬಗ್ಗೆಯೂ ನ್ಯಾಯಾಧೀಶರ ಗಮನಕ್ಕೆ ತಂದರು. ರಾಜ್ಯಪಾಲರು ಕಾರ್ಯವಿಧಾನ ಅನುಸರಿಸಿಲ್ಲ ಎನ್ನುವುದು ಬೇರೆ, ಆದರೆ ವಿವೇಚನೆ ಬಳಸಿಲ್ಲ ಎನ್ನಲಾಗದು. ತನಿಖೆಗೆ ನೇಮಿಸಿರುವ ಸರ್ಕಾರದ ಆದೇಶಗಳನ್ನು ರಾಜ್ಯಪಾಲರು ಗಮನಿಸಿದ್ದಾರೆ, ಹಾಗಾಗಿ ಅವರು ವಿವೇಚನೆ ಬಳಸಿಲ್ಲ ಎನ್ನಲಾಗದು ಎಂದು ವಾದಿಸಿದರು. ನಾವದಗಿ ಅವರ ಬಳಿಕ ದೂರುದಾರ ಟಿ.ಜೆ.ಅಬ್ರಹಾಂ ಪರ ಹಿರಿಯ ವಕೀಲ ರಂಗನಾಥ್ ರೆಡ್ಡಿ ವಾದ ಮಂಡಿಸಿದರು.



> ಮುಖ್ಯಮಂತ್ರಿಗಳ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಸಂಬಂಧ ಸಚಿವ ಸಂಪುಟವು ತನ್ನ ನಿರ್ಧಾರ ತಿಳಿಸಿದೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತ್ರತ್ವದಲ್ಲಿ ಸಂಪುಟ ಸಭೆ ನಡೆಸಿ, ಸುಮಾರು 91 ಪುಟಗಳ ಪ್ರತಿಕ್ರಿಯೆ ನೀಡಲಾಗಿದೆ. ಇದು ಸ್ವಾತಂತ್ರ್ಯ ಭಾರತದಲ್ಲಿಯೇ ಅತಿದೊಡ್ಡ ಪ್ರತಿಕ್ರಿಯೆ
> -ತುಷಾರ್ ಮೆಹ್ತಾ, ಸಾಲಿಸಿಟರ್ ಜನರಲ್

### ಪ್ರಭುಲಿಂಗ ನಾವದಗಿ ಪ್ರಬಲ ವಾದ ಮಂಡನೆ



ಮುಡಾ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಾಪಾಲ ಗೆಹ್ಲೋಟ್ ಅನುಮತಿ ನೀಡಿದ್ದರು. ರಾಜ್ಯಪಾಲರ ಆದೇಶ ವಜಾಗೊಳಿಸಬೇಕು ಎಂದು ಅರ್ಜಿ ಸಲ್ಲಿಸಿದ್ದರು. ಈ ಅರ್ಜಿ ಕುರಿತು ವಿಚಾರಣೆ ಮುಂದುವರಿಯಿತು. ತುಷಾರ್ ಮೆಹ್ತಾ ಮತ್ತು ಸಿಂಗ್ ವಾದ ಮುಕ್ತಾಯಗೊಳಿಸುತ್ತಿದ್ದಂತೆ ಪ್ರಭುಲಿಂಗ ನಾವದಗಿ ಅವರು ದೂರುದಾರ ಪ್ರದೀಪ್ ಕುಮಾರ್ ಪರ ವಾದ ಮಂಡಿಸಿದರು. ಈ ವೇಳೆ ಜಡ್ಜ್ ತುಂಬಾ ಜನ ವಾದ ಮಂಡನೆ ಮಾಡಿದ್ದೀರಿ, ಈ ಕೇಸ್‌ನಲ್ಲಿ ಸಿಎಂ ಪಾತ್ರದ ಬಗ್ಗೆ ಹೇಳಿ ಅವರು ಈ ಪ್ರಕರಣದಲ್ಲಿ ಹೇಗೆ ಇದ್ದಾರೆ ಅಂತ ಪ್ರಶ್ನೆ ಮಾಡಿದರು.

**1** ಮುಡಾ ಪ್ರಾಸಿಕ್ಯೂಷನ್: ಹೈಕೋರ್ಟ್‌ನಲ್ಲಿ ವಿಚಾರಣೆ ಮುಂದೂಡಿಕೆ

**2** ಸ್ನೇಹಮಯಿ ಕೃಷ್ಣ ಪರ ಮಣೀಂದರ್ ಸಿಂಗ್ ವಾದ

**3** ಸೆ.2ಕ್ಕೆ ಮುಂದೂಡಿದ್ದು ಸಿಎಂ ತಾತ್ಕಾಲಿಕ ರಿಲೀಫ್

### ರಾಜ್ಯಪಾಲರ ಕ್ರಮ ಪ್ರಶ್ನಿಸಲು ಆರೋಪಿಗೆ ಅವಕಾಶವಿಲ್ಲ

2018ರಲ್ಲಿ ಭ್ರಷ್ಟಾಚಾರ ತಡೆ ಕಾಯ್ದೆಯ ಸೆ.17 ಎ ಮತ್ತು 19 ತಿದ್ದುಪಡಿ ಮಾಡಲಾಗಿದೆ. ಆದರೆ ಸೆ.17 ಎ ನಲ್ಲಿ ಆರೋಪಿಗೆ ನೋಟಿಸ್ ನೀಡಲು ಅವಕಾಶವಿಲ್ಲ. ಸೆ.19 ಅಡಿಯಲ್ಲಿ ನೋಟಿಸ್ ನೀಡಲು ಅವಕಾಶವಿದೆ. ಆರೋಪಿಗೆ ನೋಟಿಸ್ ನೀಡಿ ತನಿಖೆಗೆ ಅವಕಾಶ ನೀಡಬಾರದು. ನೋಟಿಸ್ ನೀಡಿದರೆ ತನಿಖೆಯೇ ಪೂರ್ವಾಗ್ರಹಕ್ಕೊಳಗಾಗಲಿದೆ. 17 ಎ ಹಂತದಲ್ಲಿ ರಾಜ್ಯಪಾಲರ ಕ್ರಮ ಪ್ರಶ್ನಿಸಲು ಆರೋಪಿಗೆ ಅವಕಾಶವಿಲ್ಲ. ಎಫ್‌ಐಆರ್ ದಾಖಲಾದ ಬಳಿಕವಷ್ಟೇ ಆರೋಪಿಗೆ ಅದನ್ನು ಪ್ರಶ್ನಿಸುವ ಹಕ್ಕು ಬರಲಿದೆ ಎಂದು ಪ್ರಬಲ ವಾದ ಮಂಡನೆ ಮಾಡಿದರು.

### ಕೈ ನಾಯಕರಿಂದ 'ರಾಜಭವನ ಚಲೋ'

ಮುಡಾ ಹಗರಣ ಸಂಬಂಧ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲ ಗೆಹ್ಲೋಟ್ ಅವರ ನಡೆ ಖಂಡಿಸಿ ಕಾಂಗ್ರೆಸ್ ನಾಯಕರು 'ರಾಜಭವನ ಚಲೋ' ನಡೆಸಿದರು. ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್ ನಾಯಕರು 'ರಾಜಭವನ ಚಲೋ' ನಡೆಸಿ, ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ, ಬಿಜೆಪಿ ನಾಯಕರಾದ ಜನಾರ್ದನ ರೆಡ್ಡಿ, ಮುರುಗೇಶ್ ನಿರಾಣಿ ಹಾಗೂ ಶಶಿಕಲಾ ಜೊಲ್ಲೆ ಅವರ ವಿರುದ್ಧವೂ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ಮನವಿ ಸಲ್ಲಿಸಿದರು. ರಾಜ್ಯಪಾಲರ ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಡಿಕೆ ಶಿವಕುಮಾರ್ ಅವರು, ರಾಜ್ಯಪಾಲರ ಕಚೇರಿಯನ್ನು ದುರುಪಯೋಗಪಡಿಸಿಕೊಂಡಿರುವುದನ್ನು ಪ್ರತಿಭಟಿಸಿ ಕಾಂಗ್ರೆಸ್ ಪಕ್ಷವು 'ರಾಜಭವನ ಚಲೋ' ಹಮ್ಮಿಕೊಂಡಿದರು.

## ನ್ಯಾಯಾಂಗ ವ್ಯವಸ್ಥೆ ಮೇಲೆ ಭಾರತೀಯರ ನಂಬಿಕೆ

• ಉದಯವಾಹಿನಿ, ನವದೆಹಲಿ



ಭಾರತದ ನ್ಯಾಯಾಂಗ ಸುಪ್ರೀಂ ಕೋರ್ಟ್ ಮೇಲೆ ಜನರು ಅಪನಂಬಿಕೆ ಹೊಂದಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಅಭಿಪ್ರಾಯಪಟ್ಟರು. ಸರ್ವೋಚ್ಚ ನ್ಯಾಯಾಲಯದ 75ನೇ ವರ್ಷಾಚರಣೆ ನಿಮಿತ್ತ ಭಾರತ್ ಮಂಟಪದಲ್ಲಿ ಇಂದು ಜಿಲ್ಲಾ ನ್ಯಾಯಾಂಗದ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿ, ನಮ್ಮ ನ್ಯಾಯಾಂಗದ ವ್ಯವಸ್ಥೆ ಮೇಲೆ ಭಾರತೀಯರು ಎಂದಿಗೂ ಅಪನಂಬಿಕೆಯನ್ನು ಹೊಂದಿಲ್ಲ ಎಂದು ಪ್ರಧಾನಿ ಶ್ಲಾಘಿಸಿದರು. ನಾವು ಹೊಂದಿರುವ ನಂಬಿಕೆ ಮತ್ತು ಭರವಸೆಯನ್ನು ಸುಪ್ರೀಂಕೋರ್ಟ್ ಎತ್ತಿ ಹಿಡಿಯುತ್ತಲೇ ಬಂದಿದೆ. ತುರ್ತುಪರಿಸ್ಥಿತಿಯ ಕರಾಳ ದಿನಗಳಲ್ಲಿಯೂ ನ್ಯಾಯಂಗ ವ್ಯವಸ್ಥೆ ಮೂಲಭೂತ ಹಕ್ಕಗಳನ್ನು ಎತ್ತಿ ಹಿಡಿದಿದೆ. ಇದು ರಾಷ್ಟ್ರೀಯ ಏಕತೆ ವಿಷಯವು ರಾಷ್ಟ್ರದ ಹಿತಾಸಕ್ತಿಯಾಗಿದೆ ಎಂದು ಬಣ್ಣಿಸಿದರು. ಸುಪ್ರೀಂಕೋರ್ಟ್ ಸ್ಥಾಪನೆಯಾಗಿ 75 ವರ್ಷದ ಸ್ಮರಣೆಗೆ ನಿಮಿತ್ತ ಅಂಚೆ ಚೀಟಿ ಮತ್ತು ನಾಣ್ಯವನ್ನು ಪ್ರಧಾನಿಯವರು ಅನಾವರಣಗೊಳಿಸಿದರು.

## ಚುನಾಯಿತ ಸರ್ಕಾರ ಬುಡಮೇಲು ಮಾಡಲು ಪ್ರಯತ್ನ

• ಉದಯವಾಹಿನಿ, ಬೆಂಗಳೂರು



ಕಾಂಗ್ರೆಸ್ ನಾಯಕರು ಪ್ರಜಾಪ್ರಭುತ್ವ ಉಳಿವಿಗಾಗಿ ಹೋರಾಟ ಮಾಡುತ್ತಿದ್ದೇವೆ. ಆದರೆ ಬಿಜೆಪಿ ಹಗೂ ಜೆಡಿಎಸ್ ನಾಯಕರು ಜನಮತ, ಬಹುಮತ ದಿಂದ ಆಯ್ಕೆಯಾಗಿರುವ ಚುನಾಯಿತ ಸರ್ಕಾರವನ್ನೇ ಬುಡಮೇಲು ಮಾಡಲು ಪ್ರಯತ್ನ ಮಾಡುತ್ತಿದ್ದಾರೆ ಎಂದು ಸಚಿವ ಕೃಷ್ಣ ಬೈರೇಗೌಡ ವಾಗ್ದಾಳಿ ನಡೆಸಿದ್ದಾರೆ. ಕಾಂಗ್ರೆಸ್ ಸರ್ಕಾರವನ್ನು ಬುಡಮೇಲು ಮಾಡಲು ಬಿಜೆಪಿ-ಜೆಡಿಎಸ್ ನಾಯಕರು ಇನ್ನಿಲ್ಲದ ಪ್ರಯತ್ನ ಮಡುತ್ತಿದ್ದಾರೆ. ರಾಜ್ಯಪಾಲರಾದವರು ಅವರ ಜೊತೆಸೇರಿರುವುದು ದುರಂತ ಎಂದು ಕಿಡಿಕಾರಿದರು. ರಾಜ್ಯಪಾಲರಾದವರು ಸಂವಿಧಾನಕ್ಕೆ ನಿಷ್ಠರಾಗಿರಬೇಕು. ಆದರೆ ಇಲ್ಲಿ ರಾಜ್ಯಪಾಲರು ಸಂವಿಧಾನದ ಬದಲು ಬಿಜೆಪಿಗೆ ನಿಷ್ಠರಾಗಿರುವುದನ್ನು ಪ್ರದರ್ಶಿಸುತ್ತಿದ್ದಾರೆ ಎಂದರು. ದಾರಿಹೋಕನೊಬ್ಬ ನೀಡಿರುವ ದೂರಿಗೆ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುತ್ತಾರೆ ಎಂದರು.

## ಕೆಪಿಎಸ್‌ಸಿ ಪ್ರಶ್ನೆ ಪತ್ರಿಕೆಯಲ್ಲಿ ಕನ್ನಡ ದೋಷ; ತನಿಖೆಗೆ ಪಟ್ಟು

### ಅಂಗೈ ಹುಣ್ಣಿಗೆ ಕನ್ನಡಿ ಬೇಕೆ ಎಂಬಂತೆ ಕೆಪಿಎಸ್‌ಸಿ ಪ್ರಶ್ನೆಪತ್ರಿಕೆಯ ತುಂಬಾ ಕಣ್ಣಿಗೆ ಕುಕ್ಕುವ ಹಾಗೆ ಕಾಣುತ್ತಿರುವ ಲೋಪದೋಷಗಳು

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ಗೆಜೆಟೆಡ್ ಪ್ರೊಬೇಷನರ್ಸ್ 384 ಹುದ್ದೆಗಳ ನೇಮಕಾತಿ ಪೂರ್ವಭಾವಿ ಪರೀಕ್ಷೆಯನ್ನು ಕಳೆದ ಮಂಗಳವಾರ ನಡೆಸಿದೆ. ಆದರೆ ಈ ಪರೀಕ್ಷೆ ಪ್ರಶ್ನೆ ಪತ್ರಿಕೆಯಲ್ಲಿ ಕನ್ನಡ ದೋಷ ಇರುವ ಕುರಿತು ಈಗಾಗಲೇ ಸಾಮಾಜಿಕ ಜಾಲತಾಣದಲ್ಲಿ ಆಕ್ರೋಶ ವ್ಯಕ್ತವಾಗುತ್ತಿದೆ. ಈ ಬಗ್ಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಕೆಪಿಎಸ್‌ಸಿ ಪ್ರಕಟಣೆ ಹೊರಡಿಸಿರುವ ಬಗ್ಗೆಯೂ ಇದೀಗ ಆಕ್ರೋಶ ಭುಗಿಲೆದ್ದಿದೆ.

ಈ ಬಗ್ಗೆ ವಿಪಕ್ಷ ನಾಯಕ ಆರ್.ಅಶೋಕ್ ಅವರೂ ಖಂಡನೆ ವ್ಯಕ್ತಪಡಿಸಿದ್ದಾರೆ. ಅಂಗೈ ಹುಣ್ಣಿಗೆ ಕನ್ನಡಿ ಬೇಕೆ ಎಂಬಂತೆ ಕೆಪಿಎಸ್‌ಸಿ ಪ್ರಶ್ನೆಪತ್ರಿಕೆಯ ತುಂಬಾ ಕಣ್ಣಿಗೆ ಕುಕ್ಕುವ ಹಾಗೆ ಕಾಣುತ್ತಿರುವ ಲೋಪದೋಷಗಳು ಸಾಮಾಜಿಕ ಜಾಲತಾಣಗಳಲ್ಲಿ, ಮಾಧ್ಯಮಗಳಲ್ಲಿ ಈಗಾಗಲೇ ಹರಿದಾಡುತ್ತಿದ್ದರೂ, ದೋಷಗಳಿಗೆ, ಭಾಷಾಂತರ ತಪ್ಪುಗಳಿಗೆ ಆಕ್ಷೇಪಣೆ ಸಲ್ಲಿಸಬೇಕು ಎಂದು ಹೊರಡಿಸಿರುವ ಪ್ರಕಟಣೆ ಅತ್ಯಂತ ಹಾಸ್ಯಾಸ್ಪದ ಮತ್ತು ಅಸಂಬದ್ಧವಾಗಿದೆ ಎಂದು ವ್ಯಂಗ್ಯವಾಡಿದ್ದಾರೆ. ಪ್ರಶ್ನೆಪತ್ರಿಕೆ ತಯಾರಾದ ನಂತರ ನುರಿತ ಸಂಪನ್ಮೂಲ ವ್ಯಕ್ತಿಗಳ ಕೈಯಲ್ಲಿ ಅದನ್ನು ಪ್ರೂಫ್ ರೀಡ್ ಮಾಡಿಸಿ, ಪ್ರಶ್ನೆಗಳ ರಚನೆ, ನಿಖರತೆ, ತರ್ಜುಮೆ ಮುಂತಾದವುಗಳಲ್ಲಿ ಯಾವುದಾದರೂ ಲೋಪದೋಷಗಳು ಇದ್ದಲ್ಲಿ ಅದನ್ನು ತಿದ್ದುಪಡಿ ಮಾಡಿದ ನಂತರ ಪ್ರಶ್ನೆ ಪತ್ರಿಕೆ ಅಂತಿಮಗೊಳಿಸಿ ಪರೀಕ್ಷೆ ನಡೆಸಿದ್ದರೆ ಇವತ್ತು ಇಡೀ ವ್ಯವಸ್ಥೆ ನಗೆ ಪಾಟಲಿಗೀಡಾಗುವ ಪರಿಸ್ಥಿತಿ ಬರುತ್ತಿರಲಿಲ್ಲ ಎಂದು ಹೇಳಿದ್ದಾರೆ.



> ಪ್ರಶ್ನೆಪತ್ರಿಕೆ ಸಿದ್ಧಪಡಿಸಲು ಜವಾಬ್ದಾರರಾದ ಅಧಿಕಾರಿಗಳನ್ನು ಈ ಕೂಡಲೇ ಅಮಾನತು ಮಾಡಿ ತನಿಖೆಗೆ ಆದೇಶ ನೀಡಬೇಕು. ಈ ಬಗ್ಗೆ ಸುದ್ದಿಗೋಷ್ಠಿ ನಡೆಸಿ ಪರೀಕ್ಷಾರ್ಥಿಗಳಿಗೆ ಸ್ಪಷ್ಟನೆ ನೀಡಬೇಕು. ಮುಂದಿನ ನಡೆಯ ಬಗ್ಗೆ ಮಾಹಿತಿ ನೀಡಬೇಕು. ಕೆಪಿಎಸ್‌ಸಿ ವ್ಯವಸ್ಥೆಗೆ ಆಮೂಲಾಗ್ರ ಸುಧಾರಣೆ ತರುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕು
> -ಆರ್. ಅಶೋಕ್, ವಿಪಕ್ಷ ನಾಯಕ

### ಆಡಳಿತ ಭಾಷೆಯಾದ ಕನ್ನಡಕ್ಕೆ ಪ್ರಾಧಾನ್ಯತೆ

ಕರ್ನಾಟಕದಲ್ಲಿ ಕನ್ನಡವೇ ಸಾರ್ವಭೌಮ ಮತ್ತು ಆಡಳಿತ ಭಾಷೆಯಾಗಿದೆ. ಆದರೆ ಇಂಗ್ಲಿಷ್ ಭಾಷೆಯಲ್ಲಿ ಪ್ರಕಟವಾದ ಪ್ರಶ್ನೆಗಳನ್ನು ಓದಿ ಅರ್ಥೈಸಿಕೊಂಡು ಅಭ್ಯರ್ಥಿಗಳು ಉತ್ತರ ಬರೆಯುವಂತೆ ಸೂಚಿಸಿರುವುದನ್ನು ಪ್ರಾಧಿಕಾರ ಖಂಡಿಸುತ್ತದೆ. ಆಡಳಿತ ಭಾಷೆಯಾದ ಕನ್ನಡಕ್ಕೆ ಪ್ರಾಧಾನ್ಯತೆ ನೀಡದೆ ಮತ್ತು ಅಭ್ಯರ್ಥಿಗಳಿಗೆ ಅನಾನುಕೂಲತೆ ಉಂಟು ಮಾಡಿರುವ ಕೆಪಿಎಸ್‌ಸಿ ನಡೆಯನ್ನು ಪ್ರಾಧಿಕಾರ ವಿರೋಧಿಸಿ, ಖಂಡಿಸುತ್ತದೆ ಎಂದು ಹೇಳಿದೆ.

ಮಾಧ್ಯಮಗಳಲ್ಲಿ, ಸಾಮಾಜಿಕ ಜಾಲತಾಣಗಳಲ್ಲಿ ಪ್ರಶ್ನೆ ಪತ್ರಿಕೆಯಲ್ಲಿ ಆಗಿರುವ ಲೋಪದೋಷಗಳ ಬಗ್ಗೆ ಈಗಾಗಲೇ ಬಹಿರಂಗ ಚರ್ಚೆಯಾಗುತ್ತಿರುವಾಗ ಆಕ್ಷೇಪಣೆ ಸಲ್ಲಿಸಬೇಕು ಎಂದು ಪ್ರಕಟಣೆ ಹೊರಡಿಸಿರುವುದು ಆಯೋಗ ಎಷ್ಟು ಅಸಮರ್ಥವಾಗಿದೆ ಎಂಬುದನ್ನ ಮತ್ತೊಮ್ಮೆ ಜಗಜ್ಜಾಹೀರು ಮಾಡಿದೆ ಎಂದು ಕೆಪಿಎಸ್‌ಸಿ ವಿರುದ್ಧ ದೂರಿದ್ದಾರೆ. ಪೂರ್ವಭಾವಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಯಲ್ಲಿನ ದೋಷದ ಕುರಿತು ಕನ್ನಡ ಅಭಿವೃದ್ಧಿ ಪ್ರಾಧಿಕಾರ ವರದಿಯನ್ನೂ ಕೇಳಿದೆ. ಅರ್ಥವಾಗದ ಕನ್ನಡ ಬಳಕೆಯಿಂದಾಗಿ ಕನ್ನಡ ಮಾಧ್ಯಮದಲ್ಲಿ ಓದಿದ ಮತ್ತು ಗ್ರಾಮೀಣ ಭಾಗದ ಅಭ್ಯರ್ಥಿಗಳಿಗೆ ಅನಾನುಕೂಲವಾಗಿದೆ. ಸಂಕೀರ್ಣ ಮತ್ತು ಗೊಂದಲ ಮೂಡಿಸುವಂತಹ ಇಂತಹ ಪ್ರಶ್ನೆ ಪತ್ರಿಕೆಗಳಿಂದ ಕನ್ನಡಿಗರೇ ಸಂಕಷ್ಟಕ್ಕೆ ಈಡಾಗಿದ್ದಾರೆ. ನೂರಾರು ಅಭ್ಯರ್ಥಿಗಳ ಕನಸು ನುಚ್ಚು ನೂರಾಗಿದೆ ಎಂದು ಪ್ರಾಧಿಕಾರ ಹೇಳಿದೆ.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,304/Gram24ct ₹6,695/Gram22ct | ಬೆಳ್ಳಿ: ₹87.00/Gram

# ಜೀತ ಪದ್ಧತಿ ಮುಂದುವರಿಸಿದ ಕೇಂದ್ರ ಸರ್ಕಾರ: ಆಕ್ರೋಶ

## ದುಡಿಯುವ ವರ್ಗದವರು ಜಾತಿ, ವರ್ಗ, ಧರ್ಮ ಮೀರಿ ಒಂದಾಗಬೇಕು, ನಮ್ಮನ್ನು ಛಿದ್ರಗೊಳಿಸಲು ಪ್ರಯತ್ನ

• ಉದಯವಾಹಿನಿ, ತುಮಕೂರು

ದುಡಿಯುವ ವರ್ಗದವರು ಜಾತಿ, ವರ್ಗ, ಧರ್ಮ ಮೀರಿ ಒಂದಾಗಬೇಕು. ತಾತ್ವಿಕ ನೆಲೆಯಲ್ಲಿ ಸಂಘಟಿತರಾಗಿ ನಮ್ಮನ್ನು ಛಿದ್ರಗೊಳಿಸಲು ಪ್ರಯತ್ನಿಸುತ್ತಿರುವ ಶಕ್ತಿಗಳ ವಿರುದ್ಧ ಹೋರಾಟ ರೂಪಿಸಬೇಕು' ಎಂದು ಚಿಂತಕ ಕೆ.ದೊರೈರಾಜ್ ಸಲಹೆ ಮಾಡಿದರು.

ನಗರದಲ್ಲಿ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘ (ಎಐಯುಟಿಯುಸಿ) ವತಿಯಿಂದ ಹಮ್ಮಿಕೊಂಡಿದ್ದ ಆಶಾ ಕಾರ್ಯಕರ್ತೆಯರ ಜಿಲ್ಲಾ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.

ಎಲ್ಲರಲ್ಲಿ ರಾಜಕೀಯ ಪ್ರಜ್ಞೆ ಇರಬೇಕು. ನಮ್ಮನ್ನು ಛಿದ್ರೀಕರಣ ಮಾಡುವ, ಕಾರ್ಮಿಕರ ವಿರುದ್ಧದ ಕಾನೂನು ಜಾರಿ ಮಾಡುವ ಬಂಡವಾಳಶಾಹಿ ವ್ಯಕ್ತಿ, ಪಕ್ಷ ಆಯ್ಕೆ ಮಾಡಬಾರದು. ಕಾನೂನು, ಕಾಯ್ದೆ ಬಗ್ಗೆ ತಿಳಿದುಕೊಳ್ಳಬೇಕು, ಬೌದ್ಧಿಕ ಪ್ರಜ್ಞೆ ಬೆಳೆಸಿಕೊಳ್ಳಬೇಕು. ಸಮಾನತೆಯ ಸಮಾಜ ಕಟ್ಟಲು, ಜಾತಿ ಮೀರಿದ ತಾತ್ವಿಕ ಸಂಘಟನೆ ಕಟ್ಟಬೇಕು. ದುಡಿಯುವವರು ಎಲ್ಲರು ಸೇರಿ ತಮ್ಮ ಹಕ್ಕುಗಳಿಗೆ ಹೋರಾಟ ನಡೆಸಬೇಕು ಎಂದು ಹೇಳಿದರು.


ಉದಯವಾಹಿನಿ ಚಿತ್ರ

ಕೇಂದ್ರ ಸರ್ಕಾರ ಕೆಲಸದ ಅವಧಿಯನ್ನು 14 ಗಂಟೆಗೆ ಹೆಚ್ಚಿಸಿದೆ. ಹಲವಾರು ಕಾರ್ಮಿಕ, ಜೀವ ವಿರೋಧಿ ನೀತಿಗಳನ್ನು ಜಾರಿಗೊಳಿಸುವ ಮೂಲಕ ಜೀತಗಾರಿಕೆ ಪದ್ಧತಿ ಮುಂದುವರಿಸುತ್ತಿದೆ. ದುಡಿಯುವ ವರ್ಗದ ಮೇಲೆ ನಿರಂತರವಾಗಿ ಶೋಷಣೆ ಮಾಡಲಾಗುತ್ತಿದೆ. ಸೇವೆಗೆ ತಕ್ಕ ವೇತನ ನೀಡದೆ ಅಮಾನವೀಯವಾಗಿ ನಡೆಸಿಕೊಳ್ಳುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಆಶಾ ಕಾರ್ಯಕರ್ತೆಯರು ಸಮಾಜಕ್ಕೆ ತಾಯಿಯಂತೆ ಸೇವೆ ಒದಗಿಸುತ್ತಿದ್ದಾರೆ. ಅವರ ಕೆಲಸಕ್ಕೆ ಬೆಲೆ ಕಟ್ಟಲು ಆಗಲ್ಲ. ಸಮಾಜದ ಸ್ವಾಸ್ಥ್ಯ ಕಾಪಾಡುತ್ತಿದ್ದಾರೆ. ಆರೋಗ್ಯ, ಶಿಕ್ಷಣ, ರಾಜಕೀಯ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ಹಗಲು-ರಾತ್ರಿ ಎನ್ನದೆ ಕೆಲಸ ಮಾಡುತ್ತಾರೆ. ಅವರಿಗೆ ಕನಿಷ್ಠ ವೇತನ ನೀಡದಿರುವುದು ನಾಚಿಕೆಗೇಡಿನ ಸಂಗತಿ. ಊಟ, ತಿಂಡಿಗೆ ಆಗುವಷ್ಟು ವೇತನ ಸಿಗುತ್ತಿಲ್ಲ ಎಂದು ಅಸಮಾಧಾನದ ಮಾತುಗಳನ್ನಾಡಿದರು.

> 'ರಾಷ್ಟ್ರದಲ್ಲಿ ಮಹಿಳೆಯರು, ಮಕ್ಕಳಿಗೆ ರಕ್ಷಣೆ ಇಲ್ಲದಂತಾಗಿದೆ. ಅಪರಾಧ ಬ್ಯೂರೋದ ಅಂಕಿ-ಅಂಶದ ಪ್ರಕಾರ ಪ್ರತಿ 11 ನಿಮಿಷಕ್ಕೆ ಒಂದು ಅತ್ಯಾಚಾರ ಪ್ರಕರಣ ವರದಿಯಾಗುತ್ತಿದೆ. ಇದು ಆತಂಕಕಾರಿ ವಿಚಾರ. ಸರ್ಕಾರ ತನ್ನ ಲಾಭಕ್ಕಾಗಿ ಸುಲಭವಾಗಿ ಅಶ್ಲೀಲತೆಯನ್ನು ಹರಿಬಿಡುತ್ತಿದೆ. ಇದನ್ನು ತಡೆಯಬೇಕು'
> -ಎಂ.ವಿ.ಕಲ್ಯಾಣಿ, ಅಧ್ಯಕ್ಷೆ

ಕೋವಿಡ್ ಸಮಯದಲ್ಲಿ ತಮ್ಮ ಜೀವ ಪಣಕ್ಕಿಟ್ಟು ಕೆಲಸ ಮಾಡಿದರು. ಗ್ರಾಮಾಂತರ ಮಟ್ಟದಲ್ಲಿ ಜನರ ರಕ್ಷಣೆಗೆ ಮುಂದಾದರು. ಸರ್ಕಾರ ಕನಿಷ್ಠ ರಕ್ಷಣಾತ್ಮಕ ಕ್ರಮ ಕೈಗೊಳ್ಳಲಿಲ್ಲ. ಕೋವಿಡ್ ಸಮಯದಲ್ಲಿ ಮೃತಪಟ್ಟವರಿಗೆ ಇಂದಿಗೂ ಪರಿಹಾರ ಸಿಕ್ಕಿಲ್ಲ. ಸರ್ಕಾರಕ್ಕೆ ಕನಿಷ್ಠ ಮಾನವೀಯತೆ ಇದೆಯೇ?

**ಪ್ರಮುಖ ಹಕ್ಕೊತ್ತಾಯಗಳು**

- ಸಾಮಾಜಿಕ ಭದ್ರತೆ ಖಾತ್ರಿಪಡಿಸಬೇಕು
- ಆಶಾ ಕಾರ್ಯಕರ್ತೆಯರನ್ನು ಸರ್ಕಾರಿ ನೌಕರರೆಂದು ಪರಿಗಣಿಸಬೇಕು
- ಸಾರ್ವಜನಿಕರ ಆರೋಗ್ಯ ಬಲಪಡಿಸಲು ಅಗತ್ಯ ಇರುವ ಬಜೆಟ್ ಒದಗಿಸಬೇಕು
- ಆಶಾ ಕಾರ್ಯಕರ್ತೆಯರಿಂದ ಹೆಚ್ಚುವರಿ ಕೆಲಸ ಮಾಡಿಸಬಾರದು
- ನಿವೃತ್ತರಾದವರಿಗೆ ಇಡಿಗಂಟು ನೀಡಬೇಕು
- ಹೊಸದಾಗಿ ಮೊಬೈಲ್, ಡಾಟಾ ಒದಗಿಸಬೇಕು
- ಮಾಸಿಕ ವೇತನ, ಪ್ರಯಾಣ ಭತ್ಯೆ ಹೆಚ್ಚಿಸಬೇಕು
- ಆಶಾ ಸುಗಮಕಾರರನ್ನು ನೇಮಿಸಬೇಕು

ಎಂದು ಪ್ರಶ್ನಿಸಿದರು. ಆಶಾ ಕಾರ್ಯಕರ್ತೆಯರಿಗೆ ಕನಿಷ್ಠ 18 ಸಾವಿರ ಸಂಬಳ ನಿಗದಿ ಪಡಿಸಬೇಕು. ಸಾಮಾಜಿಕ ಭದ್ರತೆ ಒದಗಿಸಬೇಕು' ಎಂದು ಎಐಯುಟಿಯುಸಿ ರಾಜ್ಯ ಘಟಕದ ಕಾರ್ಯದರ್ಶಿ ಡಿ.ನಾಗಲಕ್ಷ್ಮಿ ಒತ್ತಾಯಿಸಿದರು. ಕಳೆದ ಹದಿನೈದು ವರ್ಷಗಳಿಂದ ಹೋರಾಟ ಮಾಡುತ್ತಿದ್ದರೂ ನಮ್ಮ ಸಮಸ್ಯೆಗೆ ಪರಿಹಾರ ಸಿಕ್ಕಿಲ್ಲ. ಶೋಷಣೆ ಅನ್ಯಾಯದ ವಿರುದ್ಧ ಹೋರಾಟ ನಡೆಸಲು ಎಲ್ಲರು ಸಂಘಟಿತರಾಗಬೇಕು. ಜನರ ಆರೋಗ್ಯದ ಕುರಿತು ಅರಿವು ಮೂಡಿಸುವವರು ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸುತ್ತಿಲ್ಲ. ಇದು ಬಹಳ ನೋವಿನ ವಿಷಯ ಎಂದು ಬೇಸರ ವ್ಯಕ್ತಪಡಿಸಿದರು.

# ನಾಲ್ಕು ಗೋಡೆಗಳ ಮಧ್ಯದಲ್ಲಿ ಆಡಳಿತ ನಡೆಸುವುದು ಸಮಂಜಸವಲ್ಲ

• ಉದಯವಾಹಿನಿ,ಬಂಗಾರಪೇಟೆ

ನಾಲ್ಕು ಗೋಡೆಗಳ ಮಧ್ಯದಲ್ಲಿ ಆಡಳಿತ ನಡೆಸುವುದು ಸಮಂಜಸವಲ್ಲ ಹಾಗೂ ಪಟ್ಟಣದ ಅಭಿವೃದ್ಧಿಯನ್ನು ವಿಶ್ಲೇಷಣೆ ಮಾಡುವುದೂ ಸೂಕ್ತವಲ್ಲ, ಈ ಹಿನ್ನೆಲೆಯಲ್ಲಿ ಪಟ್ಟಣದ ಜನರ ಸಮಸ್ಯೆಗಳನ್ನು ತಿಳಿಯುವ ಉದ್ದೇಶದಿಂದ ಪ್ರತಿಯೊಂದು ವಾರ್ಡ್‌ಗಳಿಗೆ ಭೇಟಿ ನೀಡಲಾಗುತ್ತಿದೆ ಎಂದು ಪುರಸಭಾ ಮುಖ್ಯ ಅಧಿಕಾರಿ ಸತ್ಯನಾರಾಯಣ ಅಭಿಪ್ರಾಯಪಟ್ಟರು.

ಪಟ್ಟಣದ ವಿವೇಕಾನಂದ ನಗರ ಬಡಾವಣೆಗೆ ದಿಢೀರ್ ಭೇಟಿ ನೀಡಿ ಜನರ ಸಮಸ್ಯೆಗಳನ್ನು ಕುದ್ದು ಆಲಿಸಿ ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಪ್ರಸ್ತುತ ದಿನಗಳಲ್ಲಿ ರಾಜ್ಯಾವ್ಯಾಪೀ ಡೆಂಗಿ ಪ್ರಮಾಣ ಹೆಚ್ಚಾಗುತ್ತಿದ್ದು ಬಂಗಾರಪೇಟೆ ಪುರಸಭೆ ಮುಂ ಜಾಗ್ರತ ಕ್ರಮವಾಗಿ ಅನೇಕ ಕಾರ್ಯಕ್ರಮಗಳನ್ನು ಕೈಗೊಂಡಿದೆ ಇದರೊಟ್ಟಿಗೆ ಕೆಲವು ಪ್ರದೇಶಗಳಲ್ಲಿ ನೀರಿನ ಸಮಸ್ಯೆ ಇದ್ದು ಅದನ್ನು ಬಗೆಹರಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ನಡೆಸಲಾಗುತ್ತಿದೆ ಎಂದರು.


ಉದಯವಾಹಿನಿ ಚಿತ್ರ

ಸದೃಢ ಮತ್ತು ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಪುರಸಭೆ ಬದ್ಧವಾಗಿದ್ದು ಪ್ರತಿಯೊಂದು ವಾರ್ಡ್‌ನಲ್ಲೂ ಸ್ವಚ್ಛತೆಗೆ ಹೆಚ್ಚಿನ ಆದ್ಯತೆಯನ್ನು ನೀಡಲಾಗಿದೆ, ಜನರಿಗೆ ಮೂಲಭೂತವಾಗಿ ಬೇಕಾಗಿರುವಂತಹ ವಿದ್ಯುತ್ ದೀಪ, ಕಸ ವಿಲೇವಾರಿ, ಕುಡಿಯುವ ನೀರಿನ ಸಮರ್ಪಕ ನಿರ್ವಹಣೆಯನ್ನು ಪುರಸಭೆ ಮಾಡಲಾಗುತ್ತಿದೆ, ಕೆಲವು ಪ್ರದೇಶಗಳಲ್ಲಿ ಒಳಚರಂಡಿ ಸಮಸ್ಯೆ ಇದ್ದು ಅದನ್ನು ಅತಿ ಶೀಘ್ರದಲ್ಲಿ ಬಗೆಹರಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು. ಈ ಸಂದರ್ಭದಲ್ಲಿ ಇಂಜಿನಿಯರ್ ರವಿ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಸಹಕಾರ ಬ್ಯಾಂಕ್‌ನಿಂದ ಸಿಗುವ ಸೌಲಭ್ಯ ಸದುಪಯೋಗಪಡಿಸಿಕೊಳ್ಳಿ

• ಉದಯವಾಹಿನಿ,ಶಿಡ್ಲಘಟ್ಟ

ರೈತರು ಹಾಗೂ ಮಹಿಳಾ ಸಂಘಗಳ ಪ್ರತಿನಿಧಿಗಳು ಸಹಕಾರ ಬ್ಯಾಂಕ್‌ನಿಂದ ಸಿಗುವ ಸೌಲಭ್ಯ ಸದುಪಯೋಗಪಡಿಸಿಕೊಂಡು ನಿಗದಿತ ಸಮಯದಲ್ಲಿ ಮರು ಪಾವತಿ ಮಾಡುವ ಮೂಲಕ ಸಹಕಾರಿ ಕ್ಷೇತ್ರಕ್ಕೆ ಶಕ್ತಿ ತುಂಬಿಸುವ ಕಾರ್ಯ ಮಾಡಬೇಕು ಎಂದು ಅಧ್ಯಕ್ಷ ಡಾ.ಜಯರಾಮರೆಡ್ಡಿ ತಿಳಿಸಿದರು.

ತಾಲ್ಲೂಕಿನ ಆನೆಮಡಗು ವ್ಯವಸಾಯ ಸೇವಾ ಸಹಕಾರ ಸಂಘದ ಆವರಣದಲ್ಲಿ ಶನಿವಾರ ಆಯೋಜಿಸಿದ್ದ 2024-25ನೇ ಸಾಲಿನ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿದರು. ರೈತರಿಗೆ ಬಡ್ಡಿರಹಿತ ಸಾಲ ಸೌಲಭ್ಯ ಕಲ್ಪಿಸಲಾಗುತ್ತಿದೆ. ರೈತರು ಹೆಚ್ಚಿನ ಸಂಖ್ಯೆಯಲ್ಲಿ ಸಹಕಾರ ಬ್ಯಾಂಕಿನಲ್ಲಿ ವ್ಯವಹರಿಸಬೇಕು. ರಾಷ್ಟ್ರೀಕೃತ ಬ್ಯಾಂಕ್‌ಗಳಿಗಿಂತಲೂ ಉತ್ತಮವಾದ ಸೌಲಭ್ಯಗಳನ್ನು ಇಲ್ಲಿ ಕಲ್ಪಿಸಿಕೊಡಲಾಗುತ್ತಿದೆ. ಸಾಲ ಪಡೆದಂತವರು ಸಮಯಕ್ಕೆ ಸರಿಯಾಗಿ ಹಿಂತಿರುಗಿಸಿ, ಪುನಃ ಪಡೆದುಕೊಂಡರೆ ಸಂಘವು ಅಭಿವೃದ್ಧಿಯಾಗುತ್ತದೆ, ಹಾಗೆಯೇ ಮತ್ತಷ್ಟು ರೈತರಿಗೆ ಸಾಲ ನೀಡಲು ಅನುಕೂಲವಾಗುತ್ತದೆ ಎಂದರು.


ಉದಯವಾಹಿನಿ ಚಿತ್ರ

ಈ ಭಾಗದ ಪ್ರತಿಯೊಬ್ಬ ವ್ಯಕ್ತಿಗೂ ಸೇವೆ ಸಿಗಬೇಕು ಎಂಬ ಧ್ಯೇಯವನ್ನು ಹೊಂದಿದ್ದು, ಕೃಷಿಕರ ಬೆನ್ನೆಲುಬು ಆಗಿ ಸದಾ ಜೊತೆಯಲ್ಲಿ ಇರಬೇಕು, ಆ ಮೂಲಕ ಗ್ರಾಮದ ಅಭಿವೃದ್ಧಿಗೆ ಪೂರಕವಾಗಿ ಕೆಲಸ ಮಾಡಬೇಕು. ಸಂಸ್ಥೆಯ ಸಾಧನೆಯ ದಾರಿಯಲ್ಲಿ ಇನ್ನಷ್ಟು ಮುನ್ನಡೆಯಬೇಕು, ಅದಕ್ಕಾಗಿ ಸರ್ವರೂ ಸಂಘದಲ್ಲಿಯೆ ಠೇವಣಿದಾರರಾಗಿ, ಸಾಲ ಸೌಲಭ್ಯಗಳನ್ನು ಪಡೆದುಕೊಂಡು, ಸಕಾಲದಲ್ಲಿ ಮರುಪಾವತಿ ಮಾಡಿ ಸಂಸ್ಥೆಯನ್ನು ಪ್ರಗತಿಪಥದಲ್ಲಿ ಸಾಗಿಸಲು ಸಹಕಾರ ನೀಡಿ ಎಂದು ಉಪಾಧ್ಯಕ್ಷ ಸಿ. ವೆಂಕಟೇಶಪ್ಪ ತಿಳಿಸಿದರು.

> ಸರ್ಕಾರದ ಆದೇಶದಂತೆ ಸಂಘವು ಮಾದರಿ ಉಪನಿಯಮ ಗಳನ್ನು ಅಳವಡಿಸಿಕೊಳ್ಳುವ ಕುರಿತು ಸರ್ವ ಸದಸ್ಯರ ಅನುಮೋದನೆಯನ್ನು ಪಡೆಯಲಾಯಿತು. ಸಂಘದ ಸದಸ್ಯರ ಒಂದು ಪಾಲಿನ ಮೊಬಲಗು ರೂ. 1000/- ಆಗಲಿದ್ದು ಕಡಿಮೆ ಬೀಳುವ ಮೊತ್ತವನ್ನು ಸದಸ್ಯರು ಭರ್ತಿ ಮಾಡಿಕೊಳ್ಳಬೇಕೆಂದು ಸದಸ್ಯರಿಗೆ ತಿಳಿಸಲಾಯಿತು.

ನಿರ್ದೇಶಕ ರಾದ. ಬೈರಾರೆಡ್ಡಿ, ಸೋಮ ಶೇಖರ್ ರೆಡ್ಡಿ,ಎ.ಎನ್‌ಲಕ್ಷ್ಮಿನಾರಾಯಣ, ನರಸಿಂಹಪ್ಪ, ಡಿ.ಬಿ. ವೆಂಕಟೇಶ್, ನರಸಿಂಹಪ್ಪ, ಲಕ್ಷ್ಮಿನಾರಾಯಣ,ಎಲ್. ಅನುಸೂಯಮ್ಮ, ಸುಶೀಲಮ್ಮ, ಎಂ.ಪಿಸಿಎಸ್ ಅಧ್ಯಕ್ಷ ನಾರಾಯಣಸ್ವಾಮಿ, ಸಂಘದ ಮಾಜಿ ಅಧ್ಯಕ್ಷ ನರಸಪ್ಪ, ಮುಖ್ಯಕಾರ್ಯ ನಿರ್ವಹಣಾಧಿಕಾರಿ ಸದಾಶಿವರೆಡ್ಡಿ, ಪಿ ಎನ್.ನರಸಿಂಹರೆಡ್ಡಿ, ಸಹಕಾರ ಸಂಘದ ಸಿಬ್ಬಂದಿ ಮತ್ತು ಗ್ರಾಮಸ್ಥರು ಹಾಜರಿದ್ದರು.

# ಕಾಂಗ್ರೆಸ್ ಆಡಳಿತದಲ್ಲಿ ಶೇ.40ಕ್ಕೂ ಹೆಚ್ಚಿನ ಕಮಿಷನ್ ಬೇಡಿಕೆ?

• ಉದಯವಾಹಿನಿ, ತುಮಕೂರು

ಈ ಹಿಂದೆ ರಾಜ್ಯ ವಿಧಾನಸಭೆ ಚುನಾವಣೆ ಸಮಯದಲ್ಲಿ ಬಿಜೆಪಿ ವಿರುದ್ಧ 40% ಕಮಿಷನ್ ಆರೋಪ ಮಾಡಿ ಅಧಿಕಾರಕ್ಕೆ ಬಂದಿದ್ದ ಕಾಂಗ್ರೆಸ್ ಭ್ರಷ್ಟಾಚಾರವನ್ನು ಸಂಪೂರ್ಣವಾಗಿ ತೊಡೆದು ಹಾಕುವುದಾಗಿ ಜನರಿಗೆ ಮಾತು ಕೊಟ್ಟಿತ್ತು. ಇದೀಗ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧವೇ ಶೇ. 40 ರಷ್ಟು ಕಮಿಷನ್ ಆರೋಪ ಕೇಳಿ ಬಂದಿದ್ದು, ಸಾಲು ಸಾಲು ಹಗರಣಗಳ ನಡುವೆ ಇದು ಮಗ್ಗಲ ಮುಳ್ಳಾಗಿ ಪರಿಣಮಿಸಿದೆ.


ಉದಯವಾಹಿನಿ ಚಿತ್ರ

**ಭ್ರಷ್ಟಾಚಾರವನ್ನು ತೊಡೆದು ಹಾಕುವುದಾಗಿ ಜನರಿಗೆ ಮಾತು**

ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಗುತ್ತಿಗೆ ದಾರರು ಶೇ.40ಕ್ಕೂ ಹೆಚ್ಚು ಕಮಿಷನ್ ನೀಡಿ ಬಿಲ್ ಮಂಜೂರು ಮಾಡಿಕೊಳ್ಳಬೇಕಾಗಿದೆ ಎಂದು ತುಮಕೂರು ಜಿಲ್ಲಾ ಸಿವಿಲ್ ಗುತ್ತಿಗೆದಾರರ ಸಂಘ ದ ಅಧ್ಯಕ್ಷ, ಹಿರಿಯ ಕಾಂಗ್ರೆಸ್ ಮುಖಂಡ ಎ.ಡಿ.ಬಲರಾಮಯ್ಯ ಆರೋಪಿಸಿದ್ದಾರೆ. ತುಮಕೂರಿನಲ್ಲಿ ಈ ಕುರಿತು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಬಲರಾಮಯ್ಯ, ಸ್ಥಳೀಯ ಗುತ್ತಿಗೆದಾರರು ನೀಡಿದ ದೂರಿನ ಮೇರೆಗೆ ಚಿಕ್ಕ ನಾಯಕನಹಳ್ಳಿಯಲ್ಲಿ ಇತ್ತೀಚೆಗೆ ಲೋಕಾಯುಕ್ತ ಪೊಲೀಸರು ಕೆಲವು ಎಂಜಿನಿಯರ್‌ಗಳ ಮನೆ, ಕಚೇರಿಗಳ ಮೇಲೆ ದಾಳಿ ನಡೆಸಿ ಬಂಧಿಸಿದ್ದಾರೆ.

ಆರೋಪಿಗಳು ಜಲ ಜೀವನ್ ಮಿಷನ್ ಅಡಿಯಲ್ಲಿ ಮಾಡಿದ ಕಾಮಗಾರಿಗಳಿಗೆ ಬಿಲ್‌ಗಳನ್ನು ಕ್ಲಿಯರ್ ಮಾಡಲು ಭಾರಿ ಮೊತ್ತದ ಲಂಚ ಕೇಳಿದ್ದರು. ಕಮಿಷನ್ ನೀಡದಿದ್ದರೆ ಗುತ್ತಿಗೆದಾರರ ಬಿಲ್‌ಗಳನ್ನು ಕ್ಲಿಯರ್ ಮಾಡದಂತೆ ಕಾಂಗ್ರೆಸ್ ಶಾಸಕರು ಮತ್ತು ಸಚಿವರು ಜಿಲ್ಲಾ ಪಂಚಾಯಿತಿ ಅಧಿಕಾರಿಗಳಿಗೆ ಸೂಚಿಸಿರುವುದಾಗಿ ಆರೋಪಿಸಿದ್ದಾರೆ.

> ಕಮಿಷನ್ ಹಾವಳಿಗೆ ಕಡಿವಾಣ ಹಾಕಲು ಕ್ರಮ ಕೈಗೊಳ್ಳದಿದ್ದಲ್ಲಿ ನಡೆಯುತ್ತಿರುವ ಕಾಮಗಾರಿಗಳನ್ನು ನಿಲ್ಲಿಸಿ ಹೋರಾಟ ನಡೆಸುತ್ತೇವೆ. ಬಿಜೆಪಿ ಆಡಳಿತದಲ್ಲಿ ಶೇ.40ರಷ್ಟು ಕಮಿಷನ್ ನೀಡಲಾಗಿತ್ತು. ಈಗ ಶೇ.40ಕ್ಕಿಂತ ಹೆಚ್ಚಿದೆ. ಧಾನಸಭೆ ಚುನಾವಣೆಗೂ ಮುನ್ನ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಮ್ಮ ಪಕ್ಷ ಅಧಿಕಾರಕ್ಕೆ ಬಂದರೆ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕುವುದಾಗಿ ಭರವಸೆ ನೀಡಿದ್ದರು. ಆದರೆ, ಕಾಂಗ್ರೆಸ್ ಅಧಿಕಾರಕ್ಕೆ ಬಂದು ಒಂದೂವರೆ ವರ್ಷ ಕಳೆದರೂ ಪರಿಸ್ಥಿತಿ ಬದಲಾಗಿಲ್ಲ. ಭ್ರಷ್ಟಾಚಾರ ಕಡಿಮೆಯಾಗುವ ಬದಲು ಹೆಚ್ಚಾಗಿದೆ ಎಂದು ಆರೋಪಿಸಿದ್ದಾರೆ.

# ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ ಹರಿದುಬಂದ ಭಕ್ತಸಾಗರ

• ಉದಯವಾಹಿನಿ, ಚಾಮರಾಜನಗರ

ಶನಿವಾರ ನಾಲ್ಕನೇ ಹಾಗೂ ಕಡೆ ಶ್ರಾವಣ ಶನಿವಾರ ಪ್ರಯುಕ್ತ ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆ ತಾಲ್ಲೂಕಿನ ಪ್ರಸಿದ್ಧ ಧಾರ್ಮಿಕ ಹಾಗೂ ಯಾತ್ರ ಸ್ಥಳವಾದ ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ ಸಾವಿರಾರು ಮಂದಿ ಭಕ್ತಾದಿಗಳು ಆಗಮಿಸಿ ಗೋಪಾಲನ ದರ್ಶನ ಪಡೆದರು. ಶ್ರಾವಣ ಮಾಸದ ಕೊನೆಯ ಶನಿವಾರವಾದ ಹಿನ್ನೆಲೆ ಗುಂಡ್ಲುಪೇಟೆ ಪಟ್ಟಣದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಿಂದ ಬೆಟ್ಟಕ್ಕೆ ತೆರಳಲು ಸುಮಾರು 25ಕ್ಕೂ ಅಧಿಕ ಬಸ್‌ಗಳನ್ನು ನಿಯೋಜನೆ ಮಾಡಲಾಗಿತ್ತು. ಮೈಸೂರು, ಮಂಡ್ಯ, ಚಾಮರಾಜನಗರ ಸೇರಿದಂತೆ ಊಟಿ, ಕೇರಳ ಕಡೆಯಿಂದ ಸಾವಿರಾರು ಮಂದಿ ಭಕ್ತಾದಿಗಳು ಆಗಮಿಸಿದ್ದರು.

**ಕಡೇ ಶ್ರಾವಣ ಶನಿವಾರ ಸಂಭ್ರಮ**

ಬೆಳಗ್ಗೆ 10 ಗಂಟೆಯಿಂದಲೇ ಅಧಿಕ ಭಕ್ತರು ಭೇಟಿ ನೀಡಿದ್ದ ಕಾರಣ ಗೋಪಾಲಸ್ವಾಮಿ ಬೆಟ್ಟದ ತಪ್ಪಲಿನಲ್ಲಿ ಕಿಲೋ ಮೀಟರ್ ದೂರದವರೆಗೆ ಜನರು ಸಾಲುಗಟ್ಟಿ ಗಂಟೆಗಟ್ಟಲೇ ನಿಂತು ಟಿಕೆಟ್ ಖರೀದಿಸಿ ಬೆಟ್ಟಕ್ಕೆ ತೆರಳಿದರು.

ಗೋಪಾಲಸ್ವಾಮಿ ಬೆಟ್ಟಕ್ಕೆ 12 ಗಂಟೆ ವೇಳೆಗೆ ಅಧಿಕ ಮಂದಿ ಭಕ್ತರು ಆಗಮಿಸಿದ್ದ ಕಾರಣ ಜನಜಂಗುಳಿ ಹೆಚ್ಚಿನ ರೀತಿಯಲ್ಲಿ ಕಂಡು ಬಂತು. ಇದರಿಂದ ದೇವಸ್ಥಾನದ ಸುತ್ತಲೂ ಎರಡು ಸಾಲಿನಲ್ಲಿ ಭಕ್ತರು ಗಂಟೆಗಟ್ಟಲೇ ನಿಂತು ದೇಗುಲಕ್ಕೆ ತೆರಳಿ ದೇವರ ದರ್ಶನ ಪಡೆದರು.


ಉದಯವಾಹಿನಿ ಚಿತ್ರ

ವಾತಾವರಣ ತಣ್ಣಗಿದ್ದ ಕಾರಣ ಹೆಚ್ಚಿನ ಸಮಸ್ಯೆ ಆಗಲಿಲ್ಲ. ಕಡೆ ಶ್ರಾವಣ ಶನಿವಾರ ಪ್ರಯುಕ್ತ ದೇವಸ್ಥಾನದ ಅರ್ಚಕ ಗೋಪಾಲಕೃಷ್ಣ ಭಟ್ಟರು ಗೋಪಾಲಸ್ವಾಮಿಗೆ ವಿವಿಧ ಬಗೆಯ ಹೂವು ಹಾಗೂ ತುಳಿಸಿಯಿಂದ ವಿಶೇಷ ಅಲಂಕಾರ ಮಾಡಿ ಮಹಾ ಮಂಗಳಾರತಿ ನೆರವೇರಿಸಿದರು. ಸಾಲಿನಲ್ಲಿ ಬಂದ ಭಕ್ತಾದಿಗಳು ದೇವರಿಗೆ ಮಾಡಿದ ಅಲಂಕಾರ ಕಣ್ತುಂಬಿಕೊಂಡರು.

# ಮದುವೆಯಾಗುವುದಾಗಿ ನಂಬಿಸಿ ಯುವಕನಿಂದ ಲಕ್ಷ ಲಕ್ಷ ದೋಚಿದ ಮಹಿಳೆ; ಕೊನೆಗೂ ಅರೆಸ್ಟ್

• ಉದಯವಾಹಿನಿ, ಚಿಕ್ಕಬಳ್ಳಾಪುರ

ಪತಿ ಕಳೆದುಕೊಂಡಿದ್ದ ಮಹಿಳೆಯೊಬ್ಬರು, ಯುವಕರನ್ನು ಮದುವೆಯಾಗುವುದಾಗಿ ನಂಬಿಸಿ ಲಕ್ಷ ಲಕ್ಷ ಹಣ ದೋಚಿ ವಂಚಿಸುತ್ತಿದ್ದ ಪ್ರಕರಣ ಬೆಳಕಿಗೆ ಬಂದಿದೆ. ಚಿಕ್ಕಬಳ್ಳಾಪುರದ ಸಿಇಎನ್ ಠಾಣೆ ಪೊಲೀಸರು ಮಹಿಳೆಯನ್ನು ಬಂಧಿಸಿದ್ದಾರೆ. ಕೋಮಲಾ ಬಂಧಿತ ಮಹಿಳೆ. 7 ವರ್ಷಗಳ ಹಿಂದೆ ಪತಿಯನ್ನು ಕಳೆದುಕೊಂಡಿದ್ದ ಕೋಮಲಾ ಐಷಾರಾಮಿ ಜೀವನಕ್ಕಾಗಿ ಯುವಕರನ್ನು ಯಾಮಾರಿಸಿ ಹಣ ದೋಚುತ್ತಿದ್ದಳು. ಮ್ಯಾಟ್ರಿಮೋನಿ ವೆಬ್ ಸೈಟ್ ಮೂಲಕ ಯುವಕರನ್ನು ಪರಿಚಯಿಸಿಕೊಂಡು ಮದುವೆಯಾಗುವುದಾಗಿ ನಂಬಿಸಿ ಲಕ್ಷ ಲಕ್ಷ ಹಣ ಪಡೆದು ಎಸ್ಕೇಪ್ ಆಗುತ್ತಿದ್ದಳು. ಇದೀಗ ಚಿಕ್ಕಬಳ್ಳಾಪುರ ಪೊಲೀಸರು ಮಹಿಳೆಯನ್ನು ಬಂಧಿಸಿದ್ದಾರೆ. ರಾಘವೇಂದ್ರ ಎಂಬುವವರಿಗೆ ಮಹಿಳೆ ಕೋಮಲಾ ಮ್ಯಾಟ್ರಿಮೋನಿ ವೆಬ್ ಸೈಟ್ ಮೂಲಕ ಪರಿಚಯವಾಗಿ, ವಿವಾಹವಾಗುವುದಾಗಿ ನಂಬಿಸಿ 7.40 ಲಕ್ಷ ಹಣ ಪಡೆದು ಮೋಸ ಮಾಡಿದ್ದಳು. ಈ ಹಿನ್ನೆಲೆಯಲ್ಲಿ ರಾಘವೇಂದ್ರ ಚಿಕ್ಕಬಳ್ಳಾಪುರ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಮಹಿಳೆ ಬಂಧಿಸಿ ವಿಚಾರಣೆ ನಡೆಸಿದ ವೇಳೆ ಆಕೆ ಇದೇ ರೀತಿ ಹಲವರನ್ನು ವಂಚಿಸಿರುವುದು ಬೆಳಕಿಗೆ ಬಂದಿದೆ. ಗುಜರಾತ್ ನಲ್ಲಿರುವ ಕುಂದಾಪುರ ನಿವಾಸಿಯೊಬ್ಬರಿಗೂ ಮಹಿಳೆ ಇದೇ ರೀತಿ ಮೋಸ ಮಾಡಿದ್ದಾಳೆ. ಬೆಂಗಳೂರಿನ ನಾಗರಾಜ್ ಎಂಬುವವರ ಬಳಿ 1.50 ಲಕ್ಷ ಹಣ ಪಡೆದು ವಂಚಿಸಿದ್ದಾಳೆ.

ಕೆಪಿಟಿಸಿಎಲ್ ನೌಕರನಾಗಿದ್ದ ಕೋಮಲಾ ಪತಿ 2017ರಲ್ಲಿ ಸಾವನ್ನಪ್ಪಿದ್ದರು. ಪತಿ ಸಾವನ್ನಪ್ಪಿರುವುದರಿಂದ 6 ಕೋಟಿ ಪರಿಹಾರದ ಹಣಕ್ಕೆ ಟ್ಯಾಕ್ಸ್ ಕಟ್ಟಬೇಕು ಎಂದು ಹೇಳಿ ಮಹಿಳೆ ಹಣ ವಸೂಲಿ ಮಾಡುತ್ತಿದ್ದಳು ಎಂದು ತಿಳಿದುಬಂದಿದೆ.

# ಬಿಜೆಪಿ ಎಸ್‌ಸಿ ಮೋರ್ಚಾ ಜಿಲ್ಲಾ ಕಾರ್ಯಕಾರಿಣಿ ಸಭೆ

• ಉದಯವಾಹಿನಿ, ಮಡಿಕೇರಿ

ಬಿಜೆಪಿ ಕೊಡಗು ಜಿಲ್ಲಾ ಎಸ್.ಸಿ ಮೋರ್ಚಾದಲ್ಲಿ ಸಾವಿರಕ್ಕೂ ಅಧಿಕ ಕಾರ್ಯಕರ್ತರನ್ನು ನೋಂದಣಿ ಮಾಡುವ ಗುರಿ ಹೊಂದಲಾಗಿದೆ ಎಂದು ಮೋರ್ಚಾದ ಜಿಲ್ಲಾ ಘಟಕದ ಅಧ್ಯಕ್ಷ ಪಿ.ಎಂ.ರವಿ ಮೊಗೇರ ತಿಳಿಸಿದರು. ಇಲ್ಲಿನ ಪಕ್ಷದ ಕಚೇರಿಯಲ್ಲಿ ನಡೆದ ಬಿಜೆಪಿ ಎಸ್.ಸಿ ಮೋರ್ಚಾದ ಜಿಲ್ಲಾ ಕಾರ್ಯಕಾರಣಿಯಲ್ಲಿ ಅವರು ಮಾತನಾಡಿದರು.

ಪ್ರಗತಿ ಬಯಸದ ಪ್ರಗತಿಪರರು, ವಿಚಾರ ಇಲ್ಲದ ವಿಚಾರವಾದಿಗಳು, ಬುದ್ಧಿ ಇಲ್ಲದ ಬುದ್ಧಿಜೀವಿಗಳು ಪರಿಶಿಷ್ಟ ಜಾತಿಯ ಜನರನ್ನು ಕಾಂಗ್ರೆಸ್‌ಗೆ ಬೆಂಬಲ ನೀಡುವಂತೆ ಹೇಳುತ್ತಿದ್ದಾರೆ. ಮಾತ್ರವಲ್ಲ, ಬಿಜೆಪಿಯನ್ನು ದಲಿತ ವಿರೋಧಿ ಎಂದು ಕಾಂಗ್ರೆಸ್ ಬಿಂಬಿಸುತ್ತಿದೆ. ಆದರೆ, ದಲಿತರಿಗೆ ಬಿಜೆಪಿ ಉನ್ನತ ಸ್ಥಾನಮಾನ ನೀಡಿದೆ' ಎಂದು ಪ್ರತಿಪಾದಿಸಿದರು. ಹಿಂದಿನ ರಾಷ್ಟ್ರಪತಿ, ಈಗಿನ ರಾಷ್ಟ್ರಪತಿ ಮಾತ್ರವಲ್ಲ ಇನ್ನೂ ಅನೇಕ ಉನ್ನತ ಸ್ಥಾನಗಳಿಗೆ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದವರನ್ನು ಬಿಜೆಪಿ ನೇಮಕ ಮಾಡಿದೆ. ಆದರೆ, ಕೇವಲ ಮತಬ್ಯಾಂಕ್ ರಾಜಕಾರಣಕ್ಕಾಗಿ ದಲಿತರ ಪರವಾಗಿ ಮಾತನಾಡುವ ಕಾಂಗ್ರೆಸ್ ಪಕ್ಷವು ಬಿಜೆಪಿ ಕೊಟ್ಟಷ್ಟು ಸ್ಥಾನಮಾನ ನೀಡಿಲ್ಲ' ಎಂದು ಹೇಳಿದರು.


ಉದಯವಾಹಿನಿ ಚಿತ್ರ

ಶನಿವಾರ ರಾಜ್ಯದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಎಸ್.ಸಿ ಎಸ್.ಟಿ ಅನುದಾನವನ್ನು ಸರ್ಕಾರ ಅನ್ಯ ಉದ್ದೇಶಕ್ಕೆ ಬಳಕೆ ಮಾಡಿಕೊಂಡಿದೆ' ಎಂದು ಆರೋಪಿಸಿದರು. ಬಿಜೆಪಿ ನಾಯಕ ಎಂ.ಪಿ.ಅಪ್ಪಚ್ಚುರಂಜನ್ ಮಾತನಾಡಿ, ಕಾಂಗ್ರೆಸ್ ದಲಿತರ ಮತ ಪಡೆದು ಅವರ ಅಭಿವೃದ್ಧಿಗೆ ಯಾವುದೇ ಕ್ರಮಗಳನ್ನೂ ಕೈಗೊಳ್ಳುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

> ಬಿಜೆಪಿ ಕೇವಲ ಮೇಲ್ವರ್ಗದವರ ಪಕ್ಷ ಎಂಬ ತಪ್ಪು ಅಭಿಪ್ರಾಯವನ್ನು ಕಾಂಗ್ರೆಸ್ ಮೂಡಿಸುತ್ತಿದೆ. ಇದಕ್ಕೆ ಪ್ರತಿಯಾಗಿ ಬಿಜೆಪಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ನೀಡಿರುವ ಉನ್ನತ ಸ್ಥಾನಮಾನಗಳನ್ನು ಕುರಿತು ಪಕ್ಷದ ಕಾರ್ಯಕರ್ತರು ಹೆಚ್ಚು ಪ್ರಚಾರ ಮಾಡಬೇಕು. ಕೊಡಗು ಜಿಲ್ಲೆಯಲ್ಲಿರುವ 40 ಸಾವಿರ ಪರಿಶಿಷ್ಟ ಜಾತಿಯ ಮತದಾರರಿಗೆ ಮನವರಿಕೆ ಮಾಡಿ ಕೊಡಬೇಕು' ಎಂದು ಕರೆ ನೀಡಿದರು.

# ಮೈಸೂರಿನಲ್ಲಿ ದಸರಾ ಗಜಪಡೆಗೆ ಈಗ ರಾಜಾತಿಥ್ಯ ಹೇಗಿದೆ ಗೊತ್ತಾ?

## ಈಗಾಗಲೇ ನಗರಕ್ಕೆ ಬಂದಿರುವ ಅಭಿಮನ್ಯು ನೇತೃತ್ವದ ಗಜಪಡೆ ಪ್ರತಿದಿನವೂ ಬೆಳಿಗ್ಗೆ ಮತ್ತು ಸಂಜೆ ತಾಲೀಮು

• ಉದಯವಾಹಿನಿ, ಮೈಸೂರು

ವಿಶ್ವವಿಖ್ಯಾತ ನಾಡಹಬ್ಬ ದಸರಾಕ್ಕೆ ಮೈಸೂರು ನಗರ ನಿಧಾನವಾಗಿ ತೆರೆದುಕೊಳ್ಳುತ್ತಿದೆ. ಈಗಾಗಲೇ ನಗರಕ್ಕೆ ಬಂದಿರುವ ಅಭಿಮನ್ಯು ನೇತೃತ್ವದ ಗಜಪಡೆ ಪ್ರತಿದಿನವೂ ಬೆಳಿಗ್ಗೆ ಮತ್ತು ಸಂಜೆ ತಾಲೀಮು ನಡೆಸುತ್ತಿವೆ. ಆ ಮೂಲಕ ಜಂಬೂ ಸವಾರಿಗೆ ತಯಾರಿ ನಡೆಸುತ್ತಿದ್ದರೆ, ಅದರ ಜತೆಗೆ ಗಜಪಡೆಗೆ ಪೋಷಕಾಂಶವುಳ್ಳ ಆಹಾರ ನೀಡಿ ಆರೋಗ್ಯ ಕಾಪಾಡಿಕೊಂಡು ದಷ್ಟಪುಷ್ಟಗೊಳಿಸುವ ಮೂಲಕ ಶಕ್ತಿಶಾಲಿಗಳನ್ನಾಗಿ ಮಾಡಬೇಕಾಗಿರುವುದರಿಂದ ರಾಜಾತಿಥ್ಯ ನೀಡಲಾಗುತ್ತಿದೆ.

ಗಜಪಡೆಗೆ ರಾಜಾತಿಥ್ಯ ನೀಡುವುದು ಪ್ರತಿವರ್ಷವೂ ನಡೆಯುತ್ತದೆ. ಅದರಂತೆ ದಸರಾ ಜಂಬೂಸವಾರಿ ಹೊತ್ತಿಗೆ ಗಜಪಡೆ ತೂಕ ಹೆಚ್ಚಿಸಿಕೊಂಡು ದಷ್ಟಪುಷ್ಟವಾಗಿ ಕಾಣಿಸುವುದರೊಂದಿಗೆ ಜಂಬೂ ಸವಾರಿಯಲ್ಲಿ ಜನಮನಸೆಳೆಯುತ್ತವೆ. ಕಾಡಿನಲ್ಲಿ ಅವುಗಳಿಗೆ ಸೊಪ್ಪು ಹಾಗೂ ಹುರುಳಿ ಸೇರಿದಂತೆ ಕೆಲವೊಂದು ಪದಾರ್ಥಗಳನ್ನು ನೀಡಲಾಗುತ್ತದೆಯಾದರೂ ಭೂರಿ ಭೋಜನ ಸಿಗುವುದಿಲ್ಲ. ಹೀಗಾಗಿ ಕಾಡಿನಿಂದ ನಾಡಿಗೆ ಬರುವ ವೇಳೆ ಹೆಚ್ಚಿನ ತೂಕ ಕಡಿಮೆಯಿರುತ್ತದೆಯಾದರೂ ತದ ನಂತರ ಇಲ್ಲಿನ ಪೌಷ್ಠಿಕ ಆಹಾರವನ್ನು ಸೇವಿಸುವುದರಿಂದ ತೂಕ ಹೆಚ್ಚಾಗುತ್ತದೆ. ಗಜಪಡೆ ಪೈಕಿ ಕ್ಯಾಪ್ಟನ್ ಆರುವ ಅಭಿಮನ್ಯು ಸಾವಿರ ಕೆಜಿಯಷ್ಟು ಇರುವ ಅಂಬಾರಿ ಹೊತ್ತು ಸುಮಾರು ಐದಾರು ಕಿ.ಮೀ. ನಡೆಯಬೇಕಾಗಿರುವುದರಿಂದ ಆರೋಗ್ಯಕಾರಿ, ಪೌಷ್ಠಿಕ ಆಹಾರವನ್ನೇ ನೀಡಬೇಕಾಗುತ್ತದೆ.


ಉದಯವಾಹಿನಿ ಚಿತ್ರ

ಅದರ ತೂಕ ಹೆಚ್ಚಿಸುವುದರ ಜತೆಗೆ ಶಕ್ತಿಶಾಲಿಯನ್ನಾಗಿ ಮಾಡ ಬೇಕಾಗುತ್ತದೆ. ಇದರ ಆರೋಗ್ಯ ನೋಡಿಕೊಂಡು ಪಶುವೈದ್ಯಾಧಿಕಾರಿಗಳ ಸಲಹೆಯಂತೆ ಆಹಾರವನ್ನು ನೀಡಬೇಕಾಗುತ್ತದೆ. ಹೀಗಾಗಿ ದಿನದಲ್ಲಿ ಯಾವ ಹೊತ್ತಿಗೆ ಯಾವ ಆಹಾರ ನೀಡಬೇಕು? ಎಷ್ಟು ಪ್ರಮಾಣದಲ್ಲಿ ನೀಡಬೇಕು ಎಂಬುದರ ಸಲಹೆಯಂತೆಯೇ ಆಹಾರ ನೀಡಲಾಗುತ್ತದೆ.

> ತಮ್ಮ, ತಮ್ಮ ಆನೆಗಳೊಂದಿಗಿದ್ದು, ಅವುಗಳ ಇಷ್ಟೆಯರಿತು ನೀರು, ಆಹಾರ ನೀಡುತ್ತಾ ಸಲಹುತ್ತಾರೆ. ಇನ್ನು ಮಕ್ಕಳಂತು ಸದಾ ಆನೆಗಳೊಂದಿಗೆ ಕಾಲ ಕಳೆಯುತ್ತಿರುತ್ತಾರೆ. ಹೀಗೆ ಆನೆಗಳ ಜತೆಗಿದ್ದುಕೊಂಡೇ ಅವುಗಳ ಪೋಷಣೆ ಮಾಡುವುದಲ್ಲದೆ, ತಮ್ಮ ನಿಯಂತ್ರಣದಲ್ಲಿಟ್ಟುಕೊಳ್ಳುತ್ತಾರೆ. ಆನೆಗಳು ಕೂಡ ಮಾವುತರು, ಕಾವಾಡಿಗಳು ಹೇಳಿದಂತೆ ನಡೆದುಕೊಳ್ಳುತ್ತವೆ. ಕಾಡಿನಿಂದ ನಾಡಿಗೆ ಬಂದು ತಾಲೀಮಿನಲ್ಲಿ ತೊಡಗಿಸಿಕೊಂಡಿರುವ ಗಜಪಡೆಗೆ ರಾಜಾತಿಥ್ಯ ಜೋರಾಗಿಯೇ ನಡೆಯುತ್ತಿದೆ. ಇದು ಹೇಗಿದೆ ಎಂಬುದನ್ನು ನೋಡಿದ್ದೇ ಆದರೆ ಅಚ್ಚರಿ ಮೂಡುತ್ತದೆ.

**ಪೌಷ್ಟಿಕ ಆಹಾರದ ಜತೆಗೆ ಹಸಿ ಹುಲ್ಲು**

ದಸರಾ ಗಜಪಡೆಗೆ ಪ್ರತಿನಿತ್ಯ ಎರಡು ಬಾರಿ 6ರಿಂದ 7 ಕೆ.ಜಿ.ಯಷ್ಟು ಪ್ರೋಟಿನ್ ಯುಕ್ತ ಪೌಷ್ಟಿಕ ಆಹಾರ ನೀಡಲಾಗುತ್ತಿದೆ. ಇದರಲ್ಲಿ ಹೆಸರು ಕಾಳು, ಉದ್ದಿನ ಕಾಳು, ಗೋಧಿ, ಕುಸುಲಕ್ಕಿ, ಈರುಳ್ಳಿ ಹಾಗೂ ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ ಬೇಯಿಸಿದ ವಿಶೇಷ ಖಾದ್ಯ ನೀಡಲಾಗುತ್ತಿದೆ. ಜತೆಗೆ ಗೆಡ್ಡೆಕೋಸು, ಬೀಟ್ರೋಟ್, ಕ್ಯಾರೆಟ್, ಮೂಲಂಗಿ ಹಾಗೂ ಸೌತೆಯನ್ನು ನೀಡಲಾಗುತ್ತಿದೆ. ಇಷ್ಟೇ ಅಲ್ಲದೆ, ಪೌಷ್ಟಿಕ ಆಹಾರದ ಜತೆಗೆ ಹಸಿ ಹುಲ್ಲು, ಆಲ ಮತ್ತು ಗೋಣಿ ಸೊಪ್ಪನ್ನು ನೀಡಲಾಗುತ್ತಿದೆ.

ಇಲ್ಲಿ ಅರಣ್ಯಾಧಿಕಾರಿಗಳ ಜವಬ್ದಾರಿ, ಪಶುವೈದ್ಯಾಧಿಕಾರಿಗಳ ಸಲಹೆ ಮತ್ತು ಮಾವುತ, ಕಾವಾಡಿಗಳ ಉಪಚಾರದಿಂದಾಗಿ ಗಜಪಡೆಯಲ್ಲಿರುವ ಎಲ್ಲಾ ಆನೆಗಳು ಆರೋಗ್ಯವಾಗಿ, ಶಕ್ತಿಶಾಲಿಯಾಗಿ ಹೊರಹೊಮ್ಮಲು ಸಾಧ್ಯವಾಗುತ್ತದೆ. ದಸರಾ ದಿನದಂದು ನಮಗೆ ಮೇಲ್ನೋಟಕ್ಕೆ ಬರೀ ಅಂಬಾರಿ ಹೊತ್ತು ಸಾಗುವ ಗಜಪಡೆ ಮಾತ್ರ ಕಾಣಿಸುತ್ತದೆ. ಆದರೆ ಅದರ ಹಿಂದಿನ ಪರಿಶ್ರಮ ಕಾಣಿಸುವುದೇ ಇಲ್ಲ, ಅದನ್ನು ಹತ್ತಿರದಿಂದ ನೋಡಿದರೆ ಅಚ್ಚರಿ ಮೂಡುತ್ತದೆ. ಅಷ್ಟೇ ಅಲ್ಲದೆ, ಅರಣ್ಯ ಅಧಿಕಾರಿಗಳು, ಮಾವುತ, ಕಾವಾಡಿ ಮತ್ತು ಅವರ ಕುಟುಂಬದವರ ಕಾರ್ಯವನ್ನು ಶ್ಲಾಘಿಸಲೇ ಬೇಕಾಗುತ್ತದೆ.

ಗಜಪಡೆ ವಾಸ್ತವ್ಯ ಹೂಡಿರುವ ಅರಮನೆ ಆವರಣಕ್ಕೆ ಹೋಗಿದ್ದೇ ಆದರೆ ದಿನನಿತ್ಯ ಅವುಗಳ ಪಾಲನೆ ಹೇಗಿರುತ್ತದೆ ಎಂಬುದು ಗೊತ್ತಾಗುತ್ತದೆ. ಬೆಳಿಗ್ಗೆ ಮತ್ತು ಸಂಜೆ ಅವುಗಳಿಗೆ ಪೌಷ್ಠಿಕ ಆಹಾರ ತಯಾರಿ ಮಾಡುವ ಮತ್ತು ಅದನ್ನು ತಿನ್ನಿಸುವ ಪರಿ ಎಲ್ಲವೂ ಕಣ್ಮುಂದೆ ಬರುತ್ತದೆ. ನಿಜಹೇಳಬೇಕೆಂದರೆ ಗಜಪಡೆಗೆ ಆಹಾರ ತಯಾರಿ ಮಾಡಿ ಅದನ್ನು ಅವುಗಳಿಗೆ ತಿನ್ನಿಸುವುದು ಸುಲಭದ ಕೆಲಸವೇ ಅಲ್ಲ, ಆದರೆ ಸದಾ ಆನೆಗಳ ಒಡನಾಟದಲ್ಲಿರುವ ಮಾವುತ ಮತ್ತು ಕಾವಾಡಿಗಳು ಅದನ್ನು ತುಂಬಾ ಪ್ರೀತಿಯಿಂದ ಮಾಡುತ್ತಾರೆ.

# ಮಿನಿ ನ್ಯೂಸ್

## ರಾಹುಲ್ ಗಾಂಧಿಯವರಿಗೆ ಒಳ್ಳೆಯ ಕಾಲ ಬರಲಿದೆ : ಜಾರ್ಜ್

• ಉದಯವಾಹಿನಿ, ಕೋಲಾರ

ಈಗಾಗಲೇ ಮೋದಿಯವರ ವರ್ಚಸ್ಸು ಮುಗಿದಿದೆ. ಇನ್ನೂ ನಾಲ್ಕು ತಿಂಗಳಲ್ಲಿ ಅವರು ಅಧಿಕಾರ ಕಳೆದುಕೊಳ್ಳಲಿದ್ದು, ಮುಂದಿನ 15 ವರ್ಷ ರಾಹುಲ್ ಗಾಂಧಿ ಅವರಿಗೆ ಒಳ್ಳಯ ಕಾಲ ಬರಲಿದೆ ಎಂದು ಇಂಧನ ಸಚಿವ ಕೆ.ಜೆ ಜಾರ್ಜ್ ತಿಳಿಸಿದರು. ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಅವರು, ಬಿಜೆಪಿ ಪಕ್ಷವು ನೂರು ಸುಳ್ಳುಗಳನ್ನು ಹೇಳಿ ಒಂದು ಸತ್ಯ ಮಾಡಲು ಹೊರಟಿದ್ದಾರೆ. ಅವರ ಪತನದ ಕಾಲ ಸನಿಹಿತವಾಗಿದೆ ಎಂದರು.

ಜನರು ಕಾಂಗ್ರೆಸ್ ಪಕ್ಷದ ಪರವಾಗಿದ್ದಾರೆ. ಒಳ್ಳೆಯ ಕಾರ್ಯಕ್ರಮಗಳನ್ನು ಕೊಟ್ಟಿದ್ದೇವೆ ಬಿಜೆಪಿಯಂತೆ ಕೋಮುಭಾವನೆ ಹಾಗೂ ಜಾತಿ ಧರ್ಮಗಳ ಗಲಾಟೆಯ ಮೂಲಕ ರಾಜಕಾರಣ ಮಾಡಿಲ್ಲ. ಜನರ ಆಶೀರ್ವಾದವು ಕಾಂಗ್ರೆಸ್ ಪಕ್ಷಕ್ಕೆ ಇದ್ದು ಕಾರ್ಯಕರ್ತರಿಗೂ ಒಳ್ಳೆಯ ಅವಕಾಶ ಸಿಗಲಿದೆ ಎಂದರು. ಮುಂದೆ ಸಹ ಕಾಂಗ್ರೆಸ್ ಪಕ್ಷದೊಂದಿಗೆ ಜನರ ವಿಶ್ವಾಸ ಇದ್ದು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ನೇತೃತ್ವದಲ್ಲಿ ಸರ್ಕಾರ ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ನುಡಿದಂತೆ ನಡೆದಿದೆ ಎಂದು ಹೇಳಿದರು.

## ಪರಿಶಿಷ್ಟರಿಗೆ ಸಿಗದ ಗುತ್ತಿಗೆ: ಆಕ್ರೋಶ

• ಉದಯವಾಹಿನಿ, ತುಮಕೂರು

ಕಳೆದ ಒಂದೂವರೆ ವರ್ಷದಿಂದ ಎಸ್.ಸಿ, ಎಸ್.ಟಿ ಗುತ್ತಿಗೆದಾರರಿಗೆ ಯಾವುದೇ ಕಾಮಗಾರಿ ನೀಡದೆ ಅವರನ್ನು ನಿರುದ್ಯೋಗಿಗಳನ್ನಾಗಿಸಿದೆ ಎಂದು ರಾಜ್ಯ ಎಸ್.ಸಿ, ಎಸ್.ಟಿ ಗುತ್ತಿಗೆದಾರರ ಸಂಘದ ಅಧ್ಯಕ್ಷ ಮಹದೇವಸ್ವಾಮಿ ಆರೋಪಿಸಿದರು. ನಗರದಲ್ಲಿ ನಡೆದ ಸಂಘದ ಸಮಾಲೋಚನಾ ಸಭೆಯಲ್ಲಿ ಮಾತನಾಡಿ, 'ಸರ್ಕಾರ ಈವರೆಗೆ ನೀಡಿರುವ ಎಲ್ಲಾ ಗುತ್ತಿಗೆಗಳು 5 ಕೋಟಿ, 10 ಕೋಟಿಯ ಪ್ಯಾಕೇಜ್ ಆಗಿವೆ.

ಎಸ್.ಸಿ, ಎಸ್.ಟಿ ಗುತ್ತಿಗೆದಾರರಿಗೆ 1 ಕೋಟಿ ವರೆಗೆ ಮೀಸಲಾತಿ ನೀಡಲಾಗಿದೆ. ಇದರಿಂದ ಈ ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಲು ಆಗುತ್ತಿಲ್ಲ' ಎಂದು ಅಸಮಾಧಾನ ತೋಡಿಕೊಂಡರು.

ಮೀಸಲಾತಿ ಮೊತ್ತ 2 ಕೋಟಿಗೆ ಹೆಚ್ಚಿಸಬೇಕು. ಎಸ್.ಸಿ, ಎಸ್.ಟಿ ಗುತ್ತಿಗೆ ಮೀಸಲು ಕಾಯ್ದೆ ಸಮರ್ಪಕವಾಗಿ ಜಾರಿಗೆ ತರಬೇಕು. ರಾಜ್ಯದಲ್ಲಿ 14,500 ಜನ ಎಸ್.ಸಿ, ಎಸ್.ಟಿ ಗುತ್ತಿಗೆದಾರರು ಇದ್ದಾರೆ. ಅವರಿಗೆ ಸರ್ಕಾರದಿಂದ ಇದುವರೆಗೂ ಸುಮಾರು 500 ಕೋಟಿಗೂ ಹೆಚ್ಚು ಹಣ ಬಾಕಿ ಇದೆ. ಸಾಲ ಮಾಡಿ ಕಾಮಗಾರಿ ಮುಗಿಸಿದ್ದಾರೆ. ಕೂಡಲೇ ಬಾಕಿ ಇರುವ ಹಣ ಪಾವತಿಸಬೇಕು ಎಂದು ಆಗ್ರಹಿಸಿದರು.

## ಮಧುಗಿರಿ ಪುರಸಭೆ ಅಧ್ಯಕ್ಷರಾಗಿ ಲಾಲಾಪೇಟೆ ಮಂಜುನಾಥ್ ಆಯ್ಕೆ

• ಉದಯವಾಹಿನಿ, ಮಧುಗಿರಿ

ಇಲ್ಲಿನ ಪುರಸಭೆ ಅಧ್ಯಕ್ಷರಾಗಿ ಕಾಂಗ್ರೆಸ್ ಬೆಂಬಲಿತ ಲಾಲಾಪೇಟೆ ಮಂಜುನಾಥ್ ಹಾಗೂ ಉಪಾಧ್ಯಕ್ಷರಾಗಿ ಕಾಂಗ್ರೆಸ್‌ನ ಸುಜಾತಾ ಎಂ.ಎಸ್.ಶಂಕರ ನಾರಾಯಣ ಅವಿರೋಧವಾಗಿ ಆಯ್ಕೆಯಾದರು.

ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಗೆ ಶನಿವಾರ ಚುನಾವಣೆ ನಡೆಯಿತು. ಅಧ್ಯಕ್ಷ ಸ್ಥಾನಕ್ಕೆ ಮಂಜುನಾಥ್, ಉಪಾಧ್ಯಕ್ಷ ಸ್ಥಾನಕ್ಕೆ ಸುಜಾತಾ ಅವರು ಮಾತ್ರ ನಾಮಪತ್ರ ಸಲ್ಲಿಸಿದ್ದರು. ಇಬ್ಬರು ಅವಿರೋಧವಾಗಿ ಆಯ್ಕೆಯಾದರು. ಚುನಾವಣಾಧಿಕಾರಿಯಾಗಿ ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ ಕಾರ್ಯನಿರ್ವಹಿಸಿದರು.

## ಅರ್ಜಿ ಸ್ವೀಕಾರ ಸ್ಥಗಿತ ಪರಿಹಾರಕ್ಕಾಗಿ ತಪ್ಪದ ಪರದಾಟ

• ಉದಯವಾಹಿನಿ, ಮಂಡ್ಯ

ರಾಜ್ಯದ ಪ್ರತಿಷ್ಠಿತ ಖಾಸಗಿ ಹಣಕಾಸು ಸಂಸ್ಥೆಗಳು ಮತ್ತು ಕಂಪನಿಗಳಿಗೆ ಸಾವಿರಾರು ರೂಪಾಯಿ ಹಣ ಹೂಡಿಕೆ ಮಾಡಿ, ವಂಚನೆಗೊಳಗಾದವರಿಂದ ದೂರು ಅರ್ಜಿ ಸ್ವೀಕರಿಸುವುದನ್ನು ಜಿಲ್ಲಾಧಿಕಾರಿ ಕಚೇರಿಗಳಲ್ಲಿ ಸ್ಥಗಿತಗೊಳಿಸಿದ್ದು, ಇದರಿಂದ ಸಂತ್ರಸ್ತೆಯರು ಕಂಗೆಟ್ಟಿದ್ದಾರೆ.

ಐದಾರು ತಿಂಗಳಿಂದ ರಾಜ್ಯದ ವಿವಿಧ ಜಿಲ್ಲಾಧಿಕಾರಿ ಕಚೇರಿಗಳಲ್ಲಿ ತೆರೆದಿದ್ದ 'ದೂರು ಸ್ವೀಕಾರ ಕೇಂದ್ರ'ಗಳಿಗೆ ಮಹಿಳೆಯರಿಂದ ಅರ್ಜಿಗಳ ಮಹಾಪೂರವೇ ಹರಿದು ಬಂದಿತ್ತು. 'ಸರ್ಕಾರ ಪರಿಹಾರ ಕೊಡಿಸುತ್ತದೆ' ಎಂಬ ಸಂತ್ರಸ್ತೆಯರ ನಿರೀಕ್ಷೆ ಭಗ್ನವಾಗಿದೆ. ಅನಿಯಂತ್ರಿತ ಠೇವಣಿ' (ಅನ್‌ರೆಗ್ಯುಲೇಟೆಡ್ ಡೆಪಾಸಿಟ್) ಯೋಜನೆಗಳ ಅಡಿ, ಅಧಿಕ ಬಡ್ಡಿ ಆಸೆಗಾಗಿ ಹಣ ಹೂಡಿದ್ದ ಮಹಿಳೆಯರು ಪರಿತಪಿಸುತ್ತಿದ್ದಾರೆ.

**ರಚನೆಯಾಗದ ಸಕ್ಷಮ ಪ್ರಾಧಿಕಾರ:** ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣಾ ಕಾಯ್ದೆ 2004 (ಕೆ.ಪಿ.ಐ.ಡಿ ಅಧಿನಿಯಮ), 2019ರ ಅನಿಯಂತ್ರಿತ ಠೇವಣಿ ಯೋ ಜನೆಗಳ ನಿಷೇಧ ಕಾಯ್ದೆ 2019ರ ಅಡಿಯಲ್ಲಿ ಸರ್ಕಾರ ಸಕ್ಷಮ ಪ್ರಾಧಿಕಾರವನ್ನು ರಾಜ್ಯದಲ್ಲಿ ಇದುವರೆಗೆ ರಚಿಸಿಲ್ಲ. ವಿಶೇಷಾಧಿಕಾರಿಯನ್ನೂ ನೇಮಿಸಿಲ್ಲ. ಅಧಿಸೂಚನೆ ಹೊರಡಿಸಿಲ್ಲವಾದ್ದರಿಂದ ಸದ್ಯಕ್ಕೆ ಅರ್ಜಿಗಳನ್ನು ಸ್ವೀಕರಿಸುತ್ತಿಲ್ಲ' ಎಂದು ಮಂಡ್ಯ ಜಿಲ್ಲಾಡಳಿತ ತಿಳಿಸಿದೆ.

## ಹೆಣ್ಣನ್ನು ಕಡೆಗಣಿಸಿದರೆ ಸಮಾಜ ಅಧಃಪತನ: ನ್ಯಾಯಾಧೀಶೆ ಶುಭ

• ಉದಯವಾಹಿನಿ, ಮಡಿಕೇರಿ

ಹೆಣ್ಣನ್ನು ಕಡೆಗಣಿಸಿದಲ್ಲಿ ಸಮಾಜ ಅಧಃಪತನಕ್ಕೆ ಇಳಿಯುತ್ತದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶುಭ ಅವರು ಎಚ್ಚರಿಸಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ವಕೀಲರ ಸಂಘ, ಮಡಿಕೇರಿ ರೋಟರಿ, ಕಡಗದಾಳು ಸರ್ಕಾರಿ ಪ್ರೌಢಶಾಲೆ ವತಿಯಿಂದ ಕಡಗದಾಳು ಗ್ರಾಮದ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ಗಿಡ ನೆಡುವ ಕಾರ್ಯಕ್ರಮಕ್ಕೆ ಅವರು ಶುಕ್ರವಾರ ಚಾಲನೆ ನೀಡಿ ಮಾತನಾಡಿದರು. ಪುರುಷ ಪ್ರಧಾನ ಸಮಾಜದಲ್ಲಿ ಹೆಣ್ಣನ್ನು ಕಡೆಗಣಿಸಿದಲ್ಲಿ ಸಮಾಜ ಅಧಃಪತನಕ್ಕೆ ಹೋಗುತ್ತದೆ. ಆದ್ದರಿಂದ ಪ್ರತಿಯೊಬ್ಬರನ್ನೂ ಗೌರವಿಸಬೇಕು. ಸಮಾನ ಅವಕಾಶಗಳು ಸಿಗಬೇಕು' ಎಂದು ಅವರು ಪ್ರತಿಪಾದಿಸಿದರು. ಬಾಲ್ಯ ವಿವಾಹವು ಸಾಮಾಜಿಕ ಪಿಡುಗಾಗಿದ್ದು, ಹೆಣ್ಣುಮಕ್ಕಳ ಭವಿಷ್ಯವನ್ನು ಕುಗ್ಗಿಸುತ್ತದೆ' ಎಂದರು.

ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಆ ನಿಟ್ಟಿನಲ್ಲಿ ಮರ ಗಿಡಗಳನ್ನು ಬೆಳೆಸಿ ಉತ್ತಮ ಪರಿಸರ ಕಾಣಬೇಕು' ಎಂದರು.

ವೃತ್ತಿ ಕೌಶಲ ಬೆಳೆಸಿಕೊಂಡು ಲಭ್ಯವಿರುವ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರವು ಸಾರ್ವಜನಿಕರಿಗೆ ಕಾನೂನಾತ್ಮಕವಾಗಿ ಒಳಿತು ಮಾಡುವ ನಿಟ್ಟಿನಲ್ಲಿ ಸ್ಪಂದಿಸಲಿದೆ' ಎಂದರು.

ಅಂತರಾಳದಿಂದ.. EDITORIAL

# ರಾಷ್ಟ್ರಪತಿ ಮುರ್ಮು ಘಾಸಿಗೊಳ್ಳಲು ಕೋಲ್ಕತ್ತ ಪ್ರಕರಣದ ತನಕ ಕಾಯಬೇಕಿತ್ತೇ?

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪಶ್ಚಿಮ ಬಂಗಾಳದ ವೈದ್ಯೆಯ ಅತ್ಯಾಚಾರ ಪ್ರಕರಣದ ಬಗ್ಗೆ ಮೊದಲ ಬಾರಿಗೆ ಹೇಳಿಕೆ ನೀಡಿ ಕಳವಳ ವ್ಯಕ್ತಪಡಿಸಿದ್ದಾರೆ. ಬುಧವಾರ ಪಿಟಿಐಗೆ ಎಂಬ ಶೀರ್ಷಿಕೆಯ ಲೇಖನ ಬರೆದಿರುವ ಅವರು, ''ಮಹಿಳೆಯರ ವಿರುದ್ಧದ ಕೃತ್ಯಗಳನ್ನು ಬುಡ ಸಮೇತ ಕಿತ್ತು ಹಾಕಲು ಆತ್ಮಾವಲೋಕನ ಅಗತ್ಯ'' ಎಂದಿದ್ದಾರೆ. ದೆಹಲಿಯಲ್ಲಿ ಹನ್ನೆರಡು ವರ್ಷಗಳ ಹಿಂದೆ ನಡೆದ ನಿರ್ಭಯ ಪ್ರಕರಣವನ್ನು ಅವರು ನೆನಪಿಸಿಕೊಂಡಿದ್ದಾರೆ. ಕೋಲ್ಕತ್ತದ ವೈದ್ಯೆ ಮೇಲಿನ ಭೀಕರ ಅತ್ಯಾಚಾರ ಪ್ರಕರಣದ ಬಗ್ಗೆ ಅವರು ಲೇಖನ ಬರೆದು ಖಂಡಿಸಿರುವುದು ಸಕಾಲಿಕ. ಆದರೆ, ಅವರು ಈ ದೇಶದ ಮೊದಲ ಪ್ರಜೆಯಾಗಿ ಸರ್ಕಾರಕ್ಕೆ ನಿರ್ದೇಶನ ನೀಡುವ ಸ್ಥಾನದಲ್ಲಿ ಎರಡು ವರ್ಷಗಳಿಂದ ಇದ್ದಾರೆ. ಇದೇ ರೀತಿಯ ಕಾಳಜಿಯನ್ನು ಮಣಿಪುರ, ಮಹಾರಾಷ್ಟ್ರ, ಬದ್ಲಾಪುರ್, ಉತ್ತರಾಖಂಡ, ಉತ್ತರಪ್ರದೇಶದ ಉನ್ನಾವ್, ಹಾಥರಸ್ ಪ್ರಕರಣಗಳಲ್ಲಿ ತೋರಿಲ್ಲ ಯಾಕೆ ಎಂಬ ಪ್ರಶ್ನೆ ಏಳುತ್ತದೆ. ಈ ಪ್ರಶ್ನೆಯೂ ಸಕಾಲಿಕವೇ ಆಗಿದೆ. ಮುರ್ಮು ಅವರು ರಾಷ್ಟ್ರಪತಿಯಂತಹ ಈ ದೇಶದ ಅತ್ಯುನ್ನತ ಸ್ಥಾನಕ್ಕೆ ಏರಿದ ಬುಡಕಟ್ಟು ಸಮುದಾಯದ ಮೊದಲ ಮತ್ತು ದೇಶದ ಎರಡನೇ ಮಹಿಳೆ. ಮೋದಿ ಸರ್ಕಾರ ಬರಲಿರುವ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಬುಡಕಟ್ಟು ಸಮುದಾಯದ ನಾಯಕಿಯನ್ನು ಅತ್ಯುನ್ನತ ಹುದ್ದೆಗೆ ಆಯ್ಕೆ ಮಾಡಿದರೂ ಈ ದೇಶದ ಜನ ಪಕ್ಷಾತೀತವಾಗಿ ಬೆಂಬಲಿಸಿದ್ದರು. ಮುರ್ಮು ರಾಷ್ಟ್ರಪತಿಯಾಗಿ ಎರಡು ವರ್ಷಗಳಾಗಿವೆ. ಈ ಮಧ್ಯೆ ಹಲವು ರಾಜ್ಯಗಳಲ್ಲಿ ಮಹಿಳೆಯರ ಮೇಲೆ ಭೀಕರ ಸಾಮೂಹಿಕ ಅತ್ಯಾಚಾರಗಳು ನಡೆದಿವೆ. ದಲಿತರ ಮೇಲೆ ಅಮಾನವೀಯ ಹಲ್ಲೆಗಳು, ಮೂತ್ರ ಕುಡಿಸುವುದು, ಎಂಜಲು ನೆಕ್ಕಿಸುವುದು, ನಾಲಿಗೆಯಿಂದ ಬೂಟು ನೆಕ್ಕುವಂತೆ ಹಿಂಸಿಸುವ ಲೆಕ್ಕವಿಲ್ಲದಷ್ಟು ಪ್ರಕರಣಗಳು ನಡೆದಿವೆ. ಮಹಿಳೆಯರನ್ನು ಬೆತ್ತಲೆಗೊಳಿಸುವ ಪ್ರಕರಣಗಳು ಪದೇ ಪದೇ ವರದಿಯಾಗುತ್ತಿವೆ. ಉತ್ತರ ಪ್ರದೇಶದಲ್ಲಿ ಎರಡು ವರ್ಷಗಳ ಹಿಂದೆ ಇಬ್ಬರು ದಲಿತ ಸೋದರಿಯರನ್ನು ಅತ್ಯಾಚಾರಗೈದು ಮರಕ್ಕೆ ನೇಣು ಹಾಕಲಾಗಿತ್ತು. ಅದೇ ತರಹದ ಇನ್ನೊಂದು ಪ್ರಕರಣ ಸೋಮವಾರ (ಆ. 26) ವರದಿಯಾಗಿದೆ. 15–17 ವಯಸ್ಸಿನ ಇಬ್ಬರು ದಲಿತ ಬಾಲಕಿಯರು ರಾತ್ರಿ ಭಗವತೀಪುರ ಗ್ರಾಮದ ದೇವಸ್ಥಾನದಲ್ಲಿ ನಡೆಯುತ್ತಿದ್ದ ಕೃಷ್ಣಜನ್ಮಾಷ್ಟಮಿ ಕಾರ್ಯಕ್ರಮಕ್ಕೆ ಹೋದವರು ಮನೆಗೆ ವಾಪಸ್ಸಾಗಿರಲಿಲ್ಲ. ಮರುದಿನ ಬೆಳಿಗ್ಗೆ ಮಾವಿನ ಮರದಲ್ಲಿ ಇಬ್ಬರ ಶವಗಳು ನೇತಾಡುತ್ತಿದ್ದವು. ಬಾಲಕಿಯರನ್ನು ಅತ್ಯಾಚಾರ ಮಾಡಿ, ಕೊಂದು ಮರಕ್ಕೆ ನೇಣು ಹಾಕುವುದು ಉತ್ತರ ಪ್ರದೇಶದಲ್ಲಿ ಮಾಮೂಲಿಯಾಗಿದೆ. ಆಗ್ರಾದಲ್ಲಿ ಹಿರಿಯ ಸಹಪಾಠಿಯಿಂದ ಅತ್ಯಾಚಾರ ಯುವತಿ ಪೊಲೀಸ್ ಠಾಣೆಗೆ ದೂರು ನೀಡಲು ಹದಿನಾರು ದಿನ ಅಲೆದರೂ ಪೊಲೀಸರು ದೂರು ದಾಖಲಿಸಿಲ್ಲ ಎಂದು ಅರೆಬೆತ್ತಲಾಗಿ ಪ್ರತಿಭಟಿಸಿದ್ದು ದೇಶಕ್ಕೆ ಘಾಸಿಯಾಗುವ ಸಂಗತಿ ಅಲ್ಲವೇ ಇವೆಲ್ಲವೂ ದೇಶದ ಆತ್ಮಸಾಕ್ಷಿಯನ್ನು ಕಲಕುವ ಘಟನೆಗಳೇ ಆಗಿವೆ. ವೈದ್ಯೆಯ ಮೇಲಾದರೂ ಅಷ್ಟೇ, ಕಾರ್ಮಿಕಳ ಮೇಲಾದರೂ ಅಷ್ಟೇ?, ಎರಡೂ ಜೀವಕ್ಕೂ ಘನತೆಯಿದೆ. ನೋವು ಸಂಕಟ ಎರಡೂ ಕುಟುಂಬಗಳದ್ದು ಒಂದೇ ತೂಕದ್ದು. ಉತ್ತರಪ್ರದೇಶದ ಸಂಸದ ಕುಸ್ತಿ ಫೆಡರೇಷನ್ ಅಧ್ಯಕ್ಷ ಬ್ರಿಜ್‌ಭೂಷಣ್ ಶರಣ್ ಸಿಂಗ್ ಕುಸ್ತಿಪಟುಗಳಿಗೆ ಲೈಂಗಿಕ ಕಿರುಕುಳ ನೀಡಿದ್ದ ಎಂದು ಆರೋಪಿಸಿ ಒಂದು ತಿಂಗಳ ಕಾಲ ದೇಶಕ್ಕೆ ಪದಕ ತಂದ ಮಹಿಳಾ ಕುಸ್ತಿಪಟುಗಳು ಬೀದಿಯಲ್ಲಿ ಪ್ರತಿಭಟನೆ ಮಾಡಿದ್ದರು. ಉನ್ನಾವೋ, ಹಾಥರಸ್‌ನಲ್ಲಿ ಚಿಕ್ಕ ವಯಸ್ಸಿನ ಯುವತಿಯರ ಮೇಲೆ ನಡೆದ ಸಾಮೂಹಿಕ ಅತ್ಯಾಚಾರ ಕೊಲೆಗೆ ವ್ಯಾಪಕ ಖಂಡನೆ ವ್ಯಕ್ತವಾಗಿದೆ. ಈಗಲೂ ಬಿಜೆಪಿ ಆಡಳಿತವಿರುವ ಉತ್ತರ ಪ್ರದೇಶದಲ್ಲಿ ಅತಿಹೆಚ್ಚು ಸಾಮೂಹಿಕ ಅತ್ಯಾಚಾರಗಳಾಗುತ್ತಿವೆ. ಆದರೆ ದೇಶದ ಪ್ರಥಮ ಪ್ರಜೆ ಅದರಲ್ಲೂ ತಾಯಿ ಸ್ಥಾನದಲ್ಲಿರುವ ಮುರ್ಮು ಅವರು ಯಾವ ಪ್ರಕರಣದಲ್ಲೂ ಕಳವಳಗೊಂಡಿಲ್ಲ. ಒಂದೇ ಒಂದು ಖಂಡನೆಯ ಸಂದೇಶ ನೀಡಿಲ್ಲ. ಇತ್ತೀಚೆಗಷ್ಟೇ ಸಂಸತ್ತಿನ ಉಭಯ ಸದನ ಉದ್ದೇಶಿಸಿ ಭಾಷಣ ಮಾಡಿದ ಅವರು ಮೋದಿ ಸರ್ಕಾರ ನಾರೀಶಕ್ತಿಗೆ ಬಲ ತುಂಬಿದೆ ಎಂದಿದ್ದರು. ಆದರೆ, ಮೋದಿ ಸರ್ಕಾರ ಅತ್ಯಾಚಾರ ಸಂತ್ರಸ್ತರ ಪುನರ್ವಸತಿಗಾಗಿ ಇರುವ ನಿರ್ಭಯ ನಿಧಿಯ ಹಣವನ್ನೇ ಸರಿಯಾಗಿ ಬಳಸುತ್ತಿಲ್ಲ. ಈ ಅರಿವು ರಾಷ್ಟ್ರಪತಿ ಮುರ್ಮು ಅವರಿಗೆ ಇದೆಯೋ, ಇಲ್ಲವೋ ಗೊತ್ತಿಲ್ಲ. ಆದರೆ ಮೋದಿ ಸರ್ಕಾರ ದೇಶದ ಮಹಿಳೆಯರ ಸುರಕ್ಷತೆಗೆ ಯಾವ ಕಾನೂನು ಮಾಡಿದೆ, ಯಾವ ಕಠಿಣ ಕ್ರಮ ಜರುಗಿಸಿದೆ ಎಂದು ಈಗಲಾದರೂ ಆತ್ಮಾವಲೋಕನ ಮಾಡಿಕೊಳ್ಳುವ ಅಗತ್ಯವಿದೆ. ಮಣಿಪುರದಲ್ಲಿ ಒಂದೂವರೆ ವರ್ಷಗಳಿಂದ ನಡೆಯುತ್ತಿರುವ ಜನಾಂಗೀಯ ಹಿಂಸಾಚಾರ ಶುರುವಾಗಿದ್ದ 2023ರ ಮೇನಲ್ಲಿ, ಆ ಹಿಂಸಾಚಾರದಲ್ಲಿ ಪ್ರಬಲ ಮೈತೇಯಿ ಸಮುದಾಯದವರು ಕುಕಿ ಸಮುದಾಯದ ಇಬ್ಬರು ಮಹಿಳೆಯರನ್ನು ಸಾರ್ವಜನಿಕವಾಗಿ ಬೆತ್ತಲುಗೊಳಿಸಿ ರಸ್ತೆಯುದ್ದಕ್ಕೂ ಮೆರವಣಿಗೆ ಮಾಡಿ ಬಯಲಿನಲ್ಲಿ ಸಾಮೂಹಿಕ ಅತ್ಯಾಚಾರ ಎಸಗಿ ಕೊಂದು ಹಾಕಿದ್ದರು. ಯುವಕರು ಇಬ್ಬರು ಯುವತಿಯರ ಅಂಗಾಂಗಗಳನ್ನು ಮುಟ್ಟಿ ವಿಕೃತವಾಗಿ ಹಿಂಸಿಸುವ ದೃಶ್ಯ ಸಾರ್ವಜನಿಕಗೊಂಡು ಡಬಲ್ ಎಂಜಿನ್ ಸರ್ಕಾರದ ವೈಫಲ್ಯವನ್ನು, ಮೋದಿಯವರ ಮಹಾ ಮೌನವನ್ನು ಜಗತ್ತಿಗೆ ತೋರಿಸಿತ್ತು. ರಾಷ್ಟ್ರಪತಿ ಮುರ್ಮು ಅವರು ಈ ಪ್ರಕರಣದ ಬಗ್ಗೆ ಮೋದಿ ಸರ್ಕಾರವನ್ನು ಎಚ್ಚರಿಸಲಿಲ್ಲ, ಅಸಮಾಧಾನ ಹೊರಹಾಕಿಲ್ಲ. ಪಿಟಿಐಗೆ ಲೇಖನ ಬರೆದು ಖಂಡಿಸುವ ಅವಕಾಶ ಆಗಲೂ ಇತ್ತು. ಅಷ್ಟೇ ಏಕೆ ಗುಜರಾತಿನ ಬಿಲ್ಕಿಸ್ ಬಾನೊ ಅತ್ಯಾಚಾರಿಗಳನ್ನು ಸನ್ನಡತೆಯ ಹೆಸರಿನಲ್ಲಿ ಗುಜರಾತ್ ಸರ್ಕಾರ ಬಿಡುಗಡೆ ಮಾಡಿದಾಗ ದ್ರೌಪದಿ ಮುರ್ಮು ಈ ದೇಶದ ರಾಷ್ಟ್ರಪತಿಯಾಗಿದ್ದರು ಈ ಎಲ್ಲಾ ಸಂದರ್ಭಗಳಲ್ಲಿ ಸರ್ಕಾರಕ್ಕೆ ಮಾರ್ಗದರ್ಶನ ನೀಡುವ ಸ್ಥಾನದಲ್ಲಿರುವ ಮುರ್ಮು ಅವರು ಮೌನವಹಿಸಿದ್ದು ಅಕ್ಷಮ್ಯ. ಬಿಜೆಪಿ ಆಡಳಿತವಿರುವ ರಾಜ್ಯಗಳಲ್ಲಿ ನಡೆಯುತ್ತಿರುವ ಅನ್ಯಾಯವನ್ನು ಖಂಡಿಸದ ಮುರ್ಮು ಅವರ ನಡವಳಿಕೆ ನಿಜಕ್ಕೂ ಮಹಿಳೆಯರ ಘನತೆಗೆ ಮಾಡಿದ ಅಪಚಾರ. ಅವರನ್ನು ಒಕ್ಕಲೆಬ್ಬಿಸಲಾಗುತ್ತಿದೆ. ಯೋಗಿ ಸರ್ಕಾರ ಅಪರಾಧ ಪ್ರಕರಣಗಳಲ್ಲಿ ಭಾಗಿಯಾದವರ ಮನೆಗಳನ್ನು ಬುಲ್ಡೋಜರ್ ಹರಿಸಿ ಧ್ವಂಸ ಮಾಡುತ್ತಿದೆ. ಅಲ್ಲೊಬ್ಬಳು ತಾಯಿ, ಸೋದರಿ, ಪತ್ನಿ, ಮಗಳ ಬದುಕು ಬೀದಿಪಾಲಾಗುತ್ತಿದೆ. ಇಂತಹ ಸರ್ಕಾರಿ ಪ್ರೇರಿತ ಕ್ರೌರ್ಯವನ್ನು ಖಂಡಿಸಲಾರದಷ್ಟು, ಬಲಹೀನ ಮಹಿಳೆಯೊಬ್ಬರು ಇಷ್ಟು ದೊಡ್ಡ ದೇಶದ ರಾಷ್ಟ್ರಪತಿಯಾಗಿರುವುದು ವಿಷಾದಪಡಬೇಕಾದ ಸಂಗತಿ. ರಾಷ್ಟ್ರಪತಿ ಮುರ್ಮು 'ಘಾಸಿಗೊಳ್ಳಲು ಕೋಲ್ಕತ್ತ ಪ್ರಕರಣದ ತನಕ ಕಾದಿದ್ದು ದುರಂತವೇ ಸರಿ.

> **ಕೋಲ್ಕತ್ತದ ತರಬೇತಿ ನಿರತ ವೈದ್ಯೆ ಮೇಲಿನ ಅತ್ಯಾಚಾರದಿಂದ ದೇಶವೇ ಆಘಾತಗೊಂಡಿದೆ ಎಂದು ಹೇಳುವಾಗ ಮುರ್ಮು ಅವರಿಗೆ ಈ ಹಿಂದೆ ಮಹಿಳೆಯರ ಮೇಲಾದ ಭೀಕರ ಅತ್ಯಾಚಾರ ಪ್ರಕರಣಗಳು ಆಘಾತ ತಂದಿಲ್ಲ ಎಂದು ದೇಶದ ಜನತೆ ಅರ್ಥ ಮಾಡಿಕೊಳ್ಳಬೇಕೇ?**


**ಜೇಡಿಮಣ್ಣು, ಆವೆಮಣ್ಣಿನಿಂದ ಮೂರ್ತಿಯನ್ನು ತಯಾರಿಸಬೇಕು ಎಂಬ ಶಾಸ್ತ್ರವಿಧಿಯಿದೆ, ಅವಳು ಮೃತ್ತಿಕೆಯ ಆಕಾರ ಮಾಡಿ ಅದರಲ್ಲಿ ಶ್ರೀ ಗಣೇಶನ ಆವಾಹನೆಯನ್ನು ಮಾಡಿದಳು. ಪುರಾಣದಲ್ಲಿ ಶ್ರೀ ಗಣೇಶನು ಮಣ್ಣಿನಿಂದ ನಿರ್ಮಾಣವಾಗಿದ್ದಾನೆ ಎಂದು ಹೇಳಲಾಗಿದೆ.**

# ಮಣ್ಣಿನ ಗಣೇಶ ಮೂರ್ತಿಯನ್ನೇ ಪೂಜಿಸಿ

• ಶ್ರೀ. ವಿನೋದ ಕಾಮತ್

ಶ್ರೀ ಗಣೇಶನ ಮೂರ್ತಿಯನ್ನು ಜೇಡಿಮಣ್ಣಿನಿಂದ ಅಥವಾ ಆವೆಮಣ್ಣಿನಿಂದ ತಯಾರಿಸಬೇಕು. ಇತ್ತೀಚೆಗೆ ಭಾರ ಕಡಿಮೆಯಾಗಬೇಕು ಮತ್ತು ಅದು ಹೆಚ್ಚು ಆಕರ್ಷಕವಾಗಿ ಕಾಣಿಸಬೇಕೆಂದು 'ಪ್ಲಾಸ್ಟರ್ ಆಫ್ ಪ್ಯಾರಿಸ್'ನಿಂದ ಮೂರ್ತಿಗಳನ್ನು ತಯಾರಿಸಲಾಗುತ್ತ ದೆ. ಮಣ್ಣಿನ ಮತ್ತು 'ಪ್ಲಾಸ್ಟರ್ ಆಫ್ ಪ್ಯಾರಿಸ್'ನ ಗಣೇಶ ಮೂರ್ತಿಯಲ್ಲಿ ವ್ಯತ್ಯಾಸವಿದೆ. ಪಾರ್ವತಿಯು ತಯಾರಿಸಿದ ಶ್ರೀ ಗಣೇಶನು ಮಹಾಗಣಪತಿಯ ಅವತಾರವಾಗಿದ್ದಾನೆ. 'ಭಾದ್ರಪದ ಶುಕ್ಲ ಚತುರ್ಥಿಯಂದು ಮಣ್ಣಿನ ಗಣೇಶಮೂರ್ತಿಯನ್ನು ತಯಾರಿಸಬೇಕು ಎಂದು ಶಾಸ್ತ್ರವಿಧಿಯಿದೆ.

**1. ಮಣ್ಣಿನ ಮೂರ್ತಿಯಿಂದಾಗುವ ಲಾಭಗಳು :** ಮಣ್ಣಿನ ಮೂರ್ತಿಯಲ್ಲಿ ಶ್ರೀ ಗಣೇಶನ ಪವಿತ್ರಕಗಳು ಹೆಚ್ಚಿನ ಪ್ರಮಾಣದಲ್ಲಿ ಆಕರ್ಷಿಸಿ ಕಾರ್ಯನಿರತವಾಗಿರುತ್ತವೆ: 'ಮಣ್ಣಿನಲ್ಲಿರುವ ಪೃಥ್ವಿತತ್ತ್ವದಿಂದಾಗಿ ಮೂರ್ತಿಯು ಬ್ರಹ್ಮಾಂಡ ಮಂಡಲದಿಂದ ಆಕರ್ಷಿಸಿದ ದೇವತೆಯ ತತ್ತ್ವವು ಮೂರ್ತಿಯಲ್ಲಿ ದೀರ್ಘಕಾಲ ಕಾರ್ಯನಿರತವಾಗಿರುತ್ತದೆ. ತದ್ವಿರುದ್ಧವಾಗಿ 'ಪ್ಲಾಸ್ಟರ್ ಆಫ್ ಪ್ಯಾರಿಸ್'ನ ಮೂರ್ತಿಯಲ್ಲಿ ದೇವತೆಯ ತತ್ತ್ವವನ್ನು ಆಕರ್ಷಿಸುವ ಮತ್ತು ಕಾರ್ಯನಿರತವಾಗಿಡುವ ಕ್ಷಮತೆಯು ಕಡಿಮೆ ಯಿರುತ್ತದೆ. ಆದ್ದರಿಂದ 'ಪ್ಲಾಸ್ಟರ್ ಆಫ್ ಪ್ಯಾರಿಸ್'ನ ಮೂರ್ತಿಯಿಂದ ಆಧ್ಯಾತ್ಮಿಕ ಸ್ತರದಲ್ಲಿ ಹೆಚ್ಚೇನೂ ಲಾಭವಾಗುವುದಿಲ್ಲ. ಮಣ್ಣಿನ ಮೂರ್ತಿಯನ್ನು ನೀರಿನಲ್ಲಿ ವಿಸರ್ಜನೆ ಮಾಡುವುದರಿಂದ ವಾಯುಮಂಡಲವು ಶುದ್ಧವಾಗುತ್ತದೆ . ಮಣ್ಣಿನ ಮೂರ್ತಿಯನ್ನು ನೀರಿನಲ್ಲಿ


ಉದಯವಾಹಿನಿ ಚಿತ್ರ

ವಿಸರ್ಜನೆ ಮಾಡುವುದರಿಂದ ಅದು ಕೂಡಲೇ ನೀರಿನಲ್ಲಿ ಕರಗಿ, ಹರಿಯುವ ನೀರಿನಿಂದ ಸುತ್ತ ಮುತ್ತಲಿನ ಪರಿಸರದಲ್ಲಿ ದೂರದವರೆಗೆ ದೇವತೆಗಳ ಸಾತ್ತ್ವಿಕ ಲಹರಿಗಳನ್ನು ಕಡಿಮೆ ಕಾಲಾವಧಿಯಲ್ಲಿ ಪ್ರಕ್ಷೇಪಿಸುತ್ತದೆ. ಇದರಿಂದ ಸಂಪೂರ್ಣ ಪರಿಸರದ ವಾಯುಮಂಡಲ ಶುದ್ಧವಾಗುತ್ತದೆ. ಈ ಪ್ರಕ್ರಿಯೆಯಿಂದ ಸಮಷ್ಟಿ ಸ್ತರದಲ್ಲಿ ಲಾಭವಾಗಲು ಸಹಾಯವಾಗುತ್ತದೆ.

## ಪ್ಲಾಸ್ಟರ್ ಆಫ್ ಪ್ಯಾರಿಸ್'ನ ಮೂರ್ತಿಯಿಂದಾಗುವ ಹಾನಿ

**ಮೂರ್ತಿಯ ವಿಸರ್ಜನೆಯು ಸರಿಯಾಗಿ ಆಗುವುದಿಲ್ಲ:** ಪ್ಲಾಸ್ಟರ್ ಆಫ್ ಪ್ಯಾರಿಸ್ ನೀರಿನಲ್ಲಿ ಸಹಜವಾಗಿ ಕರಗದಿರುವುದರಿಂದ ವಿಸರ್ಜನೆಯ ನಂತರ ಮೂರ್ತಿಯು ನೀರಿನ ಮೇಲೆ ತೇಲುತ್ತದೆ. ಅನೇಕ ಕಡೆಗಳಲ್ಲಿ ವಿಸರ್ಜಿತವಾಗದ ಮೂರ್ತಿಗಳ ಅವಶೇಷಗಳನ್ನು ಕೆಲವೊಮ್ಮೆ ಒಟ್ಟು ಮಾಡಿ ಅವುಗಳ ಮೇಲೆ 'ಬುಲ್ಡೋಝರ್'ನ್ನು ಚಲಾಯಿಸಲಾಗುತ್ತದೆ. ಹೀಗೆ ಮಾಡುವುದು ಶ್ರೀ ಗಣಪತಿಯ ಘೋರ ವಿಡಂಬನೆಯೇ ಆಗಿದೆ.

ಯಾವ ಸನ್ಮಾನದಿಂದ ನಾವು ಶ್ರೀ ಗಣಪತಿಯನ್ನು ಆವಾಹನೆ ಮಾಡುತ್ತೇವೆಯೋ, ಅದೇ ಸನ್ಮಾನದಿಂದ ಅವನನ್ನು ಬೀಳ್ಕೊಡುವುದೂ ಆವಶ್ಯಕವಾಗಿದೆ. ಶ್ರೀ ಗಣಪತಿಯ ಘೋರ ವಿಡಂಬನೆಯಾಗುವುದರಿಂದ ಘೋರ ಪಾಪ ತಗಲುತ್ತದೆ. ಜೇಡಿಮಣ್ಣು ಅಥವಾ ಆವೆಮಣ್ಣನ್ನು ಬಿಟ್ಟು ಬೇರೆ ವಸ್ತುಗಳಿಂದ ಮೂರ್ತಿಯನ್ನು ತಯಾರಿಸುವುದು ಧರ್ಮಶಾಸ್ತ್ರದ ವಿರುದ್ಧವಾಗಿದೆ.

ಇತ್ತೀಚೆಗೆ ತೆಂಗಿನಕಾಯಿ, ಬಾಳೆಹಣ್ಣು, ಅಡಿಕೆ, ನಾಣ್ಯ, 'ಸಿರಿಂಜ್' ಮುಂತಾದ ವಸ್ತುಗಳಿಂದಲೂ ಶ್ರೀಗಣೇಶಮೂರ್ತಿಯನ್ನು ತಯಾರಿಸುತ್ತಾರೆ. ಇಂತಹ ವಸ್ತುಗಳಿಂದ ಮೂರ್ತಿಯನ್ನು ತಯಾರಿಸುವುದು ಧರ್ಮಶಾಸ್ತ್ರಕ್ಕೆ ವಿರುದ್ಧವಾಗಿದೆ. ಇಂತಹ ಮೂರ್ತಿಯ ಕಡೆಗೆ ಶ್ರೀ ಗಣೇಶನ ಪವಿತ್ರಕಗಳು ಆಕರ್ಷಿಸುವುದಿಲ್ಲ.

**ಇಕೋ ಫ್ರೆಂಡ್ಲಿ ಗಣೇಶಮೂರ್ತಿಗಳ ಬಗೆಗಿನ ವಂಚನೆಯಿಂದ ಎಚ್ಚರ:** ಇತ್ತೀಚೆಗೆ ಕೆಲವು ಸಂಸ್ಥೆಗಳು 'ಇಕೋ-ಫ್ರೆಂಡ್ಲಿ ('ಇಕಾಲಾಜಿಕಲ್ ಫ್ರೆಂಡ್ಲಿ', ಅಂದರೆ ಪರಿಸರ ಸ್ನೇಹಿ) ಶ್ರೀ ಗಣೇಶಮೂರ್ತಿ'ಗಳನ್ನು ತಯಾರಿಸಲು ಆಹ್ವಾನಿಸುತ್ತಾರೆ. ಅವುಗಳಲ್ಲಿ ಕೆಲವು ಮೂರ್ತಿಗಳನ್ನು ಕಾಗದದ ಮುದ್ದೆಗಳಿಂದ ತಯಾರಿಸಲಾಗುತ್ತದೆ. ಇದು ಅಶಾಸ್ತ್ರೀಯವಂತೂ ಆಗಿದೆ, ಹಾಗೆಯೇ ಪರಿಸರಕ್ಕೆ ಹಾನಿಕರಕವೂ ಆಗಿದೆ; ಏಕೆಂದರೆ ಕಾಗದದ ಮುದ್ದೆಗಳು ನೀರಿನಲ್ಲಿರುವ ಪ್ರಾಣವಾಯುವನ್ನು ಹೀರುತ್ತವೆ ಮತ್ತು ಜೀವಗಳಿಗೆ ಹಾನಿಕರವಾದ 'ಮಿಥೇನ್' ವಾಯುವನ್ನು ನಿರ್ಮಿಸುತ್ತವೆ. ಇಂತಹ ಸಂಸ್ಥೆಗಳಿಂದ ಮಾಡಲಾಗಿರುವ ನಿಸರ್ಗದ ವಿಚಾರವು ಕೇವಲ ಮೇಲುಮೇಲಿನದ್ದಾಗಿರುತ್ತದೆ. ಹಿಂದೂ ಧರ್ಮಶಾಸ್ತ್ರವು ನಿಸರ್ಗದ ರಕ್ಷಣೆಯೊಂದಿಗೆ ಮಾನವನ ಸರ್ವಾಂಗೀಣ ಉನ್ನತಿಯ ವಿಚಾರವನ್ನೂ ಮಾಡಿರುತ್ತದೆ ಎಂಬುದನ್ನು ಗಮನದಲ್ಲಿಡಿ.

ಧರ್ಮಶಾಸ್ತ್ರಕ್ಕನುಸಾರ ತರಬೇಕಾದ ಜೇಡಿಮಣ್ಣಿನ ಮೂರ್ತಿಯು ದುಬಾರಿಯಾಗಿರುತ್ತದೆ, ಈ ರೀತಿ ಹೇಳುವುದು ಕುಂಟುನೆಪವಾಗಿದೆ. ಪ್ರತಿಯೊಂದು ಕುಟುಂಬದಲ್ಲಿ ಗಣೇಶೋತ್ಸವಕ್ಕಾಗಿ ಆಗುವ ಒಟ್ಟು ಖರ್ಚಿನಲ್ಲಿ (ಉದಾ. ಆಧುನಿಕ ಅಲಂಕಾರ, ಕುಟುಂಬದವರಿಗೆ ಬಟ್ಟೆಗಳ ಖರೀದಿ ಇತ್ಯಾದಿ) ಮೂರ್ತಿಯ ಖರೀದಿಗಾಗಿ ಆಗುವ ಖರ್ಚು ಅತ್ಯಲ್ಪವಾಗಿರುತ್ತದೆ. ಶ್ರೀ ಗಣೇಶನನ್ನು ಪೂಜಿಸುವುದರ ಉದ್ದೇಶವು ಕುಟುಂಬದಲ್ಲಿನ ಸದಸ್ಯರಿಗೆ ಮೂರ್ತಿಯಿಂದ ಗಣೇಶತತ್ತ್ವ ಸಿಗುವುದಾಗಿದೆ. 'ಪ್ಲಾಸ್ಟರ್ ಆಫ್ ಪ್ಯಾರಿಸ್'ನ ಮೂರ್ತಿ ಯಿಂದ ಈ ಲಾಭ ಸಿಗುವುದು ಸಾಧ್ಯವಿಲ್ಲ.

# ನಿರೂಪಣೆ ಹಿಂದಿನ ಕಷ್ಟ ನನಗೆ ಮಾತ್ರ ಗೊತ್ತು: ಕಿಚ್ಚ

• ಉದಯವಾಹಿನಿ, ಬೆಂಗಳೂರು

ಕಿಚ್ಚ ಸುದೀಪ್ ಅವರ 'ಮ್ಯಾಕ್ಸ್' ಸಿನಿಮಾದ ರಿಲೀಸ್ ಬಗ್ಗೆ ಮಾತು ಜೋರಾಗಿ ನಡೆಯುತ್ತಿರುವ ಬೆನ್ನಲ್ಲೇ ಅವರ ಬಿಗ್ ಬಾಸ್ ನಿರೂಪಣೆ ವಿಚಾರವೂ ಸುದ್ದಿಯಲ್ಲಿದೆ. ಬಿಗ್ ಬಾಸ್ ಕನ್ನಡ -11 ಶೀಘ್ರದಲ್ಲಿ ಆರಂಭಗೊಳ್ಳಲಿದೆ ಎನ್ನಲಾಗುತ್ತಿದೆ. ಆದರೆ ಈ ಬಾರಿ ಶೋ ಶುರುವಿಗೂ ಮುನ್ನ ನಿರೂಪಕ ಯಾರು ಎನ್ನುವುದೇ ಕುತೂಹಲಕಾರಿ ಪ್ರಶ್ನೆಯಾಗಿ ಉಳಿದಿದೆ.

ಕಿಚ್ಚ ಸುದೀಪ್ ಅವರು ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಕರೆದ ಸುದ್ದಿಗೋಷ್ಠಿಯಲ್ಲಿ ಬಿಗ್ ಬಾಸ್ ನಡೆಸಿಕೊಡುವ ಬಗ್ಗೆ ಪ್ರಶ್ನೆ ಕೇಳಲಾಗಿದೆ. ಇದಕ್ಕೆ ಕಿಚ್ಚ ಅವರು ಅಡ್ಡಗೋಡೆ ಮೇಲೆ ದೀಪವಿಟ್ಟಂತೆ ಉತ್ತರಿಸಿರುವುದು ಅವರು ಬಿಗ್ ಬಾಸ್ ನಡೆಸಿಕೊಡುವ ಬಗ್ಗೆ ಅನುಮಾನ ಬರುವಂತೆ ಮಾಡದೆ. ಕಳೆದ 10 ಸೀಸನ್ ನಾನು ಬಿಗ್ ಬಾಸ್ ನಡೆಸಿ ಕೊಟ್ಟಿದ್ದೇನೆ ಅನ್ನೋದು ಮಾತ್ರ ಎಲ್ಲರಿಗೂ ಗೊತ್ತು. ಆದರೆ ಅದರ ಹಿಂದಿನ ಕಷ್ಟ ಎಲ್ಲರಿಗೂ ಗೊತ್ತಿಲ್ಲ ಎಂದಿದ್ದಾರೆ. ಬಿಗ್ ಬಾಸ್ ಸೀಸನ್ -11 ಕ್ಕೆ ಬೇರೆಯವರೂ ಬರಲಿ ಅಂತಾ ಕಾಯ್ತಾ ಇದೀನಿ. ಬಿಗ್ ಬಾಸ್‌ನ 10 ಸೀಸನ್‌ಗಳನ್ನು ನಾನು ಡೆಡಿಕೇಟ್ ಮಾಡಿದ್ದೀನಿ. ಕಳೆದ 10 ಸೀಸನ್‌ಗಳನ್ನು ನಾನು ನಡೆಸಿಕೊಂಡು ಬಂದಿದ್ದೀನಿ.



ನಾನು ಬಿಗ್ ಬಾಸ್ ನಡೆಸಿಕೊಡ್ತೀನಿ ಅಂತಾ ಎಲ್ಲರಿಗೂ ಗೊತ್ತಿದೆ. ಆದರೆ ನಾನು ಹೇಗೆ ನಡೆ ಸಿಕೊಡುತ್ತಿದ್ದೆ ಅಂತಾ ಯಾರಿಗಾದರೂ ಗೊತ್ತಿದ್ಯಾ? ಬಿಗ್ ಬಾಸ್‌ಗಾಗಿ ನಾನು ಎಲ್ಲಿದ್ದರೂ ಬರಬೇಕಾಗುತ್ತದೆ. ಬಿಗ್ ಬಾಸ್ ನಡೆಸಬೇಕಾದರೆ ಅದರ ಹಿಂದಿನ ಸ್ಥಿತಿ ಹೇಗಿರುತ್ತದೆ ಅಂತಾ ನನಗೆ ಗೊತ್ತಿದೆ ಎಂದಿದ್ದಾರೆ. ಸಿನಿಮಾಗೆ ನ್ಯಾಯ ಕೊಡಬೇಕಾ? ಅಥವಾ ಬಿಗ್ ಬಾಸ್ ಶೋಗೆ ನ್ಯಾಯ ಕೊಡಬೇಕಾ? ಎಂದು ಅವರು ಪ್ರಶ್ನಿಸಿದ್ದಾರೆ. ಈ ಬಾರಿ ಕಿಚ್ಚ ಬಿಗ್ ಬಾಸ್ ನಡೆಸಿಕೊಡುತ್ತಾರಾ ಇಲ್ವಾ ಎನ್ನುವುದರ ಬಗ್ಗೆ ಸ್ಪಷ್ಟವಾಗಿ ಹೇಳಿಲ್ಲ. ಈ ಹಿಂದೆ ಈ ಬಾರಿ ಕಿಚ್ಚ ಸುದೀಪ್ ಬಿಗ್ ಬಾಸ್ ನಡೆಸಿಕೊಡುವುದು ಅನುಮಾನ ಎನ್ನುವ ಮಾತುಗಳು ಕೇಳಿಬಂದಿತ್ತು. ರಮೇಶ್ ಅರವಿಂದ್, ರಿಷಬ್ ಶೆಟ್ಟಿ ಅವರ ಹೆಸರು ನಿರೂಪಕರ ಸಾಲಿನಲ್ಲಿ ಕೇಳಿ ಬಂದಿತ್ತು.

ಆದರೆ ಶೀಘ್ರದಲ್ಲೇ ಪ್ರೋಮೊ ಶೂಟ್ ಆಗಲಿದ್ದು ಕಿಚ್ಚ ಅವರೇ ಈ ಬಾರಿಯೂ ಶೋ ನಡೆಸಿಕೊಡುತ್ತಾರೆ ಎನ್ನಲಾಗುತ್ತಿದೆ. ಅಕ್ಟೋಬರ್ ಮೊದಲ ವಾರದಲ್ಲಿ ಶೋ ಶುರುವಾಗುವ ಸಾಧ್ಯತೆಯಿದೆ. ಈ ಬಗ್ಗೆ ವಾಹಿನಿ ಅಧಿಕೃತ ಮಾಹಿತಿ ಇನ್ನಷ್ಟೇ ನೀಡಬೇಕಿದೆ.

# ಹೊಸೂರಿಗೆ ಮೆಟ್ರೋ ವಿಸ್ತರಣೆ: ಬೆಂಗಳೂರನ್ನೂ ತಮಿಳುನಾಡಿಗೇ ಸೇರಿಸಿ ಬಿಡಿ ಅಂತಿದ್ದಾರೆ?

• ಉದಯವಾಹಿನಿ, ಬೆಂಗಳೂರು



ಬೆಂಗಳೂರಿನಿಂದ ಹೊಸೂರಿಗೆ ಮೆಟ್ರೋ ವಿಸ್ತರಣೆ ಮಾಡಬೇಕು ಎನ್ನುವ ತಮಿಳುನಾಡಿನ ಪ್ರಸ್ತಾವನೆಗೆ ಕನ್ನಡಿಗರು ಕೆಂಡಾಮಂಡಲರಾಗಿದ್ದಾರೆ. ತಮಿಳುನಾಡಿನ ಹೊಸೂರಿಗೆ ಯಾವುದೇ ಕಾರಣಕ್ಕೂ ಮೆಟ್ರೋ ವಿಸ್ತರಣೆ ಮಾಡ ಬಾರದು. ಇದರಿಂದ ಕನ್ನಡಿಗರಿಗೆ ಅನ್ಯಾಯವಾಗಲಿದೆ ಎನ್ನುವ ವಾದ ಕೇಳಿಬರುತ್ತಿದೆ. ಮೆಟ್ರೋ ಯಾಕೆ ವಿಸ್ತರಣೆ ಮಾಡ್ತೀರ ಬೆಂಗಳೂರನ್ನೂ ತಮಿಳುನಾಡಿಗೇ ಸೇರಿಸಿಬಿಡಿ ಎಂದು ಕನ್ನಡಿಗರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ತಮಿಳುನಾಡಿನ ಹೊಸೂರಿಗೆ ಮೆಟ್ರೋ ವಿಸ್ತರಣೆ ಮಾಡುವುದು ಮತ್ತೊಂದು ಕಾವೇರಿ ಕಥೆ ಆಗಲಿದೆ ಎಂದು ಕೆಲವರು ಆತಂಕ ವ್ಯಕ್ತಪಡಿಸಿದ್ದಾರೆ. ಮತ್ತೊಂದು ಕಾವೇರಿ ಕಥೆ ಎಂದರೆ, ಕೆಆರ್ ಎಸ್ ಡ್ಯಾಂ ನಮ್ಮ ರಾಜ್ಯದಲ್ಲಿದೆ. ಆದರೆ, ನೀರು ತಮಿಳುನಾಡಿಗೆ ಪೂರೈಕೆ ಆಗುತ್ತಿದೆ. ಮುಂದೆ ತಮಿಳುನಾಡಿನ ಹೊಸೂರಿಗೆ ಮೆಟ್ರೋ ರೈಲು ವಿಸ್ತರಣೆಯಾದರೂ ಇದೇ ಆಗಲಿದೆ. ಇದು ಇನ್ನೊಂದು ಕಾವೇರಿ ಕಥೆ ಅಷ್ಟೇ. ಏಡಿ ನಮ್ದು ಉಪಯೋಗ ಮಾತ್ರ ತಮಿಳುನಾಡಿನವರದು. ಅದೇ ರೀತಿ ಮೆಟ್ರೋ ನಮ್ದು. ಲಾಭ ಎಲ್ಲಾ ತಮಿಳುನಾಡಿಗೆ ಎನ್ನುವಂತಾಗಲಿದೆ ಎಂದು ಕನ್ನಡಿಗರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ತಮಿಳುನಾಡಿನ ಹೊಸೂರಿಗೆ ಮೆಟ್ರೋ ವಿಸ್ತರಣೆ ಮಾಡುವುದರಿಂದ ತಮಿಳುನಾಡಿನವರಿಗಷ್ಟೇ ಅನುಕೂಲ ಆಗಲಿದೆ. ಇದರಿಂದ ಖಂಡಿತವಾಗಿಯೂ ಕನ್ನಡಿಗರಿಗೆ ಅನುಕೂಲ ಆಗಲ್ಲ. ತಮಿಳುಗರಿಗೆ ಮಾತ್ರ ಅನುಕೂಲ. ಮೊದಲು ರಾಜ್ಯ ಸರ್ಕಾರ ಇದರ ಬಗ್ಗೆ ಗಮನ ಕೊಡಬೇಕು. ಈಗಾಗಲೇ ತಮಿಳುಗರ ಸಂಖ್ಯೆ ಬೆಂಗಳೂರಿನಲ್ಲಿ 40% ಇದೇ ಇನ್ನೇನು ಮೆಟ್ರೋ ಆದ ಮೇಲೆ ಕನ್ನಡಿಗರ ಕೆಲಸ ಗೋತಾ ಅಷ್ಟೇ ಎನ್ನುತ್ತಿದ್ದಾರೆ ಬೆಂಗಳೂರಿಗರು. ತಮಿಳುನಾಡಿನ ಹೊಸೂರಿಗೆ ಮೆಟ್ರೋ ವಿಸ್ತರಣೆ ಮಾಡುವುದಕ್ಕಿಂತಲೂ ಕರ್ನಾಟಕದ ಇತರ ಭಾಗಗಳಿಗೆ ಮೆಟ್ರೋ ವಿಸ್ತರಣೆ ಮಾಡಿದರೆ ಕನ್ನಡಿಗರಿಗೆ ಅನುಕೂಲ ಆಗಲಿದೆ. ಬೆಂಗಳೂರಿಗೆ ದುಡಿಯಲು ಉತ್ತರ ಕರ್ನಾಟಕದವರೇ ಬರುವುದು ಹೆಚ್ಚು. ವಾರದ ರಜಾದಿನಕ್ಕೆ ಊರಿಗೆ ಹೋಗಿ ಬರುವುದಕ್ಕೆ ತುಮಕೂರು ಬೆಂಗಳೂರ್ ರೋಡ್ ಯಾವಾಗಲೂ ಟ್ರಾಫಿಕ್ ಜಾಮ್ ಮೊದಲು ತುಮಕೂರುವರಿಗೆ ಮೆಟ್ರೋ ಮಾಡಿದರೆ ಅನುಕೂಲ ಆಗಲಿದೆ ಎನ್ನುವ ವಾದವೂ ಕೇಳಿ ಬಂದಿದೆ. ಹೊಸೂರಿನ ಬದಲು ಮೈಸೂರಿಗೆ, ತುಮಕೂರಿಗೆ ಮೆಟ್ರೋ ವಿಸ್ತರಿಸಬೇಕು ಇದರಿಂದ ನಮ್ಮ ಜನರಿಗೆ ಅನುಕೂಲ ಆಗಲಿದೆ.

# ಬಿಎಂಟಿಸಿ ಹೊಸ ಮಾರ್ಗ ಯಶವಂತಪುರ ಕಡೆ ಜನರಿಗೆ ಅನುಕೂಲ

• ಉದಯವಾಹಿನಿ, ಬೆಂಗಳೂರು




ಪ್ರಯಾಣಿಕರ ಬೇಡಿಕೆಯಂತೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ) ಆಗಸ್ಟ್ ತಿಂಗಳಿನಲ್ಲಿ ಹೊಸ ಮಾರ್ಗವೊಂದನ್ನು ಪರಿಚಯಿಸಿದೆ. ಬೆಂಗಳೂರು ಗ್ರಾಮಾಂತರ ಭಾಗದ ಪ್ರಯಾಣಿಕರನ್ನು ಗುರಿಯಾಗಿಸಿಕೊಂಡು ಹೊಸ ಮಾರ್ಗದಲ್ಲಿ ಬಸ್ ಸಂಚಾರವನ್ನು ಆರಂಭಿಸಲಾಗಿದೆ. ಪ್ರಯಾಣಿಕರು ಬಸ್ ಸೇವೆಯ ಉಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಲಾಗಿದೆ. ಬಿಎಂಟಿಸಿ ಯಶವಂತಪುರ-ಕೋಡಿಹಳ್ಳಿ (ಮೋಟಗಾನಹಳ್ಳಿ) ನಡುವಿನ ಮಾರ್ಗದಲ್ಲಿ ಹೊಸ ಬಸ್ ಸಂಚಾರವನ್ನು ಆರಂಭಿಸಿದೆ. ಆಗಸ್ಟ್ ತಿಂಗಳಿನಲ್ಲಿ ಬಿಎಂಟಿಸಿ ಹೊಸ ಬಸ್ ಸೇವೆ ಆರಂಭಿಸುತ್ತಿರುವ ಮಾರ್ಗದಲ್ಲಿ ಇದೂ ಸಹ ಒಂದು. ನೆಲಮಂಗಲ, ಜಾಲಹಳ್ಳಿ ಕ್ರಾಸ್, ಯಶವಂಪುರ ಕಡೆಗೆ ಸಂಚಾರ ನಡೆಸುವ ಜನರಿಗೆ ಈ ಬಸ್ ಸಹಾಯಕವಾಗಿದೆ.

ಯಶವಂತಪುರ-ಕೋಡಿಹಳ್ಳಿ (ಮೋಟಗಾನಹಳ್ಳಿ). ಕೋಡಿಹಳ್ಳಿ ಇಂದ ಕೆಂಪೇಗೌಡ ಬಸ್ ನಿಲ್ದಾಣ ಕಡೆಗೆ ಹೊರಡುವ ಸಮಯ 07:15. ಕೋಡಿಹಳ್ಳಿ ಇಂದ ಯಶವಂತಪುರ ಕಡೆಗೆ ಹೊರಡುವ ಸಮಯ 19:00. ನೆಲಮಂಗಲದಿಂದ ಕೋಡಿಹಳ್ಳಿ ಕಡೆಗೆ ಹೊರಡುವ ಸಮಯ 06:15. ಯಶವಂತಪುರದಿಂದ ಕೋಡಿಹಳ್ಳಿ ಕಡೆಗೆ ಹೊರಡುವ ಸಮಯ 16:55. ಬಿಎಂಟಿಸಿ ಪರಿಚಯಿಸಿರುವ ಈ ಹೊಸ ಮಾರ್ಗದ ಬಸ್ ಕೋಡಿಹಳ್ಳಿ-ತಿರುಮಲಾಪುರ-ಮೋಟಗಾನಹಳ್ಳಿ-ಬಸವನಹಳ್ಳಿ-ಮಹದೇವಪುರ-ಯಂಟಗಾನಹಳ್ಳಿ-ನೆಲಮಂಗಲ- ಅರಿಶಿನಕುಂಟೆ- ದಾಸನಪುರ-ಮಾಕಳಿ-ಮಾದನಾಯಕನಹಳ್ಳಿ- ಮಾದವಾರ-8ನೇ ಮೈಲಿ-ಜಾಲಹಳ್ಳಿ ಕ್ರಾಸ್-ಗೊರಗುಂಟೆಪಾಳ್ಯ-ಯಶವಂತಪುರ ಮಾರ್ಗದಲ್ಲಿ ಸಂಚಾರ ನಡೆಸಲಿದೆ. ಇದೇ ತಿಂಗಳಿನಲ್ಲಿ ಬಿಎಂಟಿಸಿ 300-ಆರ್ ಸಂಖ್ಯೆಯ ಹೊಸ ಮಾರ್ಗವನ್ನು ಘೋಷಣೆ ಮಾಡಿತ್ತು.

ಆದರೆ ಸಾಮಾಜಿಕ ಜಾಲತಾಣದಲ್ಲಿ ಈ ನಡೆಗೆ ಟೀಕೆಗಳು ವ್ಯಕ್ತವಾಗಿದೆ. ಆದ್ದರಿಂದ ಬಿಎಂಟಿಸಿ ಡಿಜಿಟಲ್ ಮಾದರಿಯಲ್ಲಿ ಪಾಸುಗಳು ಲಭ್ಯ. ಅಲ್ಲದೇ ಬಸ್ ನಿಲ್ದಾಣದಲ್ಲಿಯೂ ಪಾಸುಗಳು ಸಿಗಲಿದ್ದು, ಪ್ರಯಾಣಿಕರು ಅಲ್ಲಿಯೂ ದೈನಿಕ, ಸಾಪ್ತಾಹಿಕ (ವಾರ) ಹಾಗೂ ಮಾಸಿಕ ಪಾಸುಗಳನ್ನು ಪಡೆಯಬಹುದಾಗಿದೆ ಎಂದು ಸ್ಪಷ್ಟನೆ ನೀಡಿದೆ.




• ಹಿಂದಿನ ಸಂಚಿಕೆಯಿಂದ

ಒಂದು ಸಲ ಈ ಬೇಟೆಗಾರ ಸಮುದ್ರದ ದಂಡೆಯಲ್ಲಿ ನಡೆಯುತ್ತಿದ್ದಾಗ ಸಿಕ್ಕಿದ್ದ ಒಂದು ಕಬ್ಬಿಣದ ಚೂರನ್ನು ಈ ಬಾಣದ ತಲೆಯನ್ನಾಗಿ ಬಳಸಿಕೊಂಡಿದ್ದ. ಆ ಕಬ್ಬಿಣದ ಚೂರು ಬಲರಾಮ ಪುಡಿಮಾಡಿಸಿ ಬಿಸುಡಿಸಿದ್ದ ಒನಕೆಯ ಒಂದು ಚೂರಾಗಿತ್ತು. ಋಷಿಗಳ ಶಾಪದಂತೆ ವೃಷ್ಣಿವಂಶದವನಾದ ಕೃಷ್ಣನಿಗೂ ಅದೇ ಒನಕೆಯ ಚೂರು ನೆಪವಾಯಿತು. ಕೃಷ್ಣನಿಗೆ ತುಂಬಾ ನೋವಾಯಿತು. ಹಾ ಎಂದು ಕೂಗಿಕೊಂಡ. ಬೇಟೆಗಾರನು ಅಚ್ಚರಿಯಿಂದ ಓಡಿಬಂದ. ನೋಡುತ್ತಾನೆ, ಜಿಂಕೆಯ ಬದಲಿಗೆ ಇಲ್ಲಿರುವುದು ಪೀತಾಂಬರಧಾರಿ ಕೃಷ್ಣ ಅವನಿಗೆ ತಾನು ಇದೇನು ಮಾಡಿಬಿಟ್ಟೆ ಎಂದು ಬಹಳ ಹೆದರಿಕೆಯಾಯಿತು. ಕೃಷ್ಣನೇ ನಗುತ್ತ, ''ಹೆದರಬೇಡವಯ್ಯ, ನೀನು ನನಗೆ ಬಹು ದೊಡ್ಡ ಉಪಕಾರವನ್ನೇ ಮಾಡಿರುವೆ. ಹೇಗೆ ಸಾಯಬೇಕು ಎಂಬ ನನ್ನ ಕೊನೆಯ ಸಮಸ್ಯೆಯನ್ನು ಪರಿಹರಿಸಿರುವೆ. ಮಿತ್ರ, ಸಮಾಧಾನದಿಂದ ಮನೆಗೆ ಹೋಗು. ನಿನ್ನ ಈ ಕಾರ್ಯದಿಂದ ನಿನಗೆ ಸ್ವರ್ಗ ಪ್ರಾಪ್ತಿಯಾಗುತ್ತದೆ'' ಎಂದ. ಬೇಟೆಗಾರ ತನಗೆ ತಿಳಿದ ಎಲ್ಲಾ ಉಪಚಾರ ಮಾಡಿದರೂ ಪ್ರಯೋಜನವಾಗಲಿಲ್ಲ. ಯುಗಾವತಾರನಾದ ಕೃಷ್ಣನ ದೇಹತ್ಯಾಗ ಆಗಿತ್ತು. ಅವನು ಆತ್ಮವು ಇಡೀ ಭೂಮಿಯನ್ನೇ ಜ್ಯೋತಿರೂಪದಲ್ಲಿ ಬೆಳಗುತ್ತ ಆಕಾಶದಲ್ಲಿ ಲೀನವಾಯಿತು. ಕೃಷ್ಣನು ಈ ಪ್ರಪಂಚದಿಂದ ಕಣ್ಮರೆಯಾದ. ಅವನು ಬಂದ ಉದ್ದೇಶ ಪೂರ್ಣಗೊಂಡಿತ್ತು; ಈ ಭೂಮಿಗೆ ಇನ್ನು ಅವನ ಅವಶ್ಯಕತೆ ಇರಲಿಲ್ಲ. ತಾನು ಎಲ್ಲಿಂದ ಬಂದಿದ್ದನೋ ಅಲ್ಲಿಗೇ ಹಿಂದಿರುಗಿದ. ಲೋಕದ ಪಾಲಿಗೆ ಇನ್ನು ಕೃಷ್ಣನಿಲ್ಲ. ಪ್ರಾಣವಿಲ್ಲದ ಶರೀರ ಮಾತ್ರ ಅಲ್ಲಿತ್ತು. ಭೂಮಿ ಪರಿಮಳವನ್ನು ಕಳೆದುಕೊಂಡು ಒಂದು ಪುಷ್ಪದಂತಾಗಿ ಹಿಂದಕ್ಕುಳಿಯಿತು.

ದಾರುಕನು ವೇಗವಾಗಿ ರಥವನ್ನೋಡಿಸಿಕೊಂಡು ಹಸ್ತಿನಾಪುರಕ್ಕೆ ಹೋದ. ಅಲ್ಲಿ ಅವರಿಗೆ ಪ್ರಭಾಸತೀರ್ಥದಲ್ಲಿ ನಡೆದ ಘೋರ ದುರಂತವನ್ನು ವಿವರಿಸಿದ. ಯುಧಿಷ್ಠಿರನಿಗೆ ಆ ಕ್ಷಣಕ್ಕೆ ಗಾಂಧಾರಿಯ ಶಾಪ ಮರೆತುಹೋಗಿತ್ತು. ಪಾಂಡವರು ದು:ಖದಿಂದ ನಿಶ್ಚೇಷ್ಟಿತರಾದರು. ಈವರೆಗೆ ಅವರು ಎಷ್ಟೇ ಕಷ್ಟಪಟ್ಟಿದ್ದರೂ, ಕೃಷ್ಣನನ್ನು ಸ್ಮರಿಸಿಕೊಂಡೊಡನೆ ಕಷ್ಟವೆಲ್ಲ ಮರೆತು ಹೋಗುತ್ತಿತ್ತು; ಮನಸ್ಸಿಗೆ ಬಲ ಬರುತ್ತಿತ್ತು. ಆದರೆ ಈಗ ಏನು ಉಳಿದಿದೆ ಯೋಚಿಸಲೇ ಆಗುತ್ತಿಲ್ಲ. ಮೌನವಾಂತ ದು:ಖದಲ್ಲಿ ಅರ್ಜುನನು ದ್ವಾರಕೆಗೆ ಓಡಿಬಂದ. ಅವನಿಗೆ ನಿನ್ನೆಯ ಕನಸಿನ ನೆನಪಾಯಿತು. ಕೃಷ್ಣನು, ''ನಾಳೆ ನನ್ನ ಮಾತುಗಳ ಅರ್ಥ ನಿನಗಾಗುವುದು'' ಎಂದಿದ್ದ. ಕೃಷ್ಣ ಇನ್ನಿಲ್ಲವೆಂಬ ಸತ್ಯ ಅರ್ಜುನನ ಹೃದಯವನ್ನು ಕಲ್ಲಾಗಿಸಿತ್ತು. ದ್ವಾರಕೆಗೆ ಬಂದವನೇ ವಸುದೇವನ ಬಳಿಗೆಹೋದ. ವೃಷ್ಣಿವಂಶದ ಮೇಲೆ ಬಂದೆರಗಿದ ದುರದೃಷ್ಟವನ್ನೂ ದುರಂತದ ವಿವರಗಳನ್ನು ಕೇಳಿ ತಿಳಿದುಕೊಂಡ. ಅನಂತರ ಅರ್ಜುನ ಪ್ರಭಾಸತೀರ್ಥಕ್ಕೆ ಹೋದ. ಅಲ್ಲಿ ಎಲ್ಲರೂ-ಸಾತ್ಯಕಿ, ಪ್ರದ್ಯುಮ್ನ, ತನ್ನ ಗೆಳೆಯ ಗದ ಇತ್ಯಾದಿ ಎಲ್ಲರೂ- ಸತ್ತು ಮಲಗಿದ್ದರು. ಬಲರಾಮನು ತಪಸ್ಸಿಗೆ ಹೋದನೆಂಬ ಕೃಷ್ಣನ ಮಾತನ್ನು ವಸುದೇವನಿಂದ ಕೇಳಿ ತಿಳಿದಿದ್ದ ಅರ್ಜುನನ ಇವರಿಬ್ಬರನ್ನು ಹುಡುಕಿಕೊಂಡು ಹೊರಟ. **ಮುಂದುವರಿಯುವುದು...**

# ಡಾ.ಭೀಮರಾವ್ ಅಂಬೇಡ್ಕರ್‌ರವರ ಕಿರು ಪರಿಚಯ



☛ ವಿಶ್ವಾಸ್ .ಡಿ .ಗೌಡ

**ಜಗತ್ತಿನ ಪ್ರತಿಯೊಂದು ದಾಖಲೆಯೂ ಬಾಬಾಸಾಹೇಬರ ಹೆಸರಿನಲ್ಲಿದೆ**

1. ಭಾರತದ ಅತ್ಯಂತ ವಿದ್ಯಾವಂತ ವ್ಯಕ್ತಿ
2. ಹೆಚ್ಚಿನ ಪುಸ್ತಕ ಬರೆದವರು
3. ವೇಗವಾದ ಟೈಪ್ ಮಾಡುತ್ತಿದ್ದವರು
4. ಹೆಚ್ಚು ಟೈಪ್ ಮಾಡಿದ ಪದಗಳು
5. ಅತಿ ಹೆಚ್ಚು ಚಳುವಳಿಗಳನ್ನು ಮಾಡಿದವರು
6. ಎಲ್ಲಾ ಜಾತಿಯ ಮಹಿಳೆಯರ ಹಕ್ಕುಗಳಿಗಾಗಿ ಮಂತ್ರಿ ಪದವಿಗೆ ರಾಜೀನಾಮೆ ನೀಡಿದವರು
7. ದಲಿತರು, ಹಿಂದುಳಿದವರ ಹಕ್ಕುಗಳನ್ನು ತಂದು ಕೊಟ್ಟವರು.
8. ವರ್ಣ ಪದ್ಧತಿಯಿಂದ ಜನರನ್ನು ವಿಭಾಗ ಮಾಡಿದ ಹಿಂದೂ ಧರ್ಮ ಗ್ರಂಥಗಳಾದ ಮನುಸ್ಮೃತಿಯನ್ನು ಅಡ್ಡದಾರಿಯಲ್ಲಿ ಸುಟ್ಟವರುವರು
9. ಜಾತೀಯತೆ ತೊಲಗಿಸಲು ತಮ್ಮ ಪಾಂಡಿತ್ಯದಿಂದ ಸಾಧನೆ ಮಾಡಿದವರು
10. ಬಡ ಜನರ ಹಕ್ಕುಗಳಿಗಾಗಿ ತ್ಯಾಗ ಮಾಡಿ 4 ಮಕ್ಕಳನ್ನು ತ್ಯಾಗಮಾಡಿದವರು.
11. 2 ಲಕ್ಷ ಪುಸ್ತಕಗಳನ್ನು ಓದಿ ಕಂಠಪಾಠ ಮಾಡಿದವರು
12. ಭಾರತದ ಸಂವಿಧಾನವನ್ನು ಬರೆದವರು
13. ಪೂನಾ ಒಪ್ಪಂದವನ್ನು ಬರೆದರು
14. ಮೂಕ್ ನಾಯಕ್ ಪತ್ರಿಕೆ ಹೊರತಂದವರು
15. ಭಹಿಸ್ಕೃತ ಭಾರತ ಪತ್ರಿಕೆಯನ್ನು ಹೊರತಂದವರು
16. ವೇಗದ ಬರಹಗಾರರು
17. ಎರಡು ಕೈಯಲ್ಲೂ ಬರಹಗಾರರು
18. ಗಾಂಧೀಜಿಗೆ ಜೀವದಾನ ಮಾಡಿದವರು
19. ಅತ್ಯಂತ ಸಮರ್ಥ ಬ್ಯಾರಿಸ್ಟರ್
20. ಮುಂಬೈನ ಸೇಠ್ ಮಗನನ್ನು ನಕಲಿ ಪ್ರಕರಣದಿಂದ ಖುಲಾಸೆಗೊಳಿಸಿದವನು
21. ಯೋಗ ಮಾಡುವವರು
22. ಅತ್ಯಂತ ಪ್ರಾಮಾಣಿಕರು
23. 18 ರಿಂದ 20 ಗಂಟೆಗಳ ಅಧ್ಯಯನ ಮಾಡಿದವರು
24. ಒಬಿಸಿ ಅರ್ಥವನ್ನು ಸರ್ದಾರ್ ಪಟೇಲ್ ಅವರಿಗೆ ಹೇಳಿಕೊಟ್ಟವರು
25. ಶಾಲೆಯ ಹೊರಗೆ ಕುಳಿತು ಅವಮಾನ ಅನುಭವಿಸುತ್ತಾ ಉನ್ನತ ಶಿಕ್ಷಣ ಪಡೆದವರು


ಉದಯವಾಹಿನಿ ಚಿತ್ರ

25. ಪತ್ನಿ ರಮಾಬಾಯಿಯನ್ನು ಕಳೆದುಕೊಂಡವರು ನಮ್ಮೆಲ್ಲರ ಒಳಿತಿಗಾಗಿ...

**ಈ ಕೆಳಗಿನಂತೆ 9 ಭಾಷೆಗಳು ತಿಳಿದಿದ್ದವು**

1. ಮರಾಠಿ (ಮಾತೃಭಾಷೆ), 2. ಹಿಂದಿ, 3. ಸಂಸ್ಕೃತ 4.ಗುಜರಾತಿ, 5. ಇಂಗ್ಲೀಷ್, 6.ಪಾರ್ಸಿ, 7. ಜರ್ಮನ್ 8.ಫ್ರೆಂಚ್, 9. ಪಾಲಿ

ಅವರು ಪಾಲಿ ವ್ಯಾಕರಣ ಮತ್ತು ನಿಘಂಟನ್ನು ಸಹ ಬರೆದಿದ್ದಾರೆ, ಇದನ್ನು ಮಹಾರಾಷ್ಟ್ರ ಸರ್ಕಾರವು ಪ್ರಕಟಿಸಿದೆ. ಡಾ.ಬಾಬಾಸಾಹೇಬ್ ಅಂಬೇಡ್ಕರ್ ಬರವಣಿಗೆ, ಭಾಷಣಗಳು ಸಂಪುಟ.16 ರಲ್ಲಿ ಮಹಾರಾಷ್ಟ್ರ ಸರ್ಕಾರವು ಪ್ರಕಟಿಸಿದೆ.

**ಬಾಬಾಸಾಹೇಬ್ ಅಂಬೇಡ್ಕರ್ ಅವರು ಸಂಸತ್ತಿನಲ್ಲಿ ಕೆಳಕಂಡ ಮಸೂದೆಯನ್ನು ಮಂಡಿಸಿದರು.**

1. ಮಹಾರ್ ಸಂಬಳ ಬಿಲ್, 2.ಹಿಂದೂ ಕೋಡ್ ಬಿಲ್
3. ಜನತಾ ಮಸೂದೆಯ ಪ್ರಾತಿನಿಧ್ಯ
4. ಹೆರಿಗೆ ರಜೆಗಾಗಿ ಬಿಲ್ , 5. ಮಂತ್ರಿಗಳ ಸಂಬಳ ಬಿಲ್
6.ಕಾರ್ಮಿಕರಿಗೆ ಸಂಬಳ ಬಿಲ್
7. ಉದ್ಯೋಗ ವಿನಿಮಯ ಕೇಂದ್ರ, ಸೇವೆ
8.ಪಿಂಚಣಿ ಬಿಲ್, 9. ಭವಿಷ್ಯ ನಿಧಿ (ಕಈ) ಬಿಲ್

**ಬಾಬಾಸಾಹೇಬರ ಸತ್ಯಾಗ್ರಹ (ಚಳುವಳಿ)**

1.ಮಹದ್ ಚಳುವಳಿ 20/3/1927
2.ಮೊಹಾಲಿ (ಧುಲೆ) ಚಳುವಳಿ 12/2/1939
3.ಅಂಬಾದೇವಿ ದೇವಸ್ಥಾನ ಪ್ರವೇಶ ಚಳವಳಿ 26,7,1927
4.ಪುಣೆ ಕೌನ್ಸಿಲ್ ಚಳುವಳಿ 4/6/1946
5. ಮೌಂಟೇನ್ ಮೂವ್ಮೆಂಟ್ 22/9/1929
6. ನಾಗ್ಪುರ ಚಳುವಳಿ 3/9/1946
7.ಕಲಾರಾಮ್ ಮಂದಿರ ಪ್ರವೇಶ ಚಳವಳಿ 2/3/1930
8.ಲಕ್ನೋ ಚಳುವಳಿ 2/3/1947
9.ಮುಖೇದ್ ಚಳುವಳಿ 23/9/1931

**ಬಾಬಾಸಾಹೇಬ್ ಅಂಬೇಡ್ಕರ್ ಸ್ಥಾಪಿಸಿದ ಸಾಮಾಜಿಕ ಸಂಘಟನೆ**

1.ಬಹಿಷ್ಕೃತ ಹಿತ್ಕಾರಿಣಿ ಸಭಾ – 20 ಜುಲೈ 1924
2. ಸಮತಾ ಸೈನಿಕ್ ದಳ – 3 ಮಾರ್ಚ್ 1927

**ರಾಜಕೀಯ ಸಂಘಟನೆ**

1. ಸ್ವತಂತ್ರ ಮಜ್ದೂರ್ ಪಾರ್ಟಿ – 16 ಆಗಸ್ಟ್ 1936
2. ಪರಿಶಿಷ್ಟ ಜಾತಿ ಒಕ್ಕೂಟ – 19 ಜುಲೈ 1942
3. ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ – 3 ಅಕ್ಟೋಬರ್ 1957

**ಧಾರ್ಮಿಕ ಸಂಘಟನೆ**

1. ಭಾರತೀಯ ಬೌದ್ಧ ಮಹಾಸಭಾ – 4 ಮೇ 1955

**ಶೈಕ್ಷಣಿಕ ಸಂಸ್ಥೆ**

1.ಡಿಪ್ರೆಸ್ಡ್ ಕ್ಲಾಸ್ ಎಜುಕೇಶನ್ ಸೊಸೈಟಿ– 14 ಜೂನ್ 1928
2. ಪೀಪಲ್ಸ್ ಎಜುಕೇಶನ್ ಸೊಸೈಟಿ – 8 ಜುಲೈ 1945
3. ಸಿದ್ಧಾರ್ಥ ಕಾಲೇಜು, ಮುಂಬೈ – 20 ಜೂನ್ 1946
4. ಮಿಲಿಂದ್ ಕಾಲೇಜು, ಔರಂಗಾಬಾದ್ – 1 ಜೂನ್ 1950

**ಬಾಬಾ ಸಾಹೇಬರಿಂದ ಪ್ರಕಟವಾದ ಪತ್ರಿಕೆಗಳು ಮತ್ತು ನಿಯತಕಾಲಿಕೆಗಳು**

1. ಮೂಕ ನಾಯಕ್ – 31 ಜನವರಿ 1920
2. ಬಹಿಷ್ಕೃತ ಭಾರತ – 3 ಏಪ್ರಿಲ್ 1927
3.ಸಮತಾ– 29 ಜೂನ್ 1928
4 ಜನತಾ – 24 ನವೆಂಬರ್ 1930
5.ಪ್ರಬುದ್ಧ ಭಾರತ– 4 ಫೆಬ್ರವರಿ 1956

ಬಾಬಾಸಾಹೇಬ್ ಅಂಬೇಡ್ಕರ್ ತಮ್ಮ ಜೀವನದಲ್ಲಿ ವಿವಿಧ ವಿಷಯಗಳ ಕುರಿತು 527 ಕ್ಕೂ ಹೆಚ್ಚು ಭಾಷಣಗಳನ್ನು ನೀಡಿದ್ದಾರೆ.

**ಬಾಬಾಸಾಹೇಬ್ ಅಂಬೇಡ್ಕರ್ ಅವರಿಗೆ ಸಂದ ಸನ್ಮಾನಗಳು.**

1.ಭಾರತ ರತ್ನ,
2.ವಿಶ್ವದ ಶ್ರೇಷ್ಠ ವ್ಯಕ್ತಿ (ಕೊಲಂಬಿಯಾ ವಿಶ್ವವಿದ್ಯಾಲಯ)
3 ಯೂನಿವರ್ಸ್ ಮೇಕರ್ (ಆಕ್ಸ್‌ಫರ್ಡ್ ವಿಶ್ವವಿದ್ಯಾಲಯ)
4. ದಿ ಗ್ರೇಟೆಸ್ಟ್ ಇಂಡಿಯನ್ (CNN IBN & History Tv

**ಬಾಬಾಸಾಹೇಬ್ ಅಂಬೇಡ್ಕರ ಜಿ ವೈಯಕ್ತಿಕ ಲೈಬ್ರರಿ ಪುಸ್ತಕಗಳು (ಅವರು ಹೊಂದಿದ್ದರು)**

1. ಇಂಗ್ಲಿಷ್ ಸಾಹಿತ್ಯ – 1300 ಪುಸ್ತಕಗಳು
2. ರಾಜಕೀಯ – 3,000 ಪುಸ್ತಕಗಳು
3. ಯುದ್ಧಶಾಸ್ತ್ರ– 300 ಪುಸ್ತಕಗಳು
4. ಅರ್ಥಶಾಸ್ತ್ರ – 1100 ಪುಸ್ತಕಗಳು
5. ಇತಿಹಾಸ – 2,600 ಪುಸ್ತಕಗಳು
6. ಧರ್ಮ– 2000 ಪುಸ್ತಕಗಳು
7. ಕಾನೂನು – 5,000 ಪುಸ್ತಕಗಳು
8) ಸಂಸ್ಕೃತ– 200 ಪುಸ್ತಕಗಳು
9. ಮರಾಠಿ– 800 ಪುಸ್ತಕಗಳು
10. ಹಿಂದಿ– 500 ಪುಸ್ತಕಗಳು
11. ತತ್ವಶಾಸ್ತ್ರ – 600 ಪುಸ್ತಕಗಳು
12. ವರದಿ– 1,000
13.ಉಲ್ಲೇಖ ಪುಸ್ತಕಗಳು – 400 ಪುಸ್ತಕಗಳು
14.ಪತ್ರಗಳು ಮತ್ತು ಭಾಷಣಗಳು– 600
15. ಜೀವನಚರಿತ್ರೆ (ಜೀವನಚರಿತ್ರೆ) – 1200
16. ಎನ್‌ಸೈಕ್ಲೋಪೀಡಿಯಾ ಆಫ್ ಬ್ರಿಟಾನಿಕಾ – ಸಂಪುಟಗಳು 1 ರಿಂದ 29
17. ಎನ್ಸೈಕ್ಲೋಪೀಡಿಯಾ ಆಫ್ ಸೋಶಿಯಲ್ ಸೈನ್ಸ್ – ಸಂಪುಟಗಳು 1 ರಿಂದ 15
18. ಕ್ಯಾಥೋಲಿಕ್ ಎನ್ಸೈಕ್ಲೋಪೀಡಿಯಾ – ಸಂಪುಟಗಳು 1 ರಿಂದ 12
19. ಎನ್ಸೈಕ್ಲೋಪೀಡಿಯಾ ಆಫ್ ಎಜುಕೇಶನ್
20. ಇತಿಹಾಸಕಾರರ ಪ್ರಪಂಚದ ಇತಿಹಾಸ – ಸಂಪುಟಗಳು 1 ರಿಂದ 25
21. ದೆಹಲಿಯಲ್ಲಿ ಇರಿಸಲಾಗಿರುವ ಪುಸ್ತಕಗಳು – ಬುದ್ಧ ಧಮ್ಮ, ಪಾಲಿ ಸಾಹಿತ್ಯ, ಮರಾಠಿ ಸಾಹಿತ್ಯ – 2000 ಪುಸ್ತಕಗಳು
22. ಉಳಿದ ವಿಷಯಗಳ ಕುರಿತು 2305 ಪುಸ್ತಕಗಳು

ಅದಕ್ಕಾಗಿಯೇ ಬ್ರಿಟಿಷರು ಅವರನ್ನು ಚಲಿಸುವ ಗ್ರಂಥಾಲಯ ಎಂದು ಕರೆಯುತ್ತಿದ್ದರು.

ಒಬ್ಬ ಮನುಷ್ಯನ ಜೀವಿತ ಕಾಲದಲ್ಲಿ ಇಷ್ಟೊಂದು ಸಾಧನೆ ಮಾಡಲು ಸಾಧ್ಯವೇ. ಅದಕ್ಕೆ ಜಗತ್ತು ಅವರನ್ನು "Symbol of knowledge " ಎಂದು ಅವರನ್ನು ಗೌರವಿಸುತ್ತದೆ.

ಜೈ ಭೀಮ್

# ರೋಸ್ ಆಚರಣೆಯಲ್ಲಿ ಮಿಂಚಿದ ನಟಿ ಸೋನಲ್

ನಟಿ ಸೋನಲ್ ಮಾಂಥೆರೋ ನಿರ್ದೇಶಕ ತರುಣ್ ಸುಧೀರ್‌ಜೊತೆ ಆಗಸ್ಟ್ 10 ರಂದು ಹಿಂದೂ ಸಂಪ್ರದಾಯದ ಪ್ರಕಾರ ಮದುವೆಯಾಗಿದ್ರು. ಇದೀಗ ಸೋನಲ್ ತರುಣ್ ಜೋಡಿಗೆ ಕ್ರಿಶ್ಚಿಯನ್ ಸಂಪ್ರದಾಯದ ಪ್ರಕಾರವೂ ಒಂದಾಗುತ್ತಿದ್ದಾರೆ. ಸೋನಲ್ ಹುಟ್ಟೂರು ಮಂಗಳೂರಿನಲ್ಲಿ ಸಪ್ಟೆಂಬರ್ 1 ರಂದು ಚರ್ಚ್‌ನಲ್ಲಿ ವಿವಾಹ ನಡೆಯಲಿದೆ. ಬಳಿಕ ಪ್ರತಿಷ್ಟಿತ ಕನ್ವೆಂಷನ್ ಹಾಲ್‌ನಲ್ಲಿ ಆರತಕ್ಷತೆ ನಡೆಸಲು ತಯಾರಿ ನಡೆದಿದೆ. ಕ್ರಿಶ್ಚಿಯನ್ ಸಂಪ್ರದಾಯದ ಹಲವೆಡೆ ಮಧುಮಗಳಿಗೆ ರೋಸ್ ಸೆಲೆಬ್ರೇಷನ್ ಮಾಡುವ ಪದ್ಧತಿ ಇದೆ. ಅದರ ಪ್ರಕಾರ ಸೋನಲ್‌ಗೆ ರೋಸ್ ಸೆಲೆಬ್ರೇಷನ್ ಕಾರ್ಯಕ್ರಮವನ್ನೂ ಮಾಡಲಾಗಿದೆ. ತಾಯಿ-ಬಂಧುಗಳು ಹಾಗೂ ಗೆಳತಿಯರ ಜೊತೆ ನವವಧು ಕ್ರಿಶ್ಚಿಯನ್ ಸಂಪ್ರದಾಯದ ಪ್ರಕಾರ ಮದುವೆ ಪೂರ್ವ ಕಾರ್ಯಗಳಲ್ಲಿ ಪಾಲ್ಗೊಂಡ್ರು. ಹಳದಿ ಬಣ್ಣದ ಪಾರ್ಟಿವೇರ್ ಉಡುಗೆಯಲ್ಲಿ ಸೋನಲ್ ನಳನಳಿಸಿದ್ದಾರೆ.

ಅಂತರ್‌ಧರ್ಮೀಯ ಮದುವೆಯಾದ ತರುಣ್ ಸೋನಲ್ ಎರಡೂ ಕಡೆಯ ಸಂಪ್ರದಾಯವನ್ನ ಪಾಲಿಸುವ ಸಲುವಾಗಿ ಹಿಂದೂ ಹಾಗೂ ಕ್ರಿಶ್ಚಿಯನ್ ಧರ್ಮದ ಸಂಪ್ರದಾಯದ ರೀತಿ ಮದುವೆಯಗುತ್ತಿದ್ದಾರೆ. ಮಂಗಳೂರಿನಲ್ಲಿ ನಡೆಯುವ ವಿವಾಹ ಕಾರ್ಯಕ್ರಮವನ್ನ ಖಾಸಗಿಯಾಗಿ ನೆರವೇರಿಸಲು ಪ್ಲ್ಯಾನ್ ಮಾಡಿಕೊಂಡಿರುವ ತರುಣ್ ಸೋನಲ್ ಜೋಡಿ ಅಲ್ಲಿನ ಜನರಿಗಷ್ಟೇ ಆಹ್ವಾನ ನೀಡಿದೆ.



# ವಿಲನ್ ರವಿಶಂಕರ್ ಪುತ್ರನ ಚೊಚ್ಚಲ ಸಿನಿಮಾ



ಪ್ರಿ ಲುಕ್ ಅನಾವರಣ

ದಕ್ಷಿಣ ಚಿತ್ರರಂಗದಲ್ಲಿ ಖ್ಯಾತಿ ಪಡೆದಿರುವ ಆರ್ಮುಗ ರವಿಶಂಕರ್ ಮತ್ತೆ ನಿರ್ದೇಶನಕ್ಕೆ ಮರಳಿರುವುದು ಗೊತ್ತೇ ಇದೆ. ಮತ್ತೊಮ್ಮೆ ಡೈರೆಕ್ಟರ್ ಕ್ಯಾಪ್ ತೊಟ್ಟಿರುವ ಅವರು ಸುಬ್ರಹ್ಮಣ್ಯ ಸಿನಿಮಾ ಮೂಲಕ ಮಗ ಅದ್ವೆಯನ್ನು ಚಿತ್ರರಂಗಕ್ಕೆ ಪರಿಚಯಿಸುತ್ತಿದ್ದಾರೆ. ಕಳೆದ ಆಯುಧ ಪೂಜೆಗೆ ಟೈಟಲ್ ಪೋಸ್ಟರ್ ಬಿಡುಗಡೆ ಮಾಡಲಾಗಿತ್ತು. ಅಲ್ಲಿಂದ ಇಲ್ಲಿವರೆಗೂ ಸುಬ್ರಹ್ಮಣ್ಯ ಸಿನಿಮಾದ ಬಗ್ಗೆ ಸಣ್ಣ ಅಪ್‌ಡೇಟ್ ಕೂಡ ಸಿಕ್ಕಿರಲಿಲ್ಲ. ಈಗ ಚಿತ್ರತಂಡದ ಹೊಸ ಸಮಾಚಾರ ರಿವೀಲ್ ಮಾಡಿದೆ.

ಸುಬ್ರಹ್ಮಣ್ಯ ಸಿನಿಮಾದ 60% ಭಾಗದ ಶೂಟಿಂಗ್ ಮುಕ್ತಾಯಗೊಂಡಿದ್ದು, ಸದ್ಯ ಪೋಸ್ಟ್-ಪ್ರೊಡಕ್ಷನ್ ಕೆಲಸ ಮುಂಬೈನ ಶಾರುಖ್ ಒಡೆತನದ ರೆಡ್ ಚಿಲ್ಲೀಸ್ ಸ್ಟುಡಿಯೋದಲ್ಲಿ ಪೂರ್ಣ ಪ್ರಮಾಣದಲ್ಲಿ ನಡೆಯುತ್ತಿದೆ. ಮುಂಬೈ, ಹೈದರಾಬಾದ್, ಬೆಂಗಳೂರು ಮತ್ತು ಚೆನ್ನೈನ ಹಲವಾರು ಪ್ರತಿಷ್ಠಿತ ಸ್ಟುಡಿಯೋಗಳಲ್ಲಿ ಕೆಲಸಗಳು ನಡೆಯುತ್ತಿವೆ. ಪ್ರೀಮಿಯಂ ಲಾರ್ಜ್ ಫಾರ್ಮ್ಯಾಟ್ ಮತ್ತು ಐಮ್ಯಾಕ್ಸ್ ಥಿಯೇಟರ್‌ಗಳಲ್ಲಿ ಅದ್ಭುತ ಫೀಲ್ ಕೊಡುವ ರೀತಿಯಲ್ಲಿ ಸುಬ್ರಹ್ಮಣ್ಯ ಸಿನಿಮಾವನ್ನು ಕಟ್ಟಿಕೊಡಲಾಗುತ್ತಿದೆ.

ಸುಬ್ರಹ್ಮಣ್ಯ ಸಿನಿಮಾದ ಫಸ್ಟ್ ಲುಕ್ ಪೋಸ್ಟರ್ ಚಿತ್ರತಂಡ ಶೀಘ್ರದಲ್ಲೇ ಅನಾವರಣಗೊಳಿಸಲು ಮುಂದಾಗಿದೆ. ಈ ಪೋಸ್ಟರ್ ಮೂಲಕ ಸುಬ್ರಹ್ಮಣ್ಯ ಪ್ರಪಂಚವನ್ನು ಚಿತ್ರತಂಡ ಪರಿಚಯಸಲು ಹೊರಟಿದೆ.

ಸೋಷಿಯೋ ಫ್ಯಾಂಟಸಿ ಅಡ್ವೆಂಚರ್ಸ್ ಸಿನಿಮಾವನ್ನು ಎಸ್ ಜಿ ಮೂವೀ ಮೇಕರ್ಸ್ ಬ್ಯಾನರ್ ನಡಿ ತಿರುಮಲ ರೆಡ್ಡಿ ಮತ್ತು ಅನಿಲ್ ಕಡಿಯಾಲ ಬಂಡವಾಳ ಹಾಕಿದ್ದು, ಪ್ರವೀಣಾ ಕಡಿಯಾಲ ಹಾಗೂ ರಮಾ ಲಕ್ಷ್ಮೀ ಪ್ರಸ್ತುತಪಡಿಸುತ್ತಿದ್ದಾರೆ.

ಸಲಾರ್ ಮತ್ತು ಕೆಜಿಎಫ್ ಸರಣಿ ಸಿನಿಮಾಗಳ ಸಂಗೀತ ನೀಡಿರುವ ರವಿ ಬಸ್ರೂರ್ ಈ ಚಿತ್ರಕ್ಕೂ ಸಂಗೀತ ನಿರ್ದೇಶನ ಮಾಡುತ್ತಿದ್ದಾರೆ. ಸುಬ್ರಹ್ಮಣ್ಯ ಸಿನಿಮಾದ ಫಸ್ಟ್ ಲುಕ್ ಬಿಡುಗಡೆಗೂ ಮುನ್ನ ಚಿತ್ರತಂಡ ಪ್ರೀ ಲುಕ್ ಅನಾವರಣ ಮಾಡಲಾಗಿದೆ. ಪಾಳು ಬಿದ್ದಿರುವ ದೇಗುಲದ ಮುಂದೆ ನಾಯಕ ಅದ್ವೆ ಕೈಯಲ್ಲಿ ಪಂಜು ಹಿಡಿದು ಬ್ಯಾಕ್ ಪೋಸ್ ಕೊಟ್ಟಿರುವ ಪ್ರೀ ಲುಕ್ ಪೋಸ್ಟರ್ ಬಿಡುಗಡೆ ಮಾಡಲಾಗಿದೆ. ಬಹಳ ಕುತೂಹಲ ಹೆಚ್ಚಿಸುವ ಪ್ರೀ ಲುಕ್ ಫಸ್ಟ್ ಲುಕ್ ಮೇಲೆ ನಿರೀಕ್ಷೆ ಹೆಚ್ಚಿಸಿದೆ. ವಿಘ್ನೇಶ್ ರಾಜ್ ಕ್ಯಾಮೆರಾ ಹಿಡಿದಿದ್ದು, ವಿಜಯ್ ಎಂ ಕುಮಾರ್ ಸಂಕಲನ ಸುಬ್ರಹ್ಮಣ್ಯ ಸಿನಿಮಾಕ್ಕಿದೆ.

# ದರ್ಶನ್ ಫ್ಯಾನ್ಸ್‌ಗೆ ಕಿಚ್ಚನ ಖಡಕ್ ರಿಪ್ಲೈ

ಸುದೀಪ್ ಪರೋಕ್ಷ ಟಾಂಗ್




ಸಿನಿಮಾಗೆ ಬರೋಲ್ಲ, ಸಿನಿಮಾ ನೋಡಲ್ಲ ಎನ್ನುವಾಗಲೇ ಗತ್ತು-ಗಾಂಭೀರ್ಯದಿಂದ ನುಗ್ಗಲಿಲ್ವಾ ಎರಡು ಸಿನಿಮಾ ಎನ್ನುವ ಮೂಲಕ ದರ್ಶನ್ ಅಭಿಮಾನಿಗಳಿಗೆ ನಟ ಸುದೀಪ್ ಪರೋಕ್ಷವಾಗಿ ಟಾಂಗ್ ಕೊಟ್ಟರು. ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಸುದೀಪ್, ಸಿನಿಮಾಗೆ ಬರೊಲ್ಲ, ಸಿನಿಮಾ ನೋಡೊಲ್ಲ ಅನ್ನೋವಾಗ್ಲೆ. ಗತ್ತು ಗಾಂಭಿರ್ಯದಿಂದ ನುಗ್ಗಲಿಲ್ವಾ ಎರಡು ಸಿನಿಮಾ ಯಾರು ಬರೊಲ್ಲ, ಬರೊಲ್ಲ ಅಂತಾ ಹೇಳ್ತಿದ್ರಲ್ಲ ಸಿನಿಮಾಗೆ ಈಗೇನ್ ಹೇಳ್ತೀರಾ ಗಣೇಶ್, ದುನಿಯಾ ವಿಜಯ್ ಸಿನಿಮಾಗಳು ಸಕ್ಸಸ್ ಆಯ್ತಲ್ಲ ಎಂದು ಚಾಟಿ ಬೀಸಿದರು. ಬಳ್ಳಾರಿ ಜೈಲಲ್ಲಿ ದರ್ಶನ್ ಬಗ್ಗೆ ಕೇಳಿದ ಪ್ರಶ್ನೆ ಕುರಿತು ಮಾತನಾಡಿ, ದರ್ಶನ್ ಅವರು ಹೊರಗಡೆ ಕರ್ಸಿ ಅಂತನಾ ನಾನು ಒಳಗಡೆ ಹೋಗ್ಲಿ ಅಂತಾ ನಾ ದರ್ಶನ್ ಅವರಿಗೆ ಅಂತಾ ಫ್ಯಾನ್ಸ್ ಇದ್ದಾರೆ, ಕುಟುಂಬ ಇದೆ. ಯಾರಿಗೂ ನೋವು ಕೊಡೋದಕ್ಕೆ ಇಷ್ಟಪಡುವುದಿಲ್ಲ. ರಾಜಕೀಯವಾಗಿ ಮಾತಾಡ್ತಿದ್ದೀನಿ ಅನ್ಕೋಬೇಡಿ. ಈ ದೇಶದಲ್ಲಿ ಇದೀವಿ ಅಂದ್ರೆ ಕಾನೂನಿನ ಮೇಲೆ ನಂಬಿಕೆ ಇರಬೇಕು ಎಂದು ಹೇಳಿದರು. ಕಾನೂನು, ಸರ್ಕಾರದ ಮೇಲೆ ನಂಬಿಕೆಯಿದೆ. ನಿಮ್ಮ ಮಾಧ್ಯಮಗಳ ಮೂಲಕವೇ ನಮಗೆ ವಿಚಾರ ಗೊತ್ತಾಗ್ತಿರೋದು. ಆಗಬೇಕಾಗಿರೋದು ಆಗುತ್ತೆ. ಕೋರ್ಟ್ ಅಂತಾ ಇರುತ್ತೆ ಎಂದು ಮಾತನಾಡಿದರು. ರಾಜಕೀಯಕ್ಕೆ ಬರ್ತಾರಾ ಸುದೀಪ್ ಎಂದು ಕೇಳಿದ ಪ್ರಶ್ನೆಗೆ, ನಾನು ಎಲ್ಲಿದ್ರೂ ಮಹಾರಾಜನೇ. ಎಲ್ಲಾ ಪಕ್ಷದಿಂದ ಆಫರ್ ಬಂದಿದೆ. ಅವಶ್ಯಕತೆ ಇದ್ದಾಗ ಕಾದು ನೋಡೋಣ ಸರ್ ಎಂದು ಉತ್ತರಿಸಿದರು.

# ಮದುವೆಯಾಗದ ಹೆಣ್ಣು ಮನೆಗೆ ಭಾರ

ಬಾಲಿವುಡ್ ನಟ ಅಮಿತಾಬ್ ಬಚ್ಚನ್ ಹಲವು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ಜೊತೆಗೆ 'ಕೌನ್ ಬನೇಗಾ ಕರೋಡ್ ಪತಿ' ಕಾರ್ಯಕ್ರಮವನ್ನು ನಿರೂಪಣೆ ಮಾಡುವ ಬಿಗ್‌ಬಿ ಸ್ಪರ್ಧಿಯೊಬ್ಬರ ಮಾತಿಗೆ ಖಡಕ್ ಆಗಿ ಉತ್ತರ ಕೊಟ್ಟಿದ್ದಾರೆ. ಮದುವೆಯಾಗದ ಹೆಣ್ಣು ಮನೆಗೆ ಭಾರ ಎಂದ ಸ್ಪರ್ಧಿಗೆ ನಟ ಕ್ಲಾಸ್ ತೆಗೆದುಕೊಂಡಿದ್ದಾರೆ. 'ಕೌನ್ ಬನೇಗಾ ಕರೋಡ್ ಪತಿ' ಸೀಸನ್ 16ಕ್ಕೆ ಕೃಷ್ಣ ಸುಲೇಖರ್ ಎಂಬುವವರು ಸ್ಪರ್ಧಿಯಾಗಿ ಭಾಗಿಯಾಗಿದ್ದರು. ತಮ್ಮ ಬದುಕಿನ ಕರಾಳ ಅಧ್ಯಾಯದ ಕುರಿತು ಮಾತನಾಡುತ್ತಿದ್ದರು. ಕರೋನಾ ಸಮಯದಲ್ಲಿ ಕೆಲಸವನ್ನು ಕಳೆದುಕೊಂಡಾಗ ತಾವು ಅನುಭವಿಸಿದ ಸಂಕಷ್ಟದ ದಿನಗಳ ಬಗ್ಗೆ ಮಾತನಾಡಿದ್ದಾರೆ. ನಾನು ಕೆಲಸ ಕಳೆದುಕೊಂಡಾಗ ನನಗೆ ಅರ್ಥವಾಗಿದ್ದು, ಏನೆಂದರೆ ಸರ್ ಹೇಗೆ ಮದುವೆಯಾಗದ ಹೆಣ್ಣು ಮಕ್ಕಳು ಮನೆಗೆ ಭಾರವಾಗಿರುತ್ತಾರೋ ಅದೇ ರೀತಿ ಕೆಲಸ ಇಲ್ಲದ ಗಂಡು ಮಕ್ಕಳು ಕೂಡ ಮನೆಗೆ ಭಾರ ಆಗುತ್ತಾರೆ ಎಂದು ಮಾತನಾಡಿದ್ದಾರೆ.

ಕೃಷ್ಣ ಸುಲೇಖರ್ ಅವರು ಆಡಿದ ಮಾತಿಗೆ ಬಿಗ್‌ಬಿ ಸೈಲೆಂಟ್ ಆದರು. ಆ ನಂತರ ಅಸಮಾಧಾನ ವ್ಯಕ್ತಪಡಿಸಿದರು. ನಾನು ನಿಮಗೆ ಒಂದು ಮಾತು ಹೇಳಲು ಬಯಸುತ್ತೇನೆ ಕೃಷ್ಣ. ಹೆಣ್ಣುಮಕ್ಕಳು ಯಾವತ್ತೂ ಕೂಡ ಮನೆಗೆ ಭಾರವಲ್ಲ ಎಂದರು. ಹೆಣ್ಣು ಮಕ್ಕಳು ಮನೆಯ ಭಾಗ್ಯ ಎಂದು ಹೇಳುವ ಮೂಲಕ ಕೃಷ್ಣ ಸುಲೇಖರ್‌ಗೆ ತಕ್ಕ ಉತ್ತರ ನೀಡಿದರು. ಬಿಗ್‌ಬಿ ಆಡಿದ ಈ ಮಾತು ಅಭಿಮಾನಿಗಳ ಮನಗೆದ್ದಿದೆ. ಈ ಹೇಳಿಕೆ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗ್ತಿದೆ.



# ಹುಲಿ ದತ್ತು ಪಡೆದ ಸಂಯುಕ್ತ



ಸಿನಿಮಾಗಳ ಹೊರತಾಗಿ ಸಾಮಾಜಿಕ ಕೆಲಸಗಳಲ್ಲಿ ತೊಡಗಿಸಿಕೊಂಡಿರುವ ನಟಿ ಸಂಯುಕ್ತ ಹೊರನಾಡು. ಪ್ರಾಣ ಅನಿಮಲ್ ಫೌಂಡೇಶನ್ ಅಡಿಯಲ್ಲಿ ಪ್ರಾಣಿಗಳ ರಕ್ಷಣೆಗೆ ಅಂಬುಲೆನ್ಸ್ ಸೇವೆ ಒದಗಿಸುವ ಮೂಲಕ ಪ್ರಾಣಿ ಪ್ರಿಯರ ಮೆಚ್ಚುಗೆ ಪಡೆದವರು ಈ ನಟಿ. ಸಂಯುಕ್ತಾ ಕೂಡ ಪ್ರಾಣಿ ಪ್ರಿಯೆ. ನಾಯಿ, ಮೊಲ ಎಂದರೆ ಸಂಯುಕ್ತಾ ಹೊರನಾಡುಗೆ ಎಲ್ಲಿಲ್ಲದ ಪ್ರೀತಿ. ಇಂತಿಪ್ಪ ಸಂಯುಕ್ತ ಹೊರನಾಡು ತಮ್ಮದೇ ಪ್ರಾಣ ಹಾಗೂ ಟೆಕೆಯಾನ್ ಸಹಯೋಗದಲ್ಲಿ ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ಹುಲಿಯನ್ನು ದತ್ತು ಪಡೆದಿದ್ದಾರೆ.

28 ತಿಂಗಳ ಸಿಂಚನ ಎಂಬ ಹೆಣ್ಣು ಹುಲಿ ಮರಿಯನ್ನು ದತ್ತು ಪಡೆದಿದ್ದಾರೆ. ಇದು ನರದೌರ್ಬಲ್ಯ ಸಮಸ್ಯೆ ಎದುರಿಸುತ್ತಿರುವುದರಿಂದ ಕಾಡಿನಲ್ಲಿ ಸ್ವಾತಂತ್ರ್ಯವಾಗಿ ವಾಸಿಸಲು ಕಷ್ಟಸಾಧ್ಯವಾಗಿರುವುದರಿಂದ ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ಸಂರಕ್ಷಣಾ ಕೇಂದ್ರ ಕಾಳಜಿ ವಹಿಸಲಾಗುತ್ತಿದೆ. ದತ್ತು ಸ್ವೀಕೃತಿಯಲ್ಲಿ ಅದರ ದಿನನಿತ್ಯದ ಆಹಾರ, ನಿರ್ವಹಣೆ ಮತ್ತು ಪಶು ಚಿಕಿತ್ಸಾವನ್ನು ಭರಿಸಲಾಗುತ್ತದೆ. ಟೆಕೆಯಾನ್ ಸಂಸ್ಥೆ ಮುಖ್ಯಸ್ಥ ರಾಣಾ ರೊಬಿಲ್ಡ್ ಮಾತನಾಡಿ, ಪ್ರಾಣ ಅನಿಮಲ್ ಫೌಂಡೇಶನ್ ಹಾಗ್ಯೆ ಬನ್ನೇರುಘಟ್ಟ ಜೈವಿಕ ಉದ್ಯಾನದ ಅಧಿಕಾರಿಗಳಿಗೆ ಈ ಅವಕಾಶ ಕೊಟ್ಟಿದ್ದಕ್ಕೆ ಧನ್ಯವಾದಗಳು. ಆರೋಗ್ಯ, ಶಿಕ್ಷಣ ಹಾಗೂ ಸಮಾನತೆ ಮತ್ತು ಸುಸ್ಥಿರತೆ ಅಖಿಖ ಮೂಲ ಉದ್ದೇಶ ಎಂದರು.

ಸಂಯುಕ್ತ ಹೊರನಾಡು ಮಾತನಾಡಿ, ಟೆಕೆಯಾನ್ ಜೊತೆ ಕೈ ಜೋಡಿಸಿರುವುದು ಖುಷಿ ಕೊಟ್ಟಿದೆ. ತೊಂದರೆ ಒಳಗಾದ ಪ್ರಾಣಿಗಳನ್ನು ದತ್ತು ಸ್ವೀಕರಿಸದಕ್ಕೆ ಟೆಕೆಯಾನ್‌ಗೆ ಧನ್ಯವಾದ ಎಂದರು.

# ಚೊಚ್ಚಲ ಪಂದ್ಯದಲ್ಲೇ ದಾಖಲೆ ಬರೆದ 17 ವರ್ಷದ ಯುವ ದಾಂಡಿಗ



ವೆಸ್ಟ್ ಇಂಡೀಸ್‌ನಲ್ಲಿ ನಡೆಯುತ್ತಿರುವ ಕೆರಿಬಿಯನ್ ಪ್ರೀಮಿಯರ್ ಲೀಗ್‌ನ ಮೊದಲ ಪಂದ್ಯದಲ್ಲೇ ಯುವ ದಾಂಡಿಗ ಜ್ಯುವೆಲ್ ಆಂಡ್ರ್ಯೂ ದಾಖಲೆ ಬರೆದಿದ್ದಾರೆ. ಅದು ಸಹ ತಮ್ಮ 17ನೇ ವಯಸ್ಸಿನಲ್ಲಿ ಅರ್ಧಶತಕ ಸಿಡಿಸುವ ಮೂಲಕ ಎಂಬುದು ವಿಶೇಷ. ಅಂಟಿಗುವಾದ ವಿವಿಯನ್ ರಿಚರ್ಡ್ಸ್ ಸ್ಟೇಡಿಯಂನಲ್ಲಿ ನಡೆದ ಸಿಪಿಎಲ್ 2024ರ ಮೊದಲ ಪಂದ್ಯದಲ್ಲಿ ಅಂಟಿಗುವಾ ಅಯಂಡ್ ಬಾರ್ಬುಡಾ ಫಾಲ್ಕನ್ಸ್ ಮತ್ತು ಸೇಂಟ್ ಕಿಟ್ಸ್ ಅಯಂಡ್ ನೆವಿಸ್ ಪೇಟ್ರಿಯಾಟ್ಸ್ ತಂಡಗಳು ಮುಖಾಮುಖಿಯಾಗಿದ್ದವು.

ಈ ಪಂದ್ಯದಲ್ಲಿ ಟಾಸ್ ಗೆದ್ದ ಸೇಂಟ್ ಕಿಟ್ಸ್ ಅಯಂಡ್ ನೆವಿಸ್ ಪೇಟ್ರಿಯಾಟ್ಸ್ ತಂಡದ ಬೌಲಿಂಗ್ ಆಯ್ದುಕೊಂಡಿತು. ಅದರಂತೆ ಇನಿಂಗ್ಸ್ ಆರಂಭಿಸಿದ ಅಂಟಿಗುವಾ ಅಯಂಡ್ ಬಾರ್ಬುಡಾ ಫಾಲ್ಕನ್ಸ್ ತಂಡವು ಉತ್ತಮ ಆರಂಭ ಪಡೆದಿರಲಿಲ್ಲ. ಇದಾಗ್ಯೂ ಮಧ್ಯಮ ಕ್ರಮಾಂಕದಲ್ಲಿ ಕಣಕ್ಕಿಳಿದ ಜ್ಯುವೆಲ್ ಆಂಡ್ರ್ಯೂ ಅದ್ಭುತ ಇನಿಂಗ್ಸ್ ಆಡಿದರು.

5ನೇ ಕ್ರಮಾಂಕದಲ್ಲಿ ಬ್ಯಾಟ್ ಬೀಸಿದ ಜ್ಯುವೆಲ್ ಆಂಡ್ರ್ಯೂ ಆರಂಭದಿಂದಲೇ ಬಿರುಸಿನ ಬ್ಯಾಟಿಂಗ್‌ಗೆ ಒತ್ತು ನೀಡಿದ್ದರು. ಅಲ್ಲದೆ ಯುವ ದಾಂಡಿಗ 30 ಎಸೆತಗಳಲ್ಲಿ 1 ಸಿಕ್ಸ್ ಹಾಗೂ 7 ಫೋರ್‌ಗಳೊಂದಿಗೆ ಅಜೇಯ 50 ರನ್ ಬಾರಿಸಿದರು. ಈ ಅರ್ಧಶತಕದೊಂದಿಗೆ ಜ್ಯುವೆಲ್ ಆಂಡ್ರ್ಯೂ ಕೆರಿಬಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಹೊಸ ಇತಿಹಾಸ ಬರೆದಿದ್ದಾರೆ. ಅಂದರೆ ಕೆರಿಬಿಯನ್ ಪ್ರೀಮಿಯರ್ ಲೀಗ್ ಇತಿಹಾಸದಲ್ಲೇ ಅರ್ಧಶತಕ ಬಾರಿಸಿದ ಅತ್ಯಂತ ಕಿರಿಯ ಬ್ಯಾಟರ್ ಎಂಬ ದಾಖಲೆ ನಿಕೋಲಸ್ ಪೂರನ್ ಹೆಸರಿನಲ್ಲಿತ್ತು. 2013 ರ ಸಿಪಿಎಲ್‌ನಲ್ಲಿ ಪೂರನ್ ಅವರು ಚೊಚ್ಚಲ ಅರ್ಧಶತಕ ಬಾರಿಸಿದಾಗ ಅವರ ವಯಸ್ಸು 17 ವರ್ಷ, 302 ದಿನಗಳು.

ಇದೀಗ ಜ್ಯುವೆಲ್ ಆಂಡ್ರ್ಯೂ 17 ವರ್ಷ, 266 ದಿನಗಳ ವಯಸ್ಸಿನಲ್ಲಿ ಚೊಚ್ಚಲ ಅರ್ಧಶತಕ ಸಿಡಿಸಿದ್ದಾರೆ. ಈ ಮೂಲಕ ಕೆರಿಬಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಹಾಫ್ ಸೆಂಚುರಿ ಬಾರಿಸಿದ ಅತ್ಯಂತ ಕಿರಿಯ ಬ್ಯಾಟರ್ ಎನಿಸಿಕೊಂಡಿದ್ದಾರೆ. ಅಷ್ಟೇ ಅಲ್ಲದೆ ಟಿ20 ಕ್ರಿಕೆಟ್ ಲೀಗ್‌ನಲ್ಲಿ ಅರ್ಧಶತಕ ಬಾರಿಸಿದ ಕಿರಿಯ ಬ್ಯಾಟರ್‌ಗಳ ಪಟ್ಟಿಯಲ್ಲಿ ದ್ವಿತೀಯ ಸ್ಥಾನ ಅಲಂಕರಿಸಿದ್ದಾರೆ.

ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವುದು ಭಾರತದ ರಿಯಾನ್ ಪರಾಗ್ ಎಂಬುದು ವಿಶೇಷ. 2019 ರಲ್ಲಿ ರಾಜಸ್ಥಾನ್ ರಾಯಲ್ಸ್ ಪರ ಕಣಕ್ಕಿಳಿದ ಪರಾಗ್ ಆಕರ್ಷಕ ಅರ್ಧಶತಕ ಬಾರಿಸಿದ್ದರು. ಈ ವೇಳೆ ಅವರ ವಯಸ್ಸು 17 ವರ್ಷ, 175 ದಿನಗಳು ಮಾತ್ರ. ಈ ಮೂಲಕ ರಿಯಾನ್ ಪರಾಗ್ ಫ್ರಾಂಚೈಸಿ ಲೀಗ್‌ನಲ್ಲಿ ಹಾಫ್ ಸೆಂಚುರಿ ಸಿಡಿಸಿದ ಅತ್ಯಂತ ಕಿರಿಯ ಬ್ಯಾಟರ್ ಎಂಬ ದಾಖಲೆ ನಿರ್ಮಿಸಿದ್ದಾರೆ.

# ಆಕರ್ಷಕ ಶತಕ ಬಾರಿಸಿದ ಸಾಯಿ

ಇಂಗ್ಲೆಂಡ್‌ನಲ್ಲಿ ನಡೆಯುತ್ತಿರುವ ಕೌಂಟಿ ಚಾಂಪಿಯನ್‌ಶಿಪ್‌ನ 53ನೇ ಪಂದ್ಯದಲ್ಲಿ ಭಾರತದ ಸಾಯಿ ಸುದರ್ಶನ್ ಆಕರ್ಷಕ ಶತಕ ಬಾರಿಸಿ ಮಿಂಚಿದ್ದಾರೆ. ನಾಟಿಂಗ್‌ಹ್ಯಾಮ್‌ನ ಟ್ರೆಂಟ್ ಬ್ರಿಡ್ಜ್ ಮೈದಾನದಲ್ಲಿ ನಡೆದ ನಾಟಿಂಗ್‌ಹ್ಯಾಮ್‌ಶೈರ್ ವಿರುದ್ಧದ ಈ ಪಂದ್ಯದಲ್ಲಿ ಟಾಸ್ ಗೆದ್ದ ಸರ್ರೆ ತಂಡವು ಮೊದಲು ಬ್ಯಾಟಿಂಗ್ ಆಯ್ದುಕೊಂಡಿತು. ಅದರಂತೆ ಇನಿಂಗ್ಸ್ ಆರಂಭಿಸಿದ ಸರ್ರೆ ತಂಡಕ್ಕೆ ನಾಯಕ ರೋರಿ ಬರ್ನ್ಸ್ ಭರ್ಜರಿ ಆರಂಭ ಒದಗಿಸಿದ್ದರು. ಆಕರ್ಷಕ ಬ್ಯಾಟಿಂಗ್‌ನೊಂದಿಗೆ ನಾಟಿಂಗ್‌ಹ್ಯಾಮ್ ಶೈರ್ ಬೌಲರ್‌ಗಳನ್ನು ದಂಡಿಸಿದ ಬರ್ನ್ಸ್ 266 ಎಸೆತಗಳಲ್ಲಿ 4 ಸಿಕ್ಸ್ ಹಾಗೂ 11 ಫೋರ್‌ಗಳೊಂದಿಗೆ 161 ರನ್ ಬಾರಿಸಿ ಔಟಾದರು.

ಇನ್ನು ಆರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಎಡಗೈ ದಾಂಡಿಗ ಸಾಯಿ ಸುದರ್ಶನ್ ಅತ್ಯಾಕರ್ಷಕ ಬ್ಯಾಟಿಂಗ್‌ನೊಂದಿಗೆ ಗಮನ ಸೆಳೆದರು. ತಾಳ್ಮೆಯುತವಾಗಿ ಬ್ಯಾಟಿಂಗ್ ಪ್ರದರ್ಶಿಸಿದ 22 ವರ್ಷದ ಸಾಯಿ 178 ಎಸೆತಗಳಲ್ಲಿ 1 ಸಿಕ್ಸ್ ಹಾಗೂ 10 ಫೋರ್‌ಗಳೊಂದಿಗೆ 105 ರನ್ ಬಾರಿಸಿದರು. ಈ ಮೂಲಕ ಚೊಚ್ಚಲ ಕೌಂಟಿ ಶತಕ ಪೂರೈಸಿ ಬ್ಯಾಟ್ ಮೇಲೆಕ್ಕೆತ್ತಿದರು. ರೋರಿ ಬರ್ನ್ಸ್ ಹಾಗೂ ಸಾಯಿ ಸುದರ್ಶನ್ ಅವರ ಈ ಶತಕಗಳೊಂದಿಗೆ ಸರ್ರೆ ತಂಡವು ಮೊದಲ ಇನಿಂಗ್ಸ್‌ನಲ್ಲಿ 525 ರನ್ ಪೇರಿಸಿ ಆಲೌಟ್ ಆಗಿದೆ. ಇದರ ಬೆನ್ನಲ್ಲೇ ಮೊದಲ ಇನಿಂಗ್ಸ್ ಆರಂಭಿಸಿರುವ ನಾಟಿಂಗ್‌ಹ್ಯಾಮ್‌ಶೈರ್ ತಂಡವು 2ನೇ ದಿನದಾಟದ ಮುಕ್ತಾಯದ ವೇಳೆಗೆ 3 ವಿಕೆಟ್ ಕಳೆದುಕೊಂಡು 144 ರನ್ ಕಲೆಹಾಕಿದೆ. ತಮಿಳುನಾಡು ಮೂಲದ ಸಾಯಿ ಸುದರ್ಶನ್ ಐಪಿಎಲ್‌ನಲ್ಲಿ ಗುಜರಾತ್ ಟೈಟಾನ್ಸ್ ತಂಡದಲ್ಲಿದ್ದಾರೆ. ಹಾಗೆಯೇ ಈ ಹಿಂದೆ ಏಷ್ಯನ್ ಗೇಮ್ಸ್‌ನಲ್ಲಿ ಭಾರತ ಟಿ20 ತಂಡವನ್ನು ಪ್ರತಿನಿಧಿಸಿದ್ದರು. ಇನ್ನು ಐಪಿಎಲ್‌ನಲ್ಲಿ ಸ್ಫೋಟಕ ಇನಿಂಗ್ಸ್‌ಗಳ ಮೂಲಕ ಗಮನ ಸೆಳೆದಿರುವ ಯುವ ಎಡಗೈ ದಾಂಡಿಗ ಬಾರಿಯ ಮೆಗಾ ಹರಾಜಿನಲ್ಲಿ ಕಾಣಿಸಿಕೊಳ್ಳುವ ಸಾಧ್ಯತೆ ಯಿದೆ.



# ಆಯುಷ್ ಬದೋನಿ ಅಬ್ಬರ ಎದುರಾಳಿ ತಂಡ ತತ್ತರ

ದೆಹಲಿ ಪ್ರೀಮಿಯರ್ ಲೀಗ್‌ನಲ್ಲಿ ನಡೆಯುತ್ತಿರುವ 23 ನೇ ಪಂದ್ಯದಲ್ಲಿ ದಕ್ಷಿಣ ದೆಹಲಿ ಸೂಪರ್‌ಸ್ಟಾರ್ಸ್ ತಂಡದ ನಾಯಕ ಆಯುಷ್ ಬದೋನಿ ಉತ್ತರ ದೆಹಲಿ ತಂಡದ ವಿರುದ್ಧ ಸಿಡಿಲಬ್ಬರದ ಬ್ಯಾಟಿಂಗ್ ನಡೆಸಿ ಕೇವಲ 55 ಎಸೆತಗಳಲ್ಲಿ 19 ಸಿಕ್ಸರ್ ಹಾಗೂ 8 ಬೌಂಡರಿ ಸಹಿತ 300 ರ ಸ್ಟ್ರೈಕ್ ರೇಟ್‌ನಲ್ಲಿ 165 ರನ್‌ಗಳ ದಾಖಲೆಯ ಇನ್ನಿಂಗ್ಸ್ ಆಡಿದ್ದಾರೆ. ಇನ್ನು ಈ ಪಂದ್ಯದಲ್ಲಿ ಬದೋನಿಗೆ ಉತ್ತಮ ಸಾಥ್ ನೀಡಿದ ಆರಂಭಿಕ ಪ್ರಿಯಾಂಶ್ ಆರ್ಯ ಕೂಡ ಅಬ್ಬರದ ಶತಕ ಸಿಡಿಸಿದ್ದು, ಈ ಇಬ್ಬರ ನೆರವಿನಿಂದಾಗಿ ದಕ್ಷಿಣ ದೆಹಲಿ ಸೂಪರ್ ಸ್ಟಾರ್ಸ್ ತಂಡ 20 ಓವರ್‌ಗಳಲ್ಲಿ ಬರೋಬ್ಬರಿ 308 ರನ್ ಕಲೆಹಾಕಿದೆ.

**55 ಎಸೆತಗಳಲ್ಲಿ 165 ರನ್**

ಈ ಪಂದ್ಯದಲ್ಲಿ ಆರಂಭಿಕರಾಗಿ ಕಣಕ್ಕಿಳಿದಿದ್ದ ಪ್ರಿಯಾಂಶ್ ಆರ್ಯ ಮತ್ತು ಸಾರ್ಥಕ್ ರೇ ಮೊದಲ ವಿಕೆಟ್‌ಗೆ ಕೇವಲ 13 ರನ್ ಜೊತೆಯಾಟ ನೀಡಲಷ್ಟೇ ಜೊತೆಯಾದರು. ಆದರೆ ಮೂರನೇ ಕ್ರಮಾಂಕದಲ್ಲಿ ಬಂದ ನಾಯಕ ಆಯುಷ್ ಬದೋನಿ ಹಾಗೂ ಪ್ರಿಯಾಂಶ್ ಆರ್ಯ ಎದುರಾಳಿ ತಂಡದ ಬೌಲರ್‌ಗಳ ಬೆವರಿಳಿಸಿದರು. ಆರಂಭದಿಂದಲೂ ಹೊಡಿಬಡಿ ಆಟಕ್ಕೆ ಮುಂದಾದ ಈ ಇಬ್ಬರು ದೆಹಲಿಯ ಅರುಣ್ ಜೇಟ್ಲಿ ಮೈದಾನದಲ್ಲಿ ರನ್‌ಗಳ ಬಿರುಗಾಳಿ ಎಬ್ಬಿಸಿದರು. ಬಂದೊಡನೆ ಹೊಡಿಬಡಿ ಆಟಕ್ಕೆ ಮುಂದಾದ ಬದೋನಿ ಈ ಲೀಗ್‌ನಲ್ಲಿ ತಮ್ಮ ಚೊಚ್ಚಲ ಶತಕವನ್ನು ದಾಖಲಿಸಿದರು. ಆ ನಂತರವೂ ತಣ್ಣಗಾಗದ ಬದೋನಿ 150 ರನ್‌ಗಳ ಗಡಿಯನ್ನು ದಾಟಿದರು. ಅಂತಿಮವಾಗಿ 19ನೇ ಓವರ್‌ನಲ್ಲಿ ವಿಕೆಟ್ ಒಪ್ಪಿಸಿದ ಬದೋನಿ 165 ರನ್‌ಗಳಿಗೆ ತಮ್ಮ ಇನ್ನಿಂಗ್ಸ್ ಕೊನೆಗಾಣಿಸಿದರು.

ಪ್ರಿಯಾಂಶ್ ಆರ್ಯ ಸಿಕ್ಸರ್ ದಾಖಲೆ

ಬದೋನಿ ಹೊರತಾಗಿ ಈ ಪಂದ್ಯದಲ್ಲಿ ಆರಂಭಿಕ ಪ್ರಿಯಾಂಶ್ ಆರ್ಯ ಕೂಡ ಶತಕದ ಇನ್ನಿಂಗ್ಸ್ ಆಡಿದರು. ಪ್ರಿಯಾಂಶ್ ಆರ್ಯ ಈ ಪಂದ್ಯದಲ್ಲಿ 50 ಎಸೆತಗಳನ್ನು ಎದುರಿಸಿ 10 ಸಿಕ್ಸರ್ ಮತ್ತು 10 ಬೌಂಡರಿಗಳ ಸಹಾಯದಿಂದ 240 ರ ಸ್ಟ್ರೈಕ್ ರೇಟ್‌ನಲ್ಲಿ 120 ರನ್ ಚಚ್ಚಿದರು. ಇದಲ್ಲದೆ ಈ ಸ್ಫೋಟಕ ಇನ್ನಿಂಗ್ಸ್‌ನಲ್ಲಿ ಪ್ರಿಯಾಂಶ್ ಒಂದೇ ಓವರ್‌ನಲ್ಲಿ 6 ಸಿಕ್ಸರ್ ಬಾರಿಸಿದ ದಾಖಲೆಯನ್ನು ನಿರ್ಮಿಸಿದರು. ಉತ್ತರ ದೆಹಲಿ ತಂಡದ ಮನನ್ ಭಾರದ್ವಾಜ್ ಬೌಲ್ ಮಾಡಿದ ಒಂದೇ ಓವರ್‌ನಲ್ಲಿ ಆರು ಸಿಕ್ಸರ್ ಬಾರಿಸಿ ಪ್ರಿಯಾಂಶ್ ದಾಖಲೆ ನಿರ್ಮಿಸಿದರು.

ಪಂದ್ಯದ 12ನೇ ಓವರ್‌ನಲ್ಲಿ ಪ್ರಿಯಾಂಶ್ ಪ್ರತಿ ಎಸೆತವನ್ನು ಸಿಕ್ಸರ್‌ಗಟ್ಟಿದರು. ಇದರೊಂದಿಗೆ ಡೆಲ್ಲಿ ಪ್ರೀಮಿಯರ್ ಲೀಗ್‌ನಲ್ಲಿ ಒಂದೇ ಓವರ್‌ನಲ್ಲಿ 6 ಸಿಕ್ಸರ್ ಬಾರಿಸಿದ ಮೊದಲ ಬ್ಯಾಟರ್ ಎನಿಸಿಕೊಂಡರು. ಇದಕ್ಕೂ ಮೊದಲು ಪ್ರಿಯಾಂಶ್, ಡೆಲ್ಲಿ ಪ್ರೀಮಿಯರ್ ಲೀಗ್‌ನಲ್ಲಿ ಶತಕ ಬಾರಿಸಿದ ಮೊದಲ ಬ್ಯಾಟ್ಸ್‌ಮನ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು.

**286 ರನ್‌ಗಳ ಜೊತೆಯಾಟ**

ಈ ಪಂದ್ಯದಲ್ಲಿ ಈ ಇಬ್ಬರು ಬ್ಯಾಟ್ಸ್‌ಮನ್‌ಗಳು ವೈಯಕ್ತಿಕ ಶತಕ ಸಿಡಿಸಿದಲ್ಲದೆ, ಎರಡನೇ ವಿಕೆಟ್‌ಗೆ 286 ರನ್‌ಗಳ ದಾಖಲೆಯ ಜೊತೆಯಾಟವನ್ನು ನೀಡಿದರು. ಇನ್ನು ದಕ್ಷಿಣ ದೆಹಲಿ ನೀಡಿರುವ 308 ರನ್‌ಗಳ ದಾಖಲೆಯ ಗುರಿ ಬೆನ್ನಟ್ಟಿರುವ ಉತ್ತರ ದೆಹಲಿ ತಂಡ ಈ ಸುದ್ದಿ ಬರೆಯುವ ವೇಳೆಗೆ ಆರಂಭಿಕ ಆಘಾತ ಎದುರಿಸಿದ್ದು, 8 ಓವರ್‌ಗಳಲ್ಲಿ ಪ್ರಮುಖ 4 ವಿಕೆಟ್ ಕಳೆದುಕೊಂಡು ಕೇವಲ 64 ರನ್ ಮಾತ್ರ ಕಲೆಹಾಕಿದೆ.



19 ಸಿಕ್ಸ್ 55 ಎಸೆತಗಳಲ್ಲಿ 165 ರನ್

# ಬಾಬರ್ ಮತ್ತೆ ಫೇಲ್

ಕೇವಲ ಒಂದೇ ಒಂದು ವರ್ಷದ ಹಿಂದೆ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ವಿರಾಟ್ ಕೊಹ್ಲಿಗೆ ಹೋಲಿಸುತ್ತಿದ್ದ ಪಾಕಿಸ್ತಾನದ ಸೀಮಿತ ಓವರ್‌ಗಳ ನಾಯಕ ಬಾಬರ್ ಆಝಂ ಸದ್ಯಕ್ಕೆ ರನ್ ಬರ ಎದುರಿಸುತ್ತಿದ್ದಾರೆ. ಬಾಂಗ್ಲಾದೇಶ ವಿರುದ್ಧದ ಎರಡು ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ಬಾಬರ್ ಆಝಂ ಅವರ ಕಳಪೆ ಪ್ರದರ್ಶನ ಮುಂದುವರೆದಿದೆ.




ಬಾಬರ್ ಅವರ ಈ ಕಳಪೆ ಪ್ರದರ್ಶನ ಹೀಗೆ ಮುಂದುವರೆದರೆ, ಟೆಸ್ಟ್ ಸ್ವರೂಪದಿಂದ ಅವರಿಗೆ ಗೇಟ್ ಪಾಸ್ ಸಿಗುವುದು ಖಚಿತ. ರಾವಲ್ಪಿಂಡಿಯಲ್ಲಿ ನಡೆಯುತ್ತಿರುವ ಎರಡನೇ ಟೆಸ್ಟ್ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಬಾಬರ್ ಆಜಂ ಕೇವಲ 31 ರನ್‌ಗಳಿಗೆ ಇನ್ನಿಂಗ್ಸ್ ಮುಗಿಸಿದ್ದಾರೆ. ಇದಕ್ಕೂ ಮುನ್ನ ನಡೆದ ಮೊದಲ ಟೆಸ್ಟ್ ಪಂದ್ಯದ ಎರಡೂ ಇನ್ನಿಂಗ್ಸ್‌ಗಳಲ್ಲಿ ಬಾಬರ್ ವಿಫಲರಾಗಿದ್ದರು. ಹೀಗಾಗಿ ಮಾಡು ಇಲ್ಲವೇ ಮಡಿ ಟೆಸ್ಟ್ ಪಂದ್ಯದಲ್ಲಾದರೂ ಬಾಬರ್ ಅಬ್ಬರಿಸುತ್ತಾರೆ ಎಂದು ನಿರೀಕ್ಷಿಸಲಾಗಿತ್ತು. ಆದರೆ ಬಾಬರ್ ಅವರ ಕಳಪೆ ಫಾರ್ಮ್ ಎರಡನೇ ಪಂದ್ಯದಲ್ಲೂ ಮುಂದುವರೆದಿದೆ.

# ಭಾರತ ಅಂಡರ್ 19 ತಂಡಕ್ಕೆ ಸಮಿತ್ ದ್ರಾವಿಡ್ ಆಯ್ಕೆ

ಭಾರತದಲ್ಲಿ ನಡೆಯಲಿರುವ ಆಸ್ಟ್ರೇಲಿಯಾ ಕಿರಿಯರ ತಂಡದ ವಿರುದ್ಧದ ಸರಣಿಗಾಗಿ ಟೀಮ್ ಇಂಡಿಯಾ ಕಿರಿಯರ ಬಳಗವನ್ನು ಹೆಸರಿಸಲಾಗಿದೆ. ಈ ತಂಡಗಳಲ್ಲಿ ಕರ್ನಾಟಕದ ನಾಲ್ವರು ಆಟಗಾರರು ಸ್ಥಾನ ಪಡೆದಿದ್ದಾರೆ. ಇವರಲ್ಲಿ ಲೆಜೆಂಡ್ ರಾಹುಲ್ ದ್ರಾವಿಡ್ ಅವರ ಪುತ್ರ ಸಮಿತ್ ದ್ರಾವಿಡ್ ಕೂಡ ಕಾಣಿಸಿಕೊಂಡಿದ್ದಾರೆ.

ಆಸ್ಟ್ರೇಲಿಯಾ ಕಿರಿಯರ ತಂಡದ ವಿರುದ್ಧದ ಸರಣಿಗಾಗಿ ಭಾರತ ಅಂಡರ್ 19 ತಂಡವನ್ನು ಪ್ರಕಟಿಸಲಾಗಿದೆ. ಏಕದಿನ ಹಾಗೂ ಟೆಸ್ಟ್ (4 ದಿನದಾಟ) ಸರಣಿಗಾಗಿ ಆಯ್ಕೆ ಮಾಡಲಾದ ಈ ತಂಡಗಳಲ್ಲಿ ಟೀಮ್ ಇಂಡಿಯಾದ ಮಾಜಿ ಕೋಚ್ ರಾಹುಲ್ ದ್ರಾವಿಡ್ ಅವರ ಸುಪುತ್ರ ಸಮಿತ್ ದ್ರಾವಿಡ್ ಸ್ಥಾನ ಪಡೆದಿದ್ದಾರೆ. ಸಮಿತ್ ಅವರಲ್ಲದೆ ಕರ್ನಾಟಕದ ಯುವ ಆಟಗಾರರಾದ ಕಾರ್ತಿಕೇಯ ಕೆಪಿ, ಸಮರ್ಥ್ ಎನ್ ಹಾಗೂ ಹಾರ್ದಿಕ್ ರಾಜ್ ಕೂಡ ಕಿರಿಯರ ಟೀಮ್ ಇಂಡಿಯಾಗೆ ಆಯ್ಕೆಯಾಗಿರುವುದು ವಿಶೇಷ.

15 ಸದಸ್ಯರ ಏಕದಿನ ತಂಡದ ನಾಯಕರಾಗಿ ಉತ್ತರ ಪ್ರದೇಶದ ಯುವ ಆಟಗಾರ ಮೊಹಮ್ಮದ್ ಅಮಾನ್ ಆಯ್ಕೆಯಾಗಿದ್ದು, ಇನ್ನು ಉಪನಾಯಕನಾಗಿ ಗುಜರಾತ್‌ನ ರುದ್ರ ಪಟೇಲ್ ಕಾಣಿಸಿಕೊಳ್ಳಲಿದ್ದಾರೆ. ಹಾಗೆಯೇ ಟೆಸ್ಟ್ ತಂಡದ ನಾಯಕತ್ವವನ್ನು ಮಧ್ಯ ಪ್ರದೇಶದ ಸೋಹಮ್ ಪಟವರ್ಧನ್‌ಗೆ ನೀಡಲಾಗಿದ್ದು, ಉಪನಾಯಕನಾಗಿ ಪಂಜಾಬ್‌ನ ವಿಹಾನ್ ಮಲ್ಹೋತ್ರಾ ಆಯ್ಕೆಯಾಗಿದ್ದಾರೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA,
No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966